ಸಂಪುಟ: 21, ಸಂಚಿಕೆ: 293, ಪುಟಗಳು: 8, ಬುಧವಾರ, 31 ಜುಲೈ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3



ವೇಣು ಸಾರಥ್ಯದಲ್ಲಿ...




**ಸುಭಾಷಿತ**

ಮನಸ್ಸಿನ ವಿಕಸವು ಮಾನವನ ಅಸ್ತಿತ್ವದ ಅಂತಿಮ ಗುರಿಯಾಗಿರಬೇಕು.
। ಡಾ.ಬಿ.ಆರ್.ಅಂಬೇಡ್ಕರ್

**ಪಂಚಾಂಗ**

(ಬುಧವಾರ 31, ಜುಲೈ-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯನ, ಗ್ರೀಷ್ಮ ಋತು,
- ಆಷಾಡ ಮಾಸ, ಕೃಷ್ಣ ಪಕ್ಷ,
- ಬುಧವಾರ, ಏಕಾದಶಿ ತಿಥಿ
- ರೋಹಿಣಿ ನಕ್ಷತ್ರ :
- ರಾಹುಕಾಲ : 12:29 ರಿಂದ 2:04
- ಗುಳಿಕಕಾಲ : 10:54 ರಿಂದ 12:29
- ಯಮಗಂಡಕಾಲ : 7:44 ರಿಂದ 9:19

## ಗುಡ್ಡ ಕುಸಿತದಿಂದ ಮೃತಪಟ್ಟವರ ಸಂಖ್ಯೆ 146ಕ್ಕೆ ಏರಿಕೆ

# ಕೋಳಿಕ್ಕೋಡ್‌ನಲ್ಲಿ 9 ಬಾರಿ ಭೂಕುಸಿತ

**ಕೇರಳ:** ವಯನಾಡಿನಲ್ಲಿ ಸಂಭವಿಸಿದ ಗುಡ್ಡ ಕುಸಿತದಲ್ಲಿ ಸಿಲುಕಿ ಮೃತಪಟ್ಟವರ ಸಂಖ್ಯೆ 146ಕ್ಕೆ ಏರಿಕೆಯಾಗಿದೆ. ಕೋಳಿಕ್ಕೋಡ್‌ನಲ್ಲಿ 9 ಬಾರಿ ಭೂಕುಸಿತ ಸಂಭವಿಸಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಪ್ರಧಾನಿ ನರೇಂದ್ರ ಮೋದಿ ಮೃತರ ಕುಟುಂಬಕ್ಕೆ ತಲಾ 2 ಲಕ್ಷ ರೂ. ನೆರವು ನೀಡುವುದಾಗಿ ಘೋಷಿಸಿದ್ದಾರೆ. ಶಾಲಾ, ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ.

ನೂರಾರು ಮಂದಿ ಇನ್ನೂ ಅವಶೇಷಗಳಡಿ ಸಿಲುಕಿರುವುದರಿಂದ, ಸಾವುನೋವುಗಳ ಭೀತಿಯನ್ನು ಹುಟ್ಟುಹಾಕಿದೆ, ಸೇನೆ ಮತ್ತು ಎನ್‌ಡಿಆರ್‌ಎಫ್ ಸೇರಿದಂತೆ ರಕ್ಷಣಾ ಏಜೆನ್ಸಿಗಳು ರಕ್ಷಣಾ ಕಾರ್ಯಾಚರಣೆಯನ್ನು ಪುನರಾರಂಭಿಸಿವೆ. ಭೂಕುಸಿತದಿಂದ ಹಲವು ಮನೆಗಳು, ಮರಗಳು, ಹಸು, ನಾಯಿಗಳು, ಜನರು ಸೇರಿದಂತೆ ಎಲ್ಲವೂ ಕೊಚ್ಚಿಕೊಂಡು ಹೋಗಿವೆ. ವಯನಾಡ್ ಮತ್ತು ಕೇರಳದ ಎಲ್ಲಾ ಉತ್ತರ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಿದೆ.

24 ಗಂಟೆಗಳಲ್ಲಿ 20 ಸೆಂ.ಮೀ ಗಿಂತ ಹೆಚ್ಚು ಮಳೆಯಾಗುವ ನಿರೀಕ್ಷೆಯೊಂದಿಗೆ ಈ ಪ್ರದೇಶಗಳಲ್ಲಿ ಅತ್ಯಂತ ಭಾರೀ ಮಳೆಯಾಗುವ ನಿರೀಕ್ಷೆಯಿದೆ ಎನ್ನಲಾಗಿದೆ. ಈವರೆಗೆ 48 ಮಂದಿಯ ಮೃತದೇಹಗಳನ್ನು ಗುರುತಿಸಲಾಗಿದೆ. ಪತ್ತೆಯಾದ 96 ಮೃತದೇಹಗಳ ಮರಣೋತ್ತರ ಪರೀಕ್ಷೆ ಕೂಡ ಪೂರ್ಣಗೊಂಡಿದೆ. ಈ ಪೈಕಿ 32 ಮೃತದೇಹಗಳನ್ನು ಅವರ ಸಂಬಂಧಿಕರಿಗೆ ಹಸ್ತಾಂತರಿಸಲಾಗಿದೆ. ಮೆಪ್ಪಾಡಿ ಸಾಮಾಜಿಕ ಆರೋಗ್ಯ ಕೇಂದ್ರದಲ್ಲಿ ಸದ್ಯ 78 ಮೃತದೇಹಗಳಿವೆ. ನಿಲಂಬೂರ್ ಜಿಲ್ಲಾಸ್ಪತ್ರೆಯಲ್ಲಿ 32 ಮೃತ ದೇಹಗಳನ್ನು ಇಡಲಾಗಿದೆ ಎಂದು ವರದಿಯಾಗಿದೆ.

ರಾಜ್ಯಾದ್ಯಂತ 118 ಶಿಬಿರಗಳು ಕಾರ್ಯನಿರ್ವಹಿಸುತ್ತಿವೆ. ಒಟ್ಟು 5,531 ಮಂದಿ ಶಿಬಿರಗಳಲ್ಲಿದ್ದಾರೆ. ಅಗ್ನಿಶಾಮಕ ದಳ, ಎನ್‌ಡಿಆರ್‌ಎಫ್, ಪೊಲೀಸ್ ಮುಂತಾದ ವಿವಿಧ ಪಡೆಗಳು ಸಂಘಟಿತರಾಗಿ ಕಾರ್ಯನಿರ್ವಹಿಸುತ್ತಿವೆ. ಸೇನೆ ಮತ್ತು ನೌಕಾಪಡೆಯ ವಿವಿಧ ತುಕಡಿಗಳು ರಕ್ಷಣಾ ಕಾರ್ಯಾಚರಣೆಗೆ ಧಾವಿಸಿವೆ.

ಕೋಳಿಕ್ಕೋಡ್‌ನ ವನಿಮೆಲ್ ಪಂಚಾಯತ್‌ನಲ್ಲಿ ಸತತ 9 ಬಾರಿ ಭೂಕುಸಿತ ಸಂಭವಿಸಿದೆ. ಘಟನೆಯು ನಸುಕಿನಲ್ಲಿ ನಡೆಯುತ್ತದೆ. ಇಲ್ಲಿ 12 ಮನೆಗಳು ಕೊಚ್ಚಿ ಹೋಗಿವೆ ಎಂದು ವರದಿಯಾಗಿದೆ. ಭೂಕುಸಿತದಲ್ಲಿ ಒಬ್ಬರು ನಾಪತ್ತೆಯಾಗಿದ್ದಾರೆ ಎನ್ನಲಾಗಿದೆ. ಎರಡು ಸೇತುವೆಗಳಿಗೆ ಹಾನಿಯಾಗಿದೆ.



## ಇಂದು ರಾಹುಲ್ ಗಾಂಧಿ ಭೇಟಿ

**ವಯನಾಡು:** ಲೋಕಸಭೆಯ ವಿರೋಧ ಪಕ್ಷದ ನಾಯಕ ಹಾಗೂ ವಯನಾಡಿನ ಮಾಜಿ ಸಂಸದ ರಾಹುಲ್ ಗಾಂಧಿ ಇಂದು ಕೇರಳದ ವಯನಾಡು ಭೂಕುಸಿತ ಪ್ರದೇಶಗಳಿಗೆ ಭೇಟಿ ನೀಡಲಿದ್ದಾರೆ. ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಇಂದು ಬೆಳಗ್ಗೆ ದೆಹಲಿಯಿಂದ ವಿಶೇಷ ವಿಮಾನದಲ್ಲಿ ಮೈಸೂರಿಗೆ ತೆರಳಲಿದ್ದಾರೆ. ನಂತರ ರಸ್ತೆ ಮಾರ್ಗವಾಗಿ ಕೇರಳದ ಪ್ರವಾಹಪೀಡಿತ ಪ್ರದೇಶವಾದ ಮೆಪ್ಪಾಡಿ ತಲುಪಲಿದ್ದಾರೆ. ನಂತರ ವಯನಾಡು, ಮೆಪ್ಪಾಡಿಯಲ್ಲಿ ಕಾರ್ಯಾಚರಿಸುತ್ತಿರುವ ವಿವಿಧ ಪರಿಹಾರ ಶಿಬಿರಗಳಿಗೆ ಭೇಟಿ ನೀಡಲಿದ್ದಾರೆ. ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿರುವ ವಿಮ್ಸ್ ಆಸ್ಪತ್ರೆಗೆ ಕೂಡ ರಾಹುಲ್ ಭೇಟಿ ನೀಡಲಿದ್ದಾರೆ. ಮಧ್ಯಾಹ್ನ 2.30ಕ್ಕೆ ಮೆಪ್ಪಾಡಿಯಿಂದ ಮೈಸೂರಿಗೆ ಹಿಂತಿರುಗುವ ರಾಹುಲ್ ಗಾಂಧಿ ಸಂಜೆ ದೆಹಲಿಗೆ ವಾಪಸಾಗಲಿದ್ದಾರೆ.



ಭೂಕುಸಿತದ ಬಗ್ಗೆ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಮತ್ತು ವಯನಾಡ್ ಜಿಲ್ಲಾಧಿಕಾರಿ ಅವರೊಂದಿಗೆ ರಾಹುಲ್ ಗಾಂಧಿ ಮಂಗಳವಾರ ದೂರವಾಣಿ ಮೂಲಕ ಮಾತನಾಡಿದ್ದಾರೆ. ರಕ್ಷಣಾ ಕಾರ್ಯಾಚರಣೆಗೆ ಅಗತ್ಯವಿರುವ ಎಲ್ಲ ತುರ್ತು ನೆರವು ನೀಡಲಾಗುವುದು ಎಂದು ತಿಳಿಸಿದ್ದಾರೆ. ವಯನಾಡಿನಲ್ಲಿ ಸಂಭವಿಸಿದ ಅನಾಹುತಕ್ಕೆ ಸಂತಾಪ ವ್ಯಕ್ತಪಡಿಸಿದ ಅವರು, ವಯನಾಡಿನಲ್ಲಿ ತಕ್ಷಣದ ಮಧ್ಯಸ್ಥಿಕೆಗೆ ಕೇಂದ್ರ ಸಚಿವರೊಂದಿಗೆ ಮಾತನಾಡುವುದಾಗಿ ಮತ್ತು ಯುಡಿಎಫ್ ಕಾರ್ಯಕರ್ತರು ನೇರವಾಗಿ ರಕ್ಷಣಾ ಕಾರ್ಯಾಚರಣೆಗೆ ಬರಬೇಕು ಎಂದು ಹೇಳಿದ್ದಾರೆ.

ಈ ಬಾರಿ ವಯನಾಡು ಲೋಕಸಭಾ ಉಪಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಪ್ರಿಯಾಂಕಾ ಗಾಂಧಿ ಕೂಡ ರಾಹುಲ್ ಗಾಂಧಿಯ ಜೊತೆಗೆ ವಯನಾಡಿಗೆ ಭೇಟಿ ನೀಡಲಿದ್ದಾರೆ. ಪುಟ 2

## ಜಲಸಮಾಧಿಯಾದ ಕರ್ನಾಟಕದ ದಂಪತಿ

**ಚಾಮರಾಜನಗರ:** ಕೇರಳದ ವಯನಾಡಿನಲ್ಲಿ ಸಂಭವಿಸಿರುವ ಘೋರ ಗುಡ್ಡ ಕುಸಿತದಲ್ಲಿ ಚಾಮರಾಜನಗರ ಜಿಲ್ಲೆಯ ನಾಲ್ವರು ಮೃತಪಟ್ಟಿದ್ದಾರೆ. 50 ವರ್ಷದ ರಾಜೇಂದ್ರ, 45 ವರ್ಷದ ರತ್ನಮ್ಮ, 62 ವರ್ಷದ ಪುಟ್ಟಸಿದ್ದಶೆಟ್ಟಿ ಮತ್ತು 50 ವರ್ಷದ ರಾಣಿ ಎಂಬವರು ಸಾವನಪ್ಪಿದ್ದಾರೆ. ಇವರೆಲ್ಲರೂ ಚಾಮರಾಜನಗರ ಜಿಲ್ಲೆಯವರು. ರಾಜೇಂದ್ರ ಮತ್ತು ರತ್ನಮ್ಮ ದಂಪತಿ ಮೂಲತಃ ಚಾಮರಾಜನಗರ ತಾಲೂಕಿನ ಇರಸವಾಡಿ ನಿವಾಸಿಗಳಾಗಿದ್ದು, ವಯನಾಡಿನ ಚೂರಲ್ ಮಲೈನಲ್ಲಿ ವಾಸವಾಗಿದ್ದರು.

ಕೂಲಿ ಮಾಡಿ ಕೇರಳದಲ್ಲಿ ಬದುಕು ಕಟ್ಟಿಕೊಂಡಿದ್ದ ದಂಪತಿ ಆರು ತಿಂಗಳ ಹಿಂದೆಯಷ್ಟೇ ಹೊಸಮನೆ ಖರೀದಿಸಿದ್ದರು. ಸಂಬಂಧಿಕರು, ಸ್ನೇಹಿತರನ್ನು ಕರೆದು ಗೃಹಪ್ರವೇಶ ಕಾರ್ಯಕ್ರಮವನ್ನು ಅದ್ಧೂರಿಯಾಗಿ ಮಾಡಿದ್ದರು. ಈಗ ದುರಂತದಲ್ಲಿ ದಂಪತಿ ಮನೆ ಸಮೇತ ಜಲಸಮಾಧಿಯಾಗಿದ್ದಾರೆ. ಈ ಇಬ್ಬರ ಮೃತದೇಹಗಳಿಗಾಗಿ ಶೋಧ ಕಾರ್ಯಾಚರಣೆ ನಡೆಯುತ್ತಿದೆ.

ಚಾಮರಾಜನಗರದ ಜಿಲ್ಲೆಯ ತ್ರಯಂಬಕಪುರದ ಸ್ವಾಮಿಶೆಟ್ಟಿ ಎಂಬವರು ಗಂಭೀರವಾಗಿ ಗಾಯಗೊಂಡಿದ್ದಾರೆ. ವಯನಾಡು ಜಿಲ್ಲೆಯ ಮೆಪ್ಪಾಡಿಯ ವೈತ್ರಿ ತಾಲೂಕು ಆಸ್ಪತ್ರೆಯಲ್ಲಿ ಮೃತರ ಮರಣೋತ್ತರ ಪರೀಕ್ಷೆ ನಡೆಸಲಾಗಿದ್ದು, ಗುಂಡ್ಲುಪೇಟೆ ತಹಶೀಲ್ದಾರ್ ರಮೇಶ್ ಬಾಬು ಮೃತರ ಕುಟುಂಬದವರ ಜತೆ ಸಂಪರ್ಕದಲ್ಲಿದ್ದಾರೆ. ಪುಟ 2



## ಸಂಕ್ಷಿಪ್ತ ಸುದ್ದಿ

### ಮಹಿಳೆಯನ್ನು ಹತ್ಯೆಗೈದು ಮೃತದೇಹ ಗಂಗಾ ನದಿಗೆ ಎಸೆದ ದುಷ್ಕರ್ಮಿಗಳು



**ಉತ್ತರಪ್ರದೇಶ:** ನಾಲ್ವರು ಪುರುಷರು ಮಹಿಳೆಯ ಶವವೊಂದನ್ನು ದೋಣಿಯಲ್ಲಿ ಸಾಗಿಸಿ ಗಂಗಾ ನದಿಗೆ ಎಸೆದಿರುವ ಘಟನೆ ಉತ್ತರ ಪ್ರದೇಶದ ಹಾಪುರ್‌ನಲ್ಲಿ ನಡೆದಿದೆ. ಘಟನೆಗೆ ಸಂಬಂಧಿಸಿದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಭಾರೀ ವೈರಲ್ ಆಗಿದೆ. ವಿಡಿಯೋ ವೈರಲ್ ಆದ ಬೆನ್ನಲ್ಲೇ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಪುಟ 2

### ಟಿಕೆಟ್ ದರ ಏರಿಕೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ ಕೆಎಸ್‌ಆರ್‌ಟಿಸಿ, ಬಿಎಂಟಿಸಿ



**ಬೆಂಗಳೂರು:** ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ನಾಲ್ಕು ಸಾರಿಗೆ ನಿಗಮಗಳು ಬಸ್ ಟಿಕೆಟ್ ದರ ಏರಿಕೆ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿವೆ. ಬಿಎಂಟಿಸಿ ಬರೋಬ್ಬರಿ ಶೇ 37 ರಷ್ಟು ಟಿಕೆಟ್ ದರ ಹೆಚ್ಚಳ ಮಾಡಬೇಕೆಂದು ಪ್ರಸ್ತಾವನೆ ಸಲ್ಲಿಸಿದ್ದರೆ, ಕೆಎಸ್‌ಆರ್‌ಟಿಸಿ ಶೇ೩೦ರಷ್ಟು, ಎನ್‌ಡಬ್ಲ್ಯೂಕೆಆರ್‌ಟಿಸಿ ಶೇ 30 ಹಾಗೂ ಕೆಕೆಆರ್‌ಟಿಸಿ ಶೇ 30 ರಷ್ಟು ಟಿಕೆಟ್ ದರ ಏರಿಕೆ ಮಾಡುವಂತೆ ಪ್ರಸ್ತಾವನೆಯನ್ನು ಸಲ್ಲಿಕೆ ಮಾಡಿವೆ. ನಾಲ್ಕು ನಿಗಮಗಳಿಂದ ಒಟ್ಟಾಗಿ ಬರೋಬ್ಬರಿ ಶೇ 127 ರಷ್ಟು ದರ ಏರಿಕೆ ಪ್ರಸ್ತಾವನೆ ಸಲ್ಲಿಕೆಯಾಗಿದೆ. ಬಿಎಂಟಿಸಿ ಬಸ್ ಟಿಕೆಟ್ ದರ ಏರಿಕೆ ಮಾಡಿ ಬರೋಬ್ಬರಿ 10 ವರ್ಷಗಳಾಗಿದ್ದರೆ ಇತ್ತ ಕೆಎಸ್‌ಆರ್‌ಟಿಸಿ ಹಾಗೂ ಎನ್‌ಡಬ್ಲ್ಯೂಕೆಎಸ್‌ಆರ್‌ಟಿಸಿ ಪುಟ 2

## ನೀಟ್ ಪರೀಕ್ಷೆ ವಿವಾದ; ಮೆಡಿಕಲ್, ಎಂಜಿನಿಯರಿಂಗ್ ಸೀಟ್ ಗೊಂದಲ

# ವಾರದಲ್ಲಿ ದಿನಾಂಕ ಪ್ರಕಟ

**ಬೆಂಗಳೂರು:** ವೈದ್ಯಕೀಯ ಓದುವ ಕನಸು ಕಂಡಿರುವ ಪೋಷಕರು ಹಾಗೂ ವಿದ್ಯಾರ್ಥಿಗಳು ಆತಂಕಗೊಂಡಿದ್ದಾರೆ. ಮೆಡಿಕಲ್ ಸೀಟ್ ಗೊಂದಲದಲ್ಲಿ ಎಂಜಿನಿಯರಿಂಗ್ ಸೀಟ್ ಪಡೆಯಲು ಪೋಷಕರು ಮುಂದಾಗುತ್ತಿದ್ದಾರೆ. ಪೋಷಕರಿಗೆ ತಮ್ಮ ಮಕ್ಕಳನ್ನು ಓದಿಸಲು ವೈದ್ಯಕೀಯ ಸೀಟ್ ಸಿಗುತ್ತ ಇಲ್ಲ. MBBS ಸೀಟ್ ಸಿಗದೆ ಇದ್ರೆ, ಎಂಜಿನಿಯರಿಂಗ್ ಸೀಟ್ ಪಡೆದುಕೊಳ್ಳುವುದು ಉತ್ತಮ ಎಂಬ ಗೊಂದಲ ಎದುರಾಗಿದೆ. ಈಗಾಗಲೇ ಕೆಇಎ ಮೊದಲ ಸುತ್ತಿನ ಸೀಟು ಹಂಚಿಕೆಗೆ ಆದ್ಯತೆಗಳನ್ನು ದಾಖಲಿಸಲು ಎಂಜಿನಿಯರಿಂಗ್, ಪಶುವೈದ್ಯಕೀಯ ಇತ್ಯಾದಿ ಕೋರ್ಸ್‌ಗಳಿಗೆ ಅವಕಾಶ ನೀಡಿದೆ. ಆದರೆ ಇನ್ನೂ ನೀಟ್ ಪರೀಕ್ಷೆ ಫಲಿತಾಂಶದ ಪಟ್ಟಿ ಕೆಇಎಗೆ ಹಸ್ತಾಂತರಿಸದ ಹಿನ್ನಲೆ ವೈದ್ಯಕೀಯ ಸೀಟ್ ಹಂಚಿಕೆಗೆ ಆದ್ಯತೆಗಳನ್ನು ದಾಖಲಿಸಲು ಅವಕಾಶ ನೀಡಿಲ್ಲ. ಹೀಗಾಗಿ ಮೆಡಿಕಲ್ ಓದುವ ವಿದ್ಯಾರ್ಥಿಗಳು ಆತಂಕದಲ್ಲಿದ್ದಾರೆ.




ಎಂಜಿನಿಯರಿಂಗ್ ಕೋರ್ಸ್‌ಗೆ ಆದ್ಯತೆ ಆಯ್ಕೆ ಮಾಡಬೇಕಾ ಬೇಡ್ವಾ ಈಗ ಮಾಡದೆ ವೈದ್ಯಕೀಯ ಸೀಟ್ ಸಿಗದೆ ಇದ್ರೆ, ಈ ಕಡೆ ಎಂಜಿನಿಯರಿಂಗ್ ಸೀಟ್ ಕೂಡಾ ಇಲ್ಲದಂತಾಗುತ್ತೆ. ಹೀಗಾಗಿ ಆದ್ಯತೆ ನೀಡಬೇಕಾ ಬೇಡ್ವಾ ಎಂಬ ಆತಂಕದಲ್ಲಿ ಪೋಷಕರಿದ್ದಾರೆ. ಪುಟ 2



## ಭಾರಿ ಮಳೆಗೆ ಹಂಪಿಯ 12 ಸ್ಮಾರಕಗಳು ಮುಳುಗಡೆ

**ಹೊಸಪೇಟೆ:** ಭಾರಿ ಮಳೆಯಾಗುತ್ತಿದ್ದು, ಒಳ ಹರಿವು ಹೆಚ್ಚಿರುವ ಕಾರಣ ತುಂಗಭದ್ರಾ ಅಣೆಕಟ್ಟೆಯಿಂದ 1.6 ಲಕ್ಷ ಕ್ಯೂಸೆಕ್‌ಗೂ ಅಧಿಕ ನೀರು ಬಿಡಲಾಗುತ್ತಿದೆ. ಪರಿಣಾಮವಾಗಿ ಐತಿಹಾಸಿಕ ಪ್ರಸಿದ್ಧ ಪ್ರವಾಸಿ ತಾಣ ಹಂಪಿಯ ಹಲವು ಸ್ಮಾರಕಗಳು ಮುಳುಗಡೆಯಾಗಿವೆ. ಹಂಪಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಿಗೆ ಭೇಟಿ ನೀಡುವಾಗ ನದಿಯ ಸಮೀಪ ಎಲ್ಲೆಂದರಲ್ಲಿ ಪ್ರಯಾಣಿಸದಂತೆ ಪ್ರವಾಸಿಗರಿಗೆ ವಿಜಯನಗರ ಆಡಳಿತ ಎಚ್ಚರಿಕೆ ನೀಡಿದೆ. ಪುಟ 2

## ಮಹಿಳೆಯನ್ನು ಕಾಪಾಡಲು ಹೋಗಿ ಇಬ್ಬರು ಭೀಮಾ ನದಿಪಾಲು

**ಕಲಬುರಗಿ:** ಭೀಮಾ ನದಿಗೆ ಹಾರಿ ಆತ್ಮಹತ್ಯೆಗೆ ಯತ್ನಿಸಿದ್ದ ಮಹಿಳೆಯನ್ನು ಕಾಪಾಡಲು ಹೋಗಿ ಇಬ್ಬರು ನೀರು ಪಾಲಾಗಿರುವ ಘಟನೆ ಕಲಬುರಗಿಯ ಆಲಮೇಲ ತಾಲೂಕಿನ ದೇವಣಗಾಂವ್ ಬಳಿಯ ಅಫಜಲಪುರ-ದೇವಣಗಾಂವ್ ಬ್ರಿಡ್ಜ್ ಬಳಿ ನಡೆದಿದೆ. ಶಿವು ಹಾಗೂ ರಾಜು ಮೃತ ದುರ್ದೈವಿಗಳು. ಕೌಟುಂಬಿಕ ಕಲಹ ಹಿನ್ನೆಲೆಯಲ್ಲಿ ಮೃತ ಶಿವು ಪತ್ನಿ ಲಕ್ಷ್ಮಿ ಮಂಗಳವಾರ ಸಂಜೆ ಅಫಜಲಪುರ-ದೇವಣಗಾಂವ್ ಬ್ರಿಡ್ಜ್ ಮೇಲಿಂದ ನದಿಗೆ ಹಾರಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಲಕ್ಷ್ಮಿಯನ್ನು ಉಳಿಸಲು ಪತಿ ಶಿವು ಹಾಗು ಆತನ ಸಂಬಂಧಿ ನದಿಗೆ ಹಾರಿದ್ದಾರೆ.

ಕೂಡಲೆ ಮೀನುಗಾರರು ನದಿಗೆ ಹಾರಿದ್ದು, ಲಕ್ಷ್ಮಿಯನ್ನು ಕಾಪಾಡಿದ್ದಾರೆ. ಪುಟ 2





## ಹಮಾಸ್ ಮುಖ್ಯಸ್ಥ ಇಸ್ಮಾಯಿಲ್ ಹತ್ಯೆ

**ಟೆಲ್ ಅವಿವ್:** ಇರಾನ್ ರಾಜಧಾನಿ ಟೆಹ್ರಾನ್‌ನಲ್ಲಿ ಹಮಾಸ್‌ನ ಪೊಲಿಟಿಕಲ್ ಬ್ಯೂರೋ ಮುಖ್ಯಸ್ಥ ಹನಿಯೆಹ್ ಅವರ ಹತ್ಯೆಯಾಗಿದೆ. ಇದೇ ವೇಳೆ ಅವರ ಅಂಗರಕ್ಷಕರಲ್ಲಿ ಒಬ್ಬರು ಸಾವನ್ನಪ್ಪಿದ್ದಾರೆ ಎಂದು ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಹೇಳಿಕೆ ಬಿಡುಗಡೆಮಾಡಿರುವುದಾಗಿ ವರದಿಯಾಗಿದೆ.



ಹಮಾಸ್ ಮುಖ್ಯಸ್ಥ ಇಸ್ಮಾಯಿಲ್ ಹನಿಯಾ ಇರಾನ್‌ನ ಚುನಾಯಿತ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರ ಪ್ರಮಾಣವಚನ ಸಮಾರಂಭದಲ್ಲಿ ಪಾಲ್ಗೊಳ್ಳಲು ಟೆಹ್ರಾನ್‌ನಲ್ಲಿದ್ದರು. ಅವರೊಂದಿಗೆ ಓರ್ವ ಅಂಗರಕ್ಷಕರೂ ಇದ್ದರು. ಕಾರ್ಯಕ್ರಮದ ನಂತರ ಅವರ ನಿವಾಸದ ಮೇಲೆ ನಡೆದ ದಾಳಿಯಲ್ಲಿ ಸಾವನ್ನಪ್ಪಿದ್ದಾರೆ ಎಂದು ಹಮಾಸ್ ಹೇಳಿಕೆಯಲ್ಲಿ ತಿಳಿಸಿದೆ. ದಾಳಿಯ ಕುರಿತು ತನಿಖೆ ನಡೆಸಲಾಗುತ್ತಿದ್ದು, ಫಲಿತಾಂಶವನ್ನು ನಂತರ ಪ್ರಕಟಿಸುವುದಾಗಿ ಹೇಳಿದೆ ಎಂದು ತಿಳಿದುಬಂದಿದೆ.

ಕಳೆದ ಅಕ್ಟೋಬರ್ 7ರ ಇಸ್ರೇಲ್ ಮೇಲೆ ನಡೆದ ದಾಳಿಯ ನಂತರ ಇಸ್ಮಾಯಿಲ್ ಹನಿಯೆಹ್ ಅವರನ್ನು ಕೊಂದು ಹಮಾಸ್ ಗುಂಪನ್ನು ನಾಶಮಾಡುವುದಾಗಿ ಇಸ್ರೇಲ್ ಪ್ರತಿಜ್ಞೆ ಮಾಡಿತ್ತು. ಇದರ ಪರಿಣಾಮವಾಗಿ 1,195 ಜನರು ಸಾವನ್ನಪ್ಪಿದರು, ಹೆಚ್ಚಾಗಿ ನಾಗರಿಕರು ಮೃತಪಟ್ಟಿದ್ದರು. ಪುಟ 2

## ಆಗಸ್ಟ್ 6ರಿಂದ ನಾಗಸಂದ್ರ-ಮಾದಾವರ ಮಾರ್ಗದಲ್ಲಿ

# ಮೆಟ್ರೋ ಪ್ರಾಯೋಗಿಕ ಸಂಚಾರ ಆರಂಭ

**ಬೆಂಗಳೂರು:** ನಾಗಸಂದ್ರದಿಂದ ಮಾದಾವರವರೆಗಿನ ಗ್ರೀನ್ ಲೈನ್ ವಿಸ್ತರಣೆಗೆ ನಮ್ಮ ಮೆಟ್ರೋ ಆಗಸ್ಟ್ 6 ರಿಂದ ಪ್ರಾಯೋಗಿಕ ಚಾಲನೆಯನ್ನು ಪ್ರಾರಂಭಿಸಲಿದೆ ಎಂದು ಬಿಎಂಆರ್‌ಸಿಎಲ್ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸೆಪ್ಟೆಂಬರ್ ಅಂತ್ಯದ ವೇಳೆಗೆ ಅಥವಾ ಅಕ್ಟೋಬರ್ ಮೊದಲ ವಾರದಲ್ಲಿ ಈ ಮಾರ್ಗವನ್ನು ಸಂಚಾರಕ್ಕೆ ತೆರೆಯಲಾಗುವುದು ಎಂದು ಬಿಎಂಆರ್‌ಸಿಎಲ್ ಎಂಡಿ ಮಹೇಶ್ವರ್ ರಾವ್ ಮಾಹಿತಿ ನೀಡಿದ್ದಾರೆ.

298 ಕೋಟಿ ವೆಚ್ಚದಲ್ಲಿ 3.7-ಕಿಮೀ ಮಾರ್ಗವು ಮಂಜುನಾಥ ನಗರ, ಚಿಕ್ಕಬಿದರಕಲ್ಲು (ಹಿಂದಿನ ಜಿಂದಾಲ್ ನಗರ) ಮತ್ತು ಮಾದಾವರ (ಬಿಐಇಸಿ)ದಲ್ಲಿ ನಿಲ್ದಾಣಗಳನ್ನು ಹೊಂದಿದೆ. ಹಿರಿಯ ಅಧಿಕಾರಿಯೊಬ್ಬರು ಪ್ರತಿಕ್ರಿಯೆ ನೀಡಿದ್ದು, "ನಾವು ಸ್ವಚ್ಛತಾ ಕಾರ್ಯವನ್ನು ಕೈಗೆತ್ತಿಕೊಂಡಿದ್ದೇವೆ. ವಿವಿಧ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. ಒಂದು ತಿಂಗಳ ಕಾಲ ಪ್ರಾಯೋಗಿಕ ಓಡಾಟ ನಡೆಯಲಿದೆ. ನಾವು ಸೆಪ್ಟೆಂಬರ್ ಎರಡನೇ ವಾರದೊಳಗೆ ಮೆಟ್ರೋ ರೈಲು ಸುರಕ್ಷತೆಯ ಆಯುಕ್ತರನ್ನು ತಪಾಸಣೆಗೆ ಆಹ್ವಾನಿಸಲು ಸಿದ್ಧತೆ ನಡೆಸುತ್ತಿದ್ದೇವೆ.



ಇದು ವಿಸ್ತರಣಾ ಮಾರ್ಗವಾಗಿರುವುದರಿಂದ ಮತ್ತು ಗ್ರೀನ್ ಲೈನ್‌ನಲ್ಲಿ ಚಲಿಸುವ ರೈಲುಗಳನ್ನು ಬಳಸಲಾಗುವುದು, ರೈಲುಗಳ ನಡುವಿನ ಹಾದಿಯು ಉದ್ದವಾಗಿರುತ್ತದೆ ಎಂದು ತಿಳಿಸಿದ್ದಾರೆ.

ನೆಲಮಂಗಲ, ಮಾಕಳಿ ಮತ್ತು ಮಾದನಾಯಕನಹಳ್ಳಿ ನಿವಾಸಿಗಳು ಮತ್ತು ತುಮಕೂರಿನಿಂದ ನಗರಕ್ಕೆ ಬರುವವರು ಮಾದಾವರದಲ್ಲಿ ಮೆಟ್ರೋ ಸೇವೆಯನ್ನು ಪಡೆಯಬಹುದು. ಬೆಂಗಳೂರು ಅಂತಾರಾಷ್ಟ್ರೀಯ ವಸ್ತುಪ್ರದರ್ಶನ ಕೇಂದ್ರಕ್ಕೆ ಭೇಟಿ ನೀಡುವವರಿಗೂ ಇದು ನೆರವಾಗಲಿದೆ.

ಈ ಮಾರ್ಗದ ಕಾಮಗಾರಿ ಪೂರ್ಣಗೊಳಿಸಲು ಆಗಸ್ಟ್ 2019ಕ್ಕೆ ಗಡುವು ನೀಡಲಾಗಿತ್ತು. ಆದರೆ ಮಾದಾವರದ ನಿಲ್ದಾಣದ ಕಾಮಗಾರಿ ಪೂರ್ಣಗೊಳ್ಳಲು ವಿಳಂಬ ಹಾಗೂ ನಾನಾ ಕಾರಣಗಳಿಂದ ಹಲವು ಬಾರಿ ವಿಸ್ತರಣೆ ಮಾಡಬೇಕಾಯಿತು.

ಜಪಾನ್‌ನ ಸ್ಪೀಕರ್ ನುಕಾಗಾ ಫುಕುಶಿರೊ ಮತ್ತು ನಾಲ್ವರು ಸಂಸದರು ಇಂದು ಬುಧವಾರ ಬೆಳಿಗ್ಗೆ ಬಿಎಂಆರ್‌ಸಿಎಲ್ ಅಧಿಕಾರಿಗಳನ್ನು ಭೇಟಿ ಮಾಡಲಿದ್ದಾರೆ. ಅವರು ಎಂಜಿ ರಸ್ತೆಯಿಂದ ವಿಧಾನಸೌಧದವರೆಗೆ ಮಧ್ಯಾಹ್ನ 12.40 ಕ್ಕೆ ಬೆಂಗಳೂರು ಮೆಟ್ರೋದಲ್ಲಿ ಪ್ರಯಾಣಿಸಲಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಹೆಚ್ಚಿದ ಡ್ರಂಕ್ ಆಂಡ್ ಡ್ರೈವ್, ವ್ಹೀಲಿಂಗ್

# 6 ಸಾವಿರಕ್ಕೂ ಹೆಚ್ಚು ಪ್ರಕರಣ ದಾಖಲು

**ಬೆಂಗಳೂರು:** ಬೆಂಗಳೂರಿನಲ್ಲಿ ಅಪಾಯಕಾರಿ ಚಾಲನೆಗೆ ಕಡಿವಾಣ ಹಾಕುವುದಕ್ಕೆ ಕಠಿಣ ಕ್ರಮಕ್ಕೆ ಮುಂದಾಗಿರುವ ಬೆಂಗಳೂರು ಸಂಚಾರ ಪೊಲೀಸರು ಜೂನ್ ಅಂತ್ಯದವರೆಗೆ ಮದ್ಯಪಾನ ಮಾಡಿ ವಾಹನ ಚಲಾಯಿಸಿದ 6,283 ಪ್ರಕರಣ ಮತ್ತು ವ್ಹೀಲಿಂಗ್ ಸಂಬಂಧ 225 ಪ್ರಕರಣಗಳನ್ನು ದಾಖಲಿಸಿದ್ದಾರೆ.




ಬೆಂಗಳೂರು ಟ್ರಾಫಿಕ್ ಪೊಲೀಸ್ ಅಂಕಿಅಂಶಗಳ ಪ್ರಕಾರ, ಕಳೆದ ವರ್ಷ ನಗರದಲ್ಲಿ 216 ವ್ಹೀಲಿಂಗ್ ಪ್ರಕರಣಗಳು ದಾಖಲಾಗಿದ್ದವು. ಈ ವರ್ಷ ಜೂನ್‌ನಲ್ಲಾಗಲೇ ಅದನ್ನು ಮೀರಿ ಪ್ರಕರಣಗಳು ದಾಖಲಾಗಿವೆ. ಟ್ರಾಫಿಕ್ ಪೊಲೀಸರು 93 ಸವಾರರ ನೋಂದಣಿ ಪ್ರಮಾಣಪತ್ರಗಳನ್ನು (ಆರ್‌ಸಿ) ಅಮಾನತಿಗಾಗಿ ಆಯಾ ಪ್ರಾದೇಶಿಕ ಸಾರಿಗೆ ಕಚೇರಿಗಳಿಗೆ ಕಳುಹಿಸಿದ್ದು, ಅದರಲ್ಲಿ 26 ಆರ್‌ಸಿಗಳನ್ನು ಈಗಾಗಲೇ ಅಮಾನತುಗೊಳಿಸಲಾಗಿದೆ. ಪುಟ 2

# ಪ್ರೀತಿಸಿ ಮದುವೆಯಾದವನನ್ನು ಹತ್ಯೆಗೈದು ಅಪಘಾತದ ಕತೆ ಕಟ್ಟಿದ್ದ ಖತರ್‌ನಾಕ್ ಲೇಡಿ ಅರೆಸ್ಟ್



**ತುಮಕೂರು:** ಪ್ರೀತಿಸಿ ಮದುವೆಯಾದ ಪತಿಯನ್ನು ಹತ್ಯೆಗೈದು ಅಪಘಾತದ ಕತೆ ಕಟ್ಟಿದ್ದ ಪತ್ನಿಯನ್ನು ಪೊಲೀಸರು ಬಂಧಿಸಿದ್ದಾರೆ. ಕೊಲೆಯಾದ ವ್ಯಕ್ತಿಯನ್ನು ಕಲಬುರಗಿ ಮೂಲದ ಪ್ರಕಾಶ್ (30) ಎಂದು ಗುರುತಿಸಲಾಗಿದೆ. ಕೊಲೆಯಾದವನ ಪತ್ನಿ ಹರ್ಷಿತಾ ಹಾಗೂ ಸಂಬಂಧಿಗಳು ಪ್ರಕಾಶ್‌ನನ್ನು ಮಲ್ಲೆಕಾವು ಗ್ರಾಮದಲ್ಲಿ ಡ್ರ್ಯಾಗರ್‌ನಿಂದ ಇರಿದು ಹತ್ಯೆಗೈದು, ಬಳಿಕ ಅಪಘಾತ ಎಂಬಂತೆ ಬಿಂಬಿಸಿದ್ದರು. ಎದೆ ಭಾಗಕ್ಕೆ ಚುಚ್ಚಿದ ಗುರುತು ಪತ್ತೆಯಾದ ಬಳಿಕ ಪೊಲೀಸರು ಇದು ಕೊಲೆ ಎಂದು ಶಂಕಿಸಿ ತನಿಖೆ ನಡೆಸಿದಾಗ ಪ್ರಕರಣದ ಸತ್ಯಾಸತ್ಯತೆ ಹೊರಬಿದ್ದಿದೆ. ಈ ಪ್ರಕರಣದಲ್ಲಿ ಕೊಲೆಯಾದವನ ಪತ್ನಿಯನ್ನು ಬಂಧಿಸಿ ವಿಚಾರಣೆ ನಡೆಸಿದಾಗ ಕೃತ್ಯ ಬಯಲಾಗಿದೆ. ಗುತ್ತಿಗೆ ಆಧಾರದ ಮೇಲೆ ಪೋಸ್ಟ್ ಆಫೀಸ್‌ನಲ್ಲಿ ಕೆಲಸ ಮಾಡುತ್ತಿದ್ದ ಪ್ರಕಾಶ್ ಹಾಗೂ ಹರ್ಷಿತಾ 3 ವರ್ಷಗಳ ಹಿಂದೆ ಪರಸ್ಪರ ಪ್ರೀತಿಸಿ ಮದುವೆಯಾಗಿದ್ದರು. ದಂಪತಿಗೆ ಒಂದು ಮಗು ಕೂಡ ಇದೆ. ಈ ಸಂಬಂಧ ಕೊರಟಗೆರೆ ಪೊಲೀಸರು ಹರ್ಷಿತಾಳನ್ನ ಬಂಧಿಸಿದ್ದಾರೆ. ಆಕೆಯ ಸಹೋದರ ಹಾಗೂ ಮತ್ತೋರ್ವನ ಬಂಧನಕ್ಕೆ ಬಲೆ ಬೀಸಿದ್ದಾರೆ.

## 4 ವರ್ಷಗಳ ಬಳಿಕ ಧಾರವಾಡದ ಇಂದಿರಮ್ಮನ ಕೆರೆ ಭರ್ತಿ

**ಧಾರವಾಡ:** ಜಿಲ್ಲೆಯಾದ್ಯಂತ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಧಾರವಾಡ ಜಿಲ್ಲೆಯ ಅಳ್ನಾವರ ತಾಲೂಕಿನ ಹುಲ್ಲಿಕೇರಿ ಗ್ರಾಮದ ಇಂದಿರಮ್ಮನ ಕೆರೆ ಸಂಪೂರ್ಣ ಭರ್ತಿಯಾಗಿದೆ. ಕಳೆದ ನಾಲ್ಕು ವರ್ಷಗಳಿಂದ ಈ ಇಂದಿರಮ್ಮನ ಕೆರೆ ಭರ್ತಿಯಾಗಿರಲಿಲ್ಲ. ಆದರೆ, ಕಳೆದ 10-15 ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಇಂದಿರಮ್ಮನ ಕೆರೆ ಭರ್ತಿಯಾಗಿದ್ದು, ಹೆಚ್ಚಿನ ನೀರು ಹೊರ ಹೋಗುತ್ತಿದೆ.ಬೆಳಗಾವಿ ಜಿಲ್ಲೆಯ ಖಾನಾಪುರ ಹಾಗೂ ಧಾರವಾಡ ಜಿಲ್ಲೆಯ ಗಡಿ ಭಾಗದಲ್ಲಿ ಅತಿಯಾದ ಮಳೆಯಾಗುತ್ತಿರುವುದರಿಂದ ಕೆರೆ ಸಂಪೂರ್ಣ ಭರ್ತಿಯಾಗಿದೆ. ಕೆರೆ ತುಂಬಿ ತಡೆಗೋಡೆ ದಾಟಿ ನೀರು ಹೊರಗಡೆ ಹೋಗುತ್ತಿದ್ದು, ಈ ನೀರು ಅಳ್ನಾವರ ಡವಗಿ ನಾಲಾಕ್ಕೆ ಹೋಗಿ ಸೇರಲಿದೆ. ಸುಮಾರು ಒಂದು ಸಾವಿರ ಎಕರೆ ಪ್ರದೇಶದಲ್ಲಿ ಈ ಕೆರೆ ಇದ್ದು, ಇದೀಗ ಈ ಕೆರೆ ಭರ್ತಿಯಾಗಿದೆ. ಸದ್ಯ, ಕೆರೆ ತುಂಬಿದ್ದನ್ನು ನೋಡಲು ನೂರಾರು ಜನರು ಕೆರೆ ಬಳಿ ಬರುತ್ತಿದ್ದು, ಪೊಲೀಸ್ ಭದ್ರತೆಯನ್ನು ಕೂಡ ನಿಯೋಜಿಸಲಾಗಿದೆ.



# ಕಾಂಗ್ರೆಸ್‌ನ ಹಗರಣ, ಭ್ರಷ್ಟಾಚಾರದ ವಿರುದ್ಧ ಚಕ್ರವ್ಯೂಹ ರಚಿಸಲಾಗಿದೆ

**ನವದೆಹಲಿ:** ಲೋಕಸಭೆಯ ವಿರೋಧಪಕ್ಷ ನಾಯಕ ರಾಹುಲ್ ಗಾಂಧಿ ಅವರ ಚಕ್ರವ್ಯೂಹ ಹೇಳಿಕೆಗೆ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಚಕ್ರವ್ಯೂಹ ರಚನೆಯಾಗುತ್ತಿದೆ ಆದರೆ ಕಾಂಗ್ರೆಸ್ ಹಗರಣಗಳು ಮತ್ತು ಭ್ರಷ್ಟಾಚಾರದ ವಿರುದ್ಧ ಎಂದು ಹೇಳಿದ್ದಾರೆ. ಎಎನ್‌ಐ ಜತೆ ಮಾತನಾಡಿರುವ ಜೋಶಿ, ಇದನ್ನು ಡ್ರಾಮಾಬಾಜಿ ಎಂದು ಕರೆದಿದ್ದಾರೆ, 60 ವರ್ಷಗಳ ಮಾಡಿರುವ ಭ್ರಷ್ಟಾಚಾರ ಮತ್ತು ಹಗರಣವನ್ನು ಮುಚ್ಚಿಹಾಗಲು ಇದೆಲ್ಲವನ್ನೂ ಹೇಳುತ್ತಿದ್ದಾರೆ.

ರಾಹುಲ್ ಗಾಂಧಿ ಹಾಗೂ ಅವರ ತಾಯಿ ರಿಮೋಟ್ ಕಂಟ್ರೋಲ್ ಮೂಲಕ ಸರ್ಕಾರವನ್ನು ಏಕೆ ಹರಿದುಹಾಕಿದರು, ಈಗ ಏಕೆ ನಾಟಕವಾಡುತ್ತಿದ್ದಾರೆ. ತಮ್ಮ ಸರ್ಕಾರದಲ್ಲಿ ಮಾಡಿದ ಹಗರಣವನ್ನು ಮುಚ್ಚಿಹಾಕುವ ಪ್ರಯತ್ನ ಇದು ಎಂದಿದ್ದಾರೆ.



ಲೋಕಸಭೆಯಲ್ಲಿ ರಾಹುಲ್ ಗಾಂಧಿ ಮಾತನಾಡುತ್ತಾ, ದೇಶವು ಈಗ ಕಮಲದ ಚಕ್ರವ್ಯೂಹದಲ್ಲಿ ಸಿಲುಕಿದೆ, 21ನೇ ಶತಮಾನದಲ್ಲಿ ಹೊಸ ಚಕ್ರವ್ಯೂಹವನ್ನು ರಚಿಸಲಾಗಿದೆ ಎಂದು ದೂರಿದ್ದರು.

ಅಭಿಮನ್ಯುವಿಗೆ ಮಾಡಿದ್ದನ್ನು ಇಂದು ಇಡೀ ಭಾರತ- ಯುವಜನರು, ರೈತರು, ಮಹಿಳೆಯರು, ಸಣ್ಣ ಹಾಗೂ ಮಧ್ಯಮ ಉದ್ಯಮಗಳಿಗೂ ಮಾಡಲಾಗುತ್ತಿದೆ. ಅಂದು ದ್ರೋಣಾಚಾರ್ಯ, ಕರ್ಣ, ಕೃಪಾಚಾರ್ಯ, ಕೃತವರ್ಮ, ಅಶ್ವತ್ಥಾಮ ಮತ್ತು ಶಕುನಿ ಇದ್ದಂತೆ, ಇಂದು ಕೂಡ ಚಕ್ರವ್ಯೂಹದ ಕೇಂದ್ರದಲ್ಲಿ ಆರು ವ್ಯಕ್ತಿಗಳಿದ್ದಾರೆ- ನರೇಂದ್ರ ಮೋದಿ, ಅಮಿತ್ ಶಾ, ಮೋಹನ್ ಭಾಗವತ್, ಅಜಿತ್ ದೋವಲ್, ಅಂಬಾನಿ ಮತ್ತು ಅದಾನಿ ಎಂದು ಹೇಳಿದರು.

ಇದಕ್ಕೆ ಸ್ಪೀಕರ್ ಓಂ ಬಿರ್ಲಾ ಅವರ ಮಧ್ಯಪ್ರವೇಶದ ನಂತರ, ನೀವು ಬಯಸಿದರೆ, ನಾನು ಅಜಿತ್ ದೋವಲ್, ಅಂಬಾನಿ ಮತ್ತು ಅದಾನಿ ಅವರ ಹೆಸರನ್ನು ಬಿಟ್ಟುಬಿಡುತ್ತೇನೆ ಮತ್ತು ಕೇವಲ 3 ಹೆಸರುಗಳನ್ನು ತೆಗೆದುಕೊಳ್ಳುತ್ತೇನೆ'' ಎಂದು ರಾಹುಲ್ ಗಾಂಧಿ ಹೇಳಿದರು.

# ಸಚಿವ ಸಂಪುಟ ಪುನರ್ ರಚನೆ ಹೈಕಮಾಂಡ್ ತೀರ್ಮಾನವೇ ಅಂತಿಮ

**ಬೆಂಗಳೂರು:** ಸಚಿವ ಸಂಪುಟ ವಿಸ್ತರಣೆ ಅಥವಾ ಸಂಪುಟ ಪುನರ್ ರಚನೆ ಬಗ್ಗೆ ಕಾಂಗ್ರೆಸ್ ಹೈಕಮಾಂಡ್ ತೀರ್ಮಾನ ಮಾಡುತ್ತದೆ. ಹೈಕಮಾಂಡ್ ತೀರ್ಮಾನವೇ ಅಂತಿಮ ಎಂದು ವಿಧಾನ ಪರಿಷತ್‌ನ ಸರ್ಕಾರದ ಮುಖ್ಯ ಸಚೇತಕ ಸಲೀಂ ಅಹಮದ್ ತಿಳಿಸಿದ್ದಾರೆ.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಪುಟ ವಿಸ್ತರಣೆ ಬಗ್ಗೆ ಪ್ರತಿಕ್ರಿಯೆ ನೀಡಿದರು. ಈ ವೇಳೆ, ಸದ್ಯಕ್ಕೆ ಸಂಪುಟ ವಿಸ್ತರಣೆ, ಪುನರ್ ರಚನೆ ಇಲ್ಲ. 3-4 ರಾಜ್ಯಗಳ ಚುನಾವಣೆ ಇದೆ. ಹೀಗಾಗಿ ಸಂಪುಟ ಪುನರ್ ರಚನೆ ಬಗ್ಗೆ ಮಾಹಿತಿ ಇಲ್ಲ. ಸದ್ಯಕ್ಕಂತೂ ಸಂಪುಟ ವಿಸ್ತರಣೆ ಇಲ್ಲ. ಆದರೂ ಈ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ ಎಂದು ಅವರು ಹೇಳಿದ್ದಾರೆ.

ಎಷ್ಟು ದಿನ ನಾನು ಸಚಿವನಾಗಿ ಇರುತ್ತೇನೋ ಎಂಬ ಸಚಿವ ಜಮೀರ್ ಹೇಳಿಕೆ ವಿಚಾರವಾಗಿ, ಜಮೀರ್ ಅಹಮದ್ ಹೇಳಿಕೆ ನನಗೆ ಗೊತ್ತಿಲ್ಲ. ಅವರು ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ ಎಂದಿದ್ದಾರೆ. ಇದೇ ವೇಳೆ ಪತ್ರಕರ್ತರು ನೀವು ಸಚಿವ ಸ್ಥಾನದ ಆಕಾಂಕ್ಷಿಯೇ? ಎಂದು ಪ್ರಶ್ನಿಸಿದರು. ಇದಕ್ಕೆ, ಸಂಪುಟ ವಿಸ್ತರಣೆ ಸದ್ಯಕ್ಕೆ ಇಲ್ಲ ಎಂದು ಜಾರಿಕೊಂಡರು.

# ಒಲಂಪಿಕ್ಸ್‌ನಲ್ಲಿ ಭ್ರಷ್ಟಾಚಾರದ ಪಂದ್ಯ ಏರ್ಪಡಿಸಿ ಸಿದ್ದರಾಮಯ್ಯಗೇ ಚಿನ್ನದ ಪದಕ: ಬಿಜೆಪಿ ವ್ಯಂಗ್ಯ

**ಬೆಂಗಳೂರು:** ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ, ಮುಡಾ ಹಗರಣ ವಿಚಾರವಾಗಿ ಸಿಎಂ ಸಿದ್ದರಾಮಯ್ಯ ಹಾಗೂ ಕರ್ನಾಟಕ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ವಾಗ್ದಾಳಿ ಮುಂದುವರಿಸಿದೆ. ಮೈಸೂರಿಗೆ ಪಾದಯಾತ್ರೆ ಹಮ್ಮಿಕೊಂಡ ಬೆನ್ನಲ್ಲೇ ಇದೀಗ ಸಾಮಾಜಿಕ ಜಾಲತಾಣಗಳಲ್ಲಿಯೂ ಟೀಕಾ ಪ್ರಹಾರ ತೀವ್ರಗೊಳಿಸಿದೆ. ಒಲಂಪಿಕ್ಸ್ ಜತೆ ಹೋಲಿಸಿ ಎಕ್ಸ್‌ನಲ್ಲಿ ಸಂದೇಶ ಪ್ರಕಟಿಸಿರುವ ಬಿಜೆಪಿ, ಸಿಎಂ ಸಿದ್ದರಾಮಯ್ಯಗೆ ಭ್ರಷ್ಟಾಚಾರದಲ್ಲಿ ಚಿನ್ನದ ಪದಕ ದೊರೆಯಬಹುದು ಎಂದು ವ್ಯಂಗ್ಯವಾಡಿದೆ.

ಒಲಂಪಿಕ್ಸ್‌ನಲ್ಲಿ ಭ್ರಷ್ಟಾಚಾರದ ಪಂದ್ಯ ಏರ್ಪಡಿಸಿದಲ್ಲಿ ಭ್ರಷ್ಟಾಚಾರದ ಪಿತಾಮಹನಿಗೆ ಚಿನ್ನದ ಪದಕ ಖಚಿತ-ನಿಶ್ಚಿತ-ಖಂಡಿತ ಎಂದು ಸಿಎಂ ಸಿದ್ದರಾಮಯ್ಯ, ಮಾಜಿ ಸಚಿವ ನಾಗೇಂದ್ರ, ಹಾಗೂ ಶಾಸಕ ಬಸನಗೌಡ ದದ್ದಲ್



ಫೋಟೊವನ್ನು ಬಿಜೆಪಿ ಪೋಸ್ಟ್ ಮಾಡಿದೆ. ಇದರಲ್ಲಿ ಸಿದ್ದರಾಮಯ್ಯ ಚಿನ್ನದ ಪದಕ, ನಾಗೇಂದ್ರ ಬೆಳ್ಳಿ ಹಾಗೂ ದದ್ದಲ್ ಕಂಚಿನ ಪದಕ ಧರಿಸಿರುವ ಎಡಿಟೆಡ್ ಫೋಟೊ ಪ್ರಕಡಿಸಲಾಗಿದೆ.

ಈ ಮಧ್ಯೆ, ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಹೈಕಮಾಂಡ್ ಭೇಟಿಗಾಗಿ ದೆಹಲಿಗೆ ತೆರಳಿದ್ದಾರೆ.

ಆ ಬಗ್ಗೆಯೂ ಕುಹಕವಾಡಿರುವ ಬಿಜೆಪಿವ್ಯಂಗ್ಯಚಿತ್ರವೊಂದನ್ನು ಪೋಸ್ಟ್ ಮಾಡಿ ಲೇವಡಿ ಮಾಡಿದೆ.

ನೆರೆಯಿಂದ ಹಾನಿಗೊಳಗಾದ ಕನ್ನಡಿಗರ ಕಂಬನಿ ಒರೆಸುವುದಕ್ಕಿಂತಲೂ, ಹೈಕಮಾಂಡ್‌ಗೆ ಕಪ್ಪ ತಲುಪಿಸುವ ಕಾರ್ಯದಲ್ಲಿ ಮಗ್ನವಾಗಿರುವ ಸಿಎಂ-ಡಿಸಿಎಂ ಎಂದು ಬಿಜೆಪಿ ವ್ಯಂಗ್ಯವಾಡಿದೆ.

ರಾಜ್ಯ ಸಚಿವ ಸಂಪುಟದಲ್ಲಿ ಬದಲಾವಣೆಯಾಗುವ ಸಾಧ್ಯತೆ ಇದೆ. ಆ ಕುರಿತು ಹೈಕಮಾಂಡ್ ಜತೆ ಚರ್ಚಿಸಲು ಸಿಎಂ ಹಾಗೂ ಡಿಸಿಎಂ ದೆಹಲಿಗೆ ತೆರಳಿದ್ದಾರೆ ಎನ್ನಲಾಗಿದೆ. ಮತ್ತೊಂದು ಮೂಲಗಳ ಪ್ರಕಾರ, ರಾಜ್ಯ ಸರ್ಕಾರದ ವಿರುದ್ಧ ಭ್ರಷ್ಟಾಚಾರ ಪ್ರಕರಣಗಳ ಆರೋಪ ಹೆಚ್ಚಾಗುತ್ತಿದ್ದಂತೆಯೇ ಆ ಬಗ್ಗೆ ಚರ್ಚಿಸಲು ಸಿಎಂ ಹಾಗೂ ಡಿಸಿಎಂರನ್ನು ಹೈಕಮಾಂಡ್ ಕರೆಸಿಕೊಂಡಿದೆ ಎನ್ನಲಾಗಿದೆ.

# ದಿವ್ಯಶ್ರೀ ಟೆಕ್‌ಪಾರ್ಕ್ ಮನೆಯಲ್ಲಿ ವಜ್ರದ ಸರ, ಚಿನ್ನಾಭರಣ ಕಳ್ಳತನ

**ಬೆಂಗಳೂರು:** ಮನೆಯಲ್ಲಿ ನಮ್ಮ ಕೆಲಸಗಳನ್ನು ನಾವು ಮಾಡಿಕೊಳ್ಳಲು ಆಗುವುದಿಲ್ಲವೆಂದು ಮನೆ ಕೆಲಸಕ್ಕೊಬ್ಬಳು ಮಹಿಳೆಯನ್ನು ಸೇರಿಸಿಕೊಂಡರೆ, ಕೆಲವು ದಿನಗಳು ಕೆಲಸ ಮಾಡಿ ನಂತರ ಮನೆಯಲ್ಲಿದ್ದ ಎಲ್ಲ ಚಿನ್ನಾಭರಣಗಳನ್ನು ಕದ್ದು ಪರಾರಿ ಆಗಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.



ಹೌದು, ಮನೆಯಲ್ಲಿಯೇ ಕೆಲಸ ಮಾಡ್ತಾ ಚಿನ್ನಾಭರಣ ಕಳ್ಳತನ ಮಾಡಲಾಗಿದೆ. ಕೆಲಸ ಮಾಡ್ತಿದ್ದ ಮನೆಯಲ್ಲಿ ಕಳ್ಳತನ ಮಾಡ್ತಿದ್ದ ಆರೋಪಿ ಮಹಿಳೆಯನ್ನು ಪೊಲೀಸರು ಬಂಧಿಸಿದ್ದಾರೆ. ಮಹಿಳೆ ದಿವ್ಯಾ (22) ಕಳ್ಳತನ ಆರೋಪದಡಿ ಪೊಲೀಸರಿಂದ ಬಂಧನವಾಗಿದ್ದಾಳೆ. ಬೆಂಗಳೂರಿನ ಹೊರವಲಯ ಯಮಲೂರಿನ ದಿವ್ಯಶ್ರೀ ಟೆಕ್ ಪಾರ್ಕ್ ವಿಲ್ಲಾ ಒಂದರಲ್ಲಿ ವಾಸವಿದ್ದ ಉದ್ಯಮಿಯ ಮನೆಯಲ್ಲಿ ಮಕ್ಕಳನ್ನು ನೋಡಿಕೊಳ್ಳಲು ದಿವ್ಯಾಳನ್ನು ಕೆಲಸಕ್ಕೆ ಸೇರಿಕೊಳ್ಳಲಾಗಿತ್ತು. ಜೊತೆಗೆ, ಸಣ್ಣ ಪುಟ್ಟ ಮನೆ ಕೆಲಸಗಳನ್ನು ಕೂಡ ಮಾಡಿಕೊಂಡಿದ್ದಳು. ಆದರೆ, ಮನೆಯಲ್ಲಿ ಯಾರೂ ಇಲ್ಲದಿರುವ ಸಂದರ್ಭವನ್ನು ನೋಡಿ, ದಿವ್ಯಾ ಮನೆಯಲ್ಲಿದ್ದ ಚಿನ್ನಾಭರಣಗಳನ್ನು ಕಳ್ಳತನ ಮಾಡಿಕೊಂಡು ಪರಾರಿ ಆಗಿದ್ದಾಳೆ.

ಉದ್ಯಮಿಯ ಮನೆಯಲ್ಲಿದ್ದ ವಜ್ರದ ಹರಳುಗಳಿಳ್ಳ ನೆಕ್ಲೆಸ್ ಸೇರಿದಂತೆ ಸುಮಾರು 50 ಲಕ್ಷ ರೂ. ಮೌಲ್ಯದ ಚಿನ್ನಾಭರಣಗಳನ್ನು ಕದ್ದು ಪರಾರಿ ಆಗಿದ್ದಾಳೆ. ಇನ್ನು ಮನೆಯಲ್ಲಿ ಚಿನ್ನಾಭರಣ ಕಾಣದಿದ್ದಾಗ ಉದ್ಯಮಿ ದೂರು ನೀಡಿದ್ದನು. ಮಾರತ್ತಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲು ಮಾಡಿದ್ದಾರೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡ ಮಾರತ್ತಹಳ್ಳಿ ಪೊಲೀಸರು ಆರೋಪಿ ಮಹಿಳೆಯನ್ನು ಬಂಧಿಸಿದ್ದಾರೆ. ನಂತರ, ಆಕೆಯನ್ನು ವಿಚಾರಣೆ ಮಾಡಿದಾಗ ಹೈಡ್ರಾಮಾ ಮಾಡಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ.

ಹೌದು, ಪೊಲೀಸರ ವಶದಲ್ಲಿದ್ದಾಗಲು ದಿವ್ಯಾ ಹೈಡ್ರಾಮಾ ಮಾಡಿದ್ದಾಳೆ. ವಿಚಾರಣೆಗೆ ಕರೆದೊಯ್ಯುವ ವೇಳೆ ತನ್ನ ಕೈ ಕೊಯ್ದುಕೊಂಡು ಡ್ರಾಮಾ ಮಾಡಿದ್ದಾಳೆ. ಸಂಬಂಧಿಕರ ಸಹಾಯದಿಂದ ಚಿನ್ನಾಭರಣ ಮಾರಾಟವನ್ನೂ ಮಾಡಿದ್ದಾಳೆ. ಇದರಿಂದ ದಿವ್ಯಾಳನ್ನು ಬಂಧಿಸಿದ ಪೊಲೀಸರು ಆಕೆಯಿಂದ 30 ಲಕ್ಷ ರೂ. ಚಿನ್ನಾಭರಣ ವಶಕ್ಕೆ ಪಡೆದಿದ್ದಾರೆ. ನಂತರ ಈಕೆ ಕದ್ದ ಆಭರಣಗಳನ್ನು ಮಾರಾಟ ಮಾಡುವುದಕ್ಕೆ ಸಹಾಯ ಮಾಡಿದ ಆಕೆಯ ಸಂಬಂಧಿಕರಾದ ಮತ್ತೋರ್ವ ಮಹಿಳೆ ಮಂಜು ಹಾಗೂ ಜೋಮನ್ ಎಂಬಾತನನ್ನೂ ಬಂಧಿಸಲಾಗಿದೆ.

ಮನೆ ಕಳ್ಳತನ ಮಾಡಿದ ಪ್ರಕರಣದಲ್ಲಿ ಒಟ್ಟು ಮೂವರನ್ನು ಪೊಲೀಸರು ಬಂಧಿಸಿದ್ದಾರೆ. ಇನ್ನು ದಿವ್ಯಶ್ರೀ ಮನೆಯಲ್ಲಿ ಇದ್ದ ಚಿನ್ನಾಭರಣಗಳನ್ನು ಹಾಗೂ ಕಳ್ಳತನದ ವಸ್ತುಗಳನ್ನು ಮಾರಾಟ ಮಾಡಲು ಬಳಕೆ ಮಾಡಿದ್ದ ಮೊಬೈಲ್ ಫೋನ್‌ಗಳನ್ನು ಕೂಡ ವಶಕ್ಕೆ ಪಡೆದಿದ್ದಾರೆ. ಈ ಸಂಬಂಧ ಆರೋಪಿಗಳನ್ನು ಬಂಧಿಸಿ ಹೆಚ್ಚಿನ ವಿಚಾರಣೆ ಮಾಡುತ್ತಿದ್ದಾರೆ.

# ತುಂಗಾ ನದಿ ಅಬ್ಬರಕ್ಕೆ ಕಾರ್ಕಳ-ಶೃಂಗೇರಿ ಹೆದ್ದಾರಿ ಬಂದ್

**ಚಿಕ್ಕಮಗಳೂರು:** ಮಲೆನಾಡು ಭಾಗದಲ್ಲಿ ಮತ್ತೆ ಮಳೆ ಜೋರಾಗಿದ್ದು ತುಂಗಾ ನದಿ ಅಬ್ಬರಕ್ಕೆ ರಾಷ್ಟ್ರೀಯ ಹೆದ್ದಾರಿ ಜಲಾವೃತವಾಗಿದೆ.

ಜಲಾವೃತ ಆಗಿರುವ ಹಿನ್ನೆಲೆ ಚಿಕ್ಕಮಗಳೂರಿನ ಕಾರ್ಕಳ ಮತ್ತು ಶೃಂಗೇರಿ ಹೆದ್ದಾರಿ ಬಂದ್ ಆಗಿದೆ. ರಸ್ತೆಯಲ್ಲಿ ನೀರಿದ್ದರೂ ಟ್ಯಾಂಕರ್ ಚಾಲಕನೊಬ್ಬ ಹುಚ್ಚಾಟ ಮಾಡಿದ್ದಾನೆ. ರಸ್ತೆಯಲ್ಲಿ ನೀರಿದೆ ಚಲಾಯಿಸಬೇಡ ಎಂದರೂ ಟ್ಯಾಂಕರ್ ಚಲಾಯಿಸಿದ್ದಾನೆ. ಈ ಘಟನೆ ಶೃಂಗೇರಿ ತಾಲೂಕಿನ ಕೆರೆಕಟ್ಟೆ ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ.



# ಕರ್ನಾಟಕದ ದಂಪತಿ

**ಚಾಮರಾಜನಗರದ ಮತ್ತೊಂದು ಕುಟುಂಬ ನಾಪತ್ತೆ:** ಮುಂಡಕೈನಲ್ಲಿ ಚಾಮರಾಜನಗರದ ಮತ್ತೊಂದು ಕುಟುಂಬ ನಾಪತ್ತೆಯಾಗಿದೆ. ಝಾನ್ಸಿರಾಣಿ, ಎರಡೂವರೆ ವರ್ಷದ ಪುತ್ರ ನಿಹಾಲ್ ನಾಪತ್ತೆಯಾಗಿದ್ದಾರೆ ಎಂದು ತಿಳಿದುಬಂದಿದೆ. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ನಿವಾಸಿಯಾಗಿರುವ ಝಾನ್ಸಿರಾಣಿ ಅವರು ವಯನಾಡು ಜಿಲ್ಲೆಯ ಮುಂಡಕೈ ಟೀ ಎಸ್ಟೇಟ್ ನಲ್ಲಿ ಕೆಲಸ ಮಾಡುತ್ತಿದ್ದರು. ಆದರೆ, ಇದೀಗ ಅದೇ ಸ್ಥಳದಲ್ಲೇ ಗುಡ್ಡ ಕುಸಿದಿದ್ದು, ಝಾನ್ಸಿರಾಣಿ ಮತ್ತು ಎರಡುವರೆ ವರ್ಷದ ಮಗು ನಿಹಾಲ್ ಕಾಣೆಯಾಗಿದ್ದಾರೆ.

**ನೆರವಿಗಾಗಿ ಇಬ್ಬರು ಹಿರಿಯ ಐಎಎಸ್ ಅಧಿಕಾರಿಗಳ ನಿಯೋಜನೆ:** ಕೇರಳದ ವಯನಾಡಿನಲ್ಲಿ ಸಂಭವಿಸಿದ ಭೂಕುಸಿತದಿಂದ ಸಂಕಷ್ಟದಲ್ಲಿರುವ ಜನರ ನೆರವಿಗಾಗಿ ಇಬ್ಬರು ಹಿರಿಯ ಐಎಎಸ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಹಾಗೆಯೇ ಗಡಿಜಿಲ್ಲೆ ಚಾಮರಾಜ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ ತೆರೆಯಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಟ್ವೀಟ್ ಮಾಡಿದ್ದಾರೆ.

**ಐಎಎಸ್ ಅಧಿಕಾರಿಗಳ ಮೊಬೈಲ್ ಸಂಖ್ಯೆ:** ಸಿ.ಜಾಫರ್ -9448355577 ದಿಲೀಶ್ ಶಶಿ-9556000514, ಚಾಮರಾಜನಗರ ಜಿಲ್ಲಾಧಿಕಾರಿ ಕಚೇರಿ ಸಹಾಯವಾಣಿ ಸಂಖ್ಯೆಗಳು: 08226-223163, 08226-223161, 08226-223160 **ವಾಟ್ಸಪ್ ಸಂಖ್ಯೆ:** 9740942901

ಈ ಮಾಹಿತಿಯನ್ನು ಹೆಚ್ಚೆಚ್ಚು ಜನರಿಗೆ ತಲುಪಿಸಿ, ಸಂಕಷ್ಟದಲ್ಲಿರುವವರಿಗೆ ಸಕಾಲದಲ್ಲಿ ನೆರವು ಸಿಗಲು ಕಾರಣರಾಗಿ ಎಂದು ಜನರಲ್ಲಿ ಮನವಿ ಮಾಡಿದ್ದಾರೆ.

**ರಾಜ್ಯದ ಜಿಲ್ಲಾಧಿಕಾರಿಗಳಿಗೂ ಸೂಚನೆ:** ರಾಜ್ಯದ ಒಳಗೆ ಮತ್ತು ನೆರೆಯ ರಾಜ್ಯಗಳಲ್ಲಿಯೂ ಅತಿಯಾದ ಮಳೆ ಸುರಿಯುತ್ತಿದ್ದು, ರಾಜ್ಯದ ಯಾವುದೇ ಮೂಲೆಯಲ್ಲಿ ಸಮಸ್ಯೆ ತಲೆದೋರಿದರೂ ಅದನ್ನು ಎದುರಿಸಲು ಸಕಲ ತಯಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಈ ಸಂಬಂಧ ಅಧಿಕಾರಿಗಳಿಗೆ ಕೆಲವು ಸೂಚನೆಗಳನ್ನು ನೀಡಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ರಾಜ್ಯದಲ್ಲಿಡೆ ಭಾರಿ ಮಳೆಯಾಗುತ್ತಿದ್ದು ಪ್ರವಾಹ, ಭೂಕುಸಿತದಂತಹ ಪ್ರಾಕೃತಿಕ ವಿಕೋಪಗಳನ್ನು ಎದುರಿಸಲು ಸಿದ್ಧರಿರುವಂತೆ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ಜಲಾಶಯಗಳ ನೀರಿನ ಮಟ್ಟದ ಕುರಿತು ನಿರಂತರ ಪರಿಶೀಲನೆ ನಡೆಸಿ ಪ್ರವಾಹ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಕರಾವಳಿ ಹಾಗೂ ಮಲೆನಾಡು ಭಾಗದಲ್ಲಿ ಅಲ್ಲಲ್ಲಿ ಭೂಕುಸಿತದ ಪ್ರಕರಣಗಳು ವರದಿಯಾಗುತ್ತಿದ್ದು ಈ ಬಗ್ಗೆ ಜಿಲ್ಲಾಧಿಕಾರಿಗಳು ಎಚ್ಚರವಹಿಸಬೇಕು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಸಹ ಪ್ರವಾಹ ಪರಿಸ್ಥಿತಿಯ ನಿರ್ವಹಣೆಯ ಮೇಲ್ವಿಚಾರಣೆ ನಡೆಸುವಂತೆ ನಿರ್ದೇಶನ ನೀಡಿದ್ದೇನೆ ಎಂದು ತಿಳಿಸಿದರು.

ಅಧಿಕಾರಿಗಳು ಪ್ರವಾಹ ಪರಿಸ್ಥಿತಿಯನ್ನು ಸಮರೋಪಾದಿಯಲ್ಲಿ ನಿರ್ವಹಿಸುವಂತೆ, ರಕ್ಷಣೆ ಹಾಗೂ ಪರಿಹಾರ ಕಾರ್ಯಾಚರಣೆಗಳನ್ನು ಕೈಗೊಳ್ಳುವಂತೆ ಹಾಗೂ ಪ್ರವಾಹ ಪೀಡಿತರಿಗೆ ಅಗತ್ಯಕ್ಕನುಸಾರವಾಗಿ ಕಾಳಜಿ ಕೇಂದ್ರಗಳನ್ನು ತೆರೆದು ಎಲ್ಲ ಸೌಲಭ್ಯಗಳನ್ನು ಕಲ್ಪಿಸುವಂತೆ ಸೂಚಿಸಲಾಗಿದೆ. ಎಲ್ಲ ಜಿಲ್ಲೆಗಳಲ್ಲಿ ನಿಯಂತ್ರಣ ಕೊಠಡಿ ತೆರೆದು ದಿನದ 24 ಗಂಟೆಯೂ ಕಾರ್ಯ ನಿರ್ವಹಿಸಲು ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದರು.

## ಇಂದು ರಾಹುಲ್ ಗಾಂಧಿ ಭೇಟಿ

ಮಂಗಳವಾರ ಈ ಬಗ್ಗೆ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದ ರಾಹುಲ್ ಗಾಂಧಿ, ''ತಮ್ಮ ಪ್ರೀತಿಪಾತ್ರರನ್ನು

## ಮೊದಲನೇ ಪುಟದಿಂದ...

ಕಳೆದುಕೊಂಡಿರುವ ಕುಟುಂಬಗಳಿಗೆ ನನ್ನ ಹೃತ್ಪೂರ್ವಕ ಸಂತಾಪಗಳು ಹೊರಡುತ್ತವೆ. ಇನ್ನೂ ಸಿಕ್ಕಿಬಿದ್ದಿರುವವರನ್ನು ಶೀಘ್ರದಲ್ಲೇ ಸುರಕ್ಷಿತವಾಗಿ ಕರೆತರಲಾಗುವುದು. ನಾನು ಕೇರಳ ಮುಖ್ಯಮಂತ್ರಿ ಮತ್ತು ವಯನಾಡ್ ಜಿಲ್ಲಾಧಿಕಾರಿಯೊಂದಿಗೆ ಮಾತನಾಡಿದ್ದೇನೆ. ರಕ್ಷಣಾ ಕಾರ್ಯಾಚರಣೆಗೆ ಬೇಕಾದ ಸೌಲಭ್ಯ ಒದಗಿಸುವುದಾಗಿ ಸೂಚಿಸಿದ್ದೇನೆ'' ಎಂದು ಹೇಳಿದ್ದರು.

''ಪ್ರೀತಿಪಾತ್ರರನ್ನು ಕಳೆದುಕೊಂಡಿರುವ ಎಲ್ಲರೊಂದಿಗೂ ನನ್ನ ಹೃತ್ಪೂರ್ವಕ ಸಂತಾಪಗಳು. ಎಲ್ಲರನ್ನೂ ಆದಷ್ಟು ಬೇಗ ಸುರಕ್ಷಿತವಾಗಿ ಕರೆತರಲೆಂದು ನಾನು ಭಾವಿಸುತ್ತೇನೆ ಮತ್ತು ಪ್ರಾರ್ಥಿಸುತ್ತೇನೆ'' ಎಂದು ಪ್ರಿಯಾಂಕಾ ಗಾಂಧಿ ಕೂಡ ಪೋಸ್ಟ್ ಮಾಡಿದ್ದರು. ಕೇರಳದ ವಯನಾಡಿನಲ್ಲಿ ಈಗಾಗಲೇ ಸಾವಿನ ಸಂಖ್ಯೆ 110ರ ಗಡಿ ದಾಟಿದೆ.

ಭಾರತೀಯ ವಾಯುಪಡೆಯ ಎರಡು ಹೆಲಿಕಾಪ್ಟರ್ ಗಳನ್ನು ಕೂಡ ಸಜ್ಜುಗೊಳಿಸಲಾಗಿದೆ ಎಂದು ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರ ಕಚೇರಿಯ ಹೇಳಿಕೆ ತಿಳಿಸಿದೆ. ಈ ಪ್ರದೇಶದಲ್ಲಿ ಇಂಟರ್ನೆಟ್ ಸಂಪರ್ಕವಿಲ್ಲದ ಕಾರಣ ರಕ್ಷಣಾ ಪ್ರಯತ್ನಗಳು ಸವಾಲಾಗಿಯೇ ಉಳಿದಿವೆ ಎಂದು ರಕ್ಷಣಾ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಭೀಮಾ ನದಿಪಾಲು

ಆದರೆ, ಲಕ್ಷ್ಮಿ ಪತಿ ಶಿವು ಮತ್ತು ಆತನ ಸಂಬಂಧಿ ಭೀಮಾ ನದಿ ಪಾಲಾಗಿದ್ದಾರೆ. ಭೀಮಾ ನದಿಯಲ್ಲಿ ಮೃತ ಶಿವು ಹಾಗೂ ರಾಜು ಮುಳುಗುವ ದೃಶ್ಯ ಸ್ಥಳೀಯರು ಮೊಬೈಲ್ ಕ್ಯಾಮೆರಾದಲ್ಲಿ ಸೆರೆ ಹಿಡಿದಿದ್ದಾರೆ.

ವಿಚಾರ ತಿಳಿದು ಅಗ್ನಿಶಾಮಕ ದಳ ಸಿಬ್ಬಂದಿಗಳು ಮತ್ತು ಅಫಜಲಪುರ ಪೊಲೀಸರು ಸ್ಥಳಕ್ಕೆ ಆಗಮಿಸಿ ಸತತ ಕಾರ್ಯಾಚರಣೆ ನಡೆಸಿ, ಶಿವು ಮತ್ತು ರಾಜುವಿನ ಮೃತದೇಹಗಳು ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ ದೇವಣಗಾಂವ್ ಬ್ರಿಡ್ಜ್ ಬಳಿ ಪತ್ತೆ ಹಚ್ಚಿದ್ದಾರೆ. ಅಫಜಲಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಹಳ್ಳದಲ್ಲಿ ಕೊಚ್ಚಿಕೊಂಡು ಹೋಗ್ತಿದ್ದವನ ರಕ್ಷಣೆ

ಬೆಳಗಾವಿ: ಖಾನಾಪುರ ತಾಲೂಕಿನಾದ್ಯಂತ ಭಾರಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಖಾನಾಪುರ-ಹೆಮ್ಮಡಗಾ ಮಧ್ಯದಲ್ಲಿರುವ ಹಾಲತ್ರಿ ಹಳ್ಳ ಉಕ್ಕಿ ಹರಿಯುತ್ತಿದೆ. ಹಾಲತ್ರಿ ಹಳ್ಳದ ನೀರಲ್ಲಿ ಕೊಚ್ಚಿ ಹೋಗುತ್ತಿದ್ದ ಯುವಕನ್ನು ಸ್ಥಳೀಯರು ರಕ್ಷಣೆ ಮಾಡಿದ್ದಾರೆ. ವಿನಾಯಕ ಜಾಧವ್ (38) ಎಂಬಾತನನ್ನು ರಕ್ಷಣೆ ಮಾಡಲಾಗಿದೆ.

ಬೆಳಗಾವಿಯ ಶಹಪುರದ ನಿವಾಸಿ ವಿನಾಯಕ ಗೋವಾದಿಂದ ಹೆಮ್ಮಡಗಾ ಮಾರ್ಗವಾಗಿ ಬೆಳಗಾವಿಗೆ ಬರುತ್ತಿದ್ದನು. ವಿನಾಯಕ ಬೈಕ್ ಮೇಲೆ ಹಾಲಾತ್ರಿ ಹಳ್ಳ ದಾಟುವ ಸಾಹಸ ಮಾಡಿದ್ದಾನೆ. ಈ ವೇಳೆ ನೀರಿನ ರಭಸಕ್ಕೆ 100 ಮೀಟರ್ ಹಳ್ಳದಲ್ಲಿ ವಿನಾಯಕ ಕೊಚ್ಚಿ ಹೋಗಿದ್ದಾನೆ. ಬಳಿಕ ಹಳ್ಳದ ದಡದಲ್ಲಿನ ಗಿಡ ಹಿಡಿದುಕೊಂಡು ಸಹಾಯಕ್ಕಾಗಿ ಕೂಗಾಡಿದ್ದಾನೆ.

ವಿನಾಯಕನ ಕೂಗಾಟ ಕೇಳಿ ವಿನಾಯಕ ಮುತಗೇಕರ್ ಹಾಗೂ ವಿನೋದ್ ಪಾಟೀಲ್ ಎಂಬುವರು ಕೂಡಲೆ ಸ್ಥಳಕ್ಕೆ ಧಾವಿಸಿ ಹಗ್ಗ ಕೊಟ್ಟು ರಕ್ಷಣೆ ಮಾಡಿದ್ದಾರೆ. ಬೈಕ್ ಕೊಚ್ಚಿಕೊಂಡು ಹೋಗಿದ್ದು, ಅದೃಷ್ಟವಶಾತ್ ವಿನಾಯಕ್ ಬಚಾವ್ ಆಗಿದ್ದಾನೆ. ಸ್ಥಳಕ್ಕೆ ಖಾನಾಪುರ ಪೊಲೀಸರು ಭೇಟಿ ನೀಡಿ ವಿನಾಯಕನನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಖಾನಾಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## 12 ಸ್ಮಾರಕಗಳು ಮುಳುಗಡೆ

**ಯಾವೆಲ್ಲ ಸ್ಮಾರಕಗಳು ಮುಳುಗಡೆ:** ತುಂಗಭದ್ರಾ ನದಿಯ ಜಲಾನಯನ ಪ್ರದೇಶಗಳಲ್ಲಿ ಕಳೆದ 20 ದಿನಗಳಿಂದ ಭಾರೀ ಮಳೆಯಾಗುತ್ತಿದೆ. ಸದ್ಯ, ಹಂಪಿಯ ಪುರಂದರ ಮಂಟಪ, ಚಕ್ರತೀರ್ಥ, ಕೋದಂಡರಾಮ ದೇವಸ್ಥಾನ, ಹನುಮ ದೇವಸ್ಥಾನ ಸೇರಿದಂತೆ 12 ಸ್ಮಾರಕಗಳು ಮುಳುಗಡೆಯಾಗಿವೆ.

ಭಾರಿ ಮಳೆಯಾದಾಗ ಅಣೆಕಟ್ಟಿನಿಂದ ನೀರು ಹೊರಬಿಡಲಾಗುತ್ತದೆ. ಸದ್ಯ ಜಲಾಶಯ ಸಂಪೂರ್ಣ ಭರ್ತಿಯಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ, ಪ್ರವಾಹಕ್ಕೆ ಒಳಗಾದ ಸ್ಥಳಗಳನ್ನು ಪರಿಶೀಲಿಸಿದ್ದೇನೆ ಮತ್ತು ಜನರು ಪ್ರವಾಹಪೀಡಿತ ಪ್ರದೇಶಗಳಿಗೆ ಪ್ರವೇಶಿಸುವುದನ್ನು ತಡೆಯಲು ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸಲು ಪೊಲೀಸರಿಗೆ ಸೂಚನೆ ನೀಡಿದ್ದೇನೆ ಎಂದು ವಿಜಯನಗರ ಡಿಸಿ ಎಂಎಸ್ ದಿವಾಕರ್ ತಿಳಿಸಿದ್ದಾರೆ.

**ಪ್ರವಾಸಿಗರೇ ಗಮನಿಸಿ: ಸೂಚನೆ ಪಾಲಿಸದಿದ್ದರೆ ಕಾನೂನು ಕ್ರಮ:** ಕಳೆದ 4-5 ದಿನಗಳಿಂದ ಜಲಾವೃತಗೊಂಡ ಸ್ಮಾರಕಗಳ ದರ್ಶನಕ್ಕೆ ಪ್ರವಾಸಿಗರಿಗೆ ಅವಕಾಶ ನೀಡಿಲ್ಲ, ಪ್ರವಾಸಿಗರು ಸೂಚನೆಗಳನ್ನು ಪಾಲಿಸದಿದ್ದಲ್ಲಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಎಚ್ಚರಿಕೆ ನೀಡಿದ್ದಾರೆ.

## ವಾರದಲ್ಲಿ ದಿನಾಂಕ ಪ್ರಕಟ

ಕರ್ನಾಟಕ ಪರೀಕ್ಷೆ ಪ್ರಾಧಿಕಾರ ಮಾತ್ರ ರಾಷ್ಟ್ರೀಯ ವೈದ್ಯಕೀಯ ಆಯೋಗ ನೀಟ್ ಪರೀಕ್ಷೆಯ ಫಲಿತಾಂಶದ ಪಟ್ಟಿಯನ್ನು ಕೆಇಎಗೆ ಹಸ್ತಾಂತರಿಸಿದ ನಂತರ ವೈದ್ಯಕೀಯ, ದಂತ ವೈದ್ಯಕೀಯ ಸೇರಿದಂತೆ ಇತರ ವೈದ್ಯಕೀಯ ಕೋರ್ಸುಗಳ ಆದ್ಯತೆಗಳನ್ನು ದಾಖಲಿಸಲು ಅವಕಾಶ ನೀಡಲಾಗುವುದು.

ಪೋಷಕರಿಗೆ ಹಾಗೂ ವಿದ್ಯಾರ್ಥಿಗಳು ಟೆನ್ಷನ್ ಮಾಡಿಕೊಳ್ಳುವ ಅವಶ್ಯಕತೆ ಇಲ್ಲ ಎನ್ನಲಾಗುತ್ತಿದೆ. ಎಂಜಿನಿಯರಿಂಗ್, ವೈದ್ಯಕೀಯ ಸೇರಿದಂತೆ ಎಲ್ಲ ಕೋರ್ಸುಗಳ ಪ್ರವೇಶಕ್ಕೆ ಈ ಬಾರಿ ಏಕಕಾಲದಲ್ಲೇ ಸೀಟು ಹಂಚಿಕೆ ಪ್ರಕ್ರಿಯೆ ನಡೆಸಲಾಗುವುದು, ಅಭ್ಯರ್ಥಿಗಳಾಗಲಿ ಅಥವಾ ಪೋಷಕರಾಗಲಿ ಗಾಬರಿ ಪಡುವ ಅಗತ್ಯ ಇಲ್ಲ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ ತಿಳಿಸಿದ್ದಾರೆ.

ಒಟ್ಟಿನಲ್ಲಿ ಸೀಟ್ ಹಂಚಿಕೆ ವಿಚಾರದಲ್ಲಿ ಕೆಇಎ ರಾಷ್ಟ್ರೀಯ ವೈದ್ಯಕೀಯ ಆಯೋಗದ ಜತೆಗೂ ನಿರಂತರ ಸಂಪರ್ಕದಲ್ಲಿ ಇದ್ದು, ಈ ವಾರದಲ್ಲಿ ರಾಷ್ಟ್ರಮಟ್ಟದ ವೈದ್ಯಕೀಯ ಕೌನ್ಸಲಿಂಗ್ ದಿನಾಂಕಗಳನ್ನು ಪ್ರಕಟಿಸುವ ಸಾಧ್ಯತೆ ಇದೆ. ಬಳಿಕ ರಾಜ್ಯದ ಸೀಟು ಹಂಚಿಕೆಯ ವೇಳಾಪಟ್ಟಿ ಪ್ರಕಟಿಸಲಾಗುವುದು ಅಂತಾ ಹೇಳಿದ್ದು ಅಭ್ಯರ್ಥಿಗಳು ಪ್ರತಿನಿತ್ಯ ಕನಿಷ್ಠ ಎರಡು ಬಾರಿ ಕೆಇಎ ವೆಬ್ ಸೈಟ್ ಗೆ ಭೇಟಿ ಕೊಡಬೇಕು. ಆ ಮೂಲಕ ಕಾಲಕಾಲಕ್ಕೆ ಕೆಇಎ ಹೊರಡಿಸುವ ಪ್ರಕಟಣೆಗಳನ್ನು ಗಮನಿಸಿ, ಸೂಕ್ತ ತೀರ್ಮಾನಗಳನ್ನು ತೆಗೆದುಕೊಳ್ಳಬೇಕು ಅಂತಾ ಅವರು ಸಲಹೆ ನೀಡಿದ್ದಾರೆ.

## ಪ್ರಕರಣ ದಾಖಲು

2023ರಲ್ಲಿ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡಿದ 7,053 ಪ್ರಕರಣಗಳು ದಾಖಲಾಗಿದ್ದವು. ನಿಯಮ ಉಲ್ಲಂಘಿಸುವವರ ವಿರುದ್ಧ ವಿಶೇಷ ಕಾರ್ಯಾಚರಣೆಗಳಿಂದಾಗಿ ಈ ವರ್ಷದ ಪ್ರಕರಣಗಳ ಸಂಖ್ಯೆ ಹೆಚ್ಚಾಗುವ ನಿರೀಕ್ಷೆಯಿದೆ ಎಂದು ಜಂಟಿ ಪೊಲೀಸ್ ಕಮಿಷನರ್ (ಸಂಚಾರ) ಎಂಎನ್ ಅನುಚೇತ್ ಹೇಳಿದ್ದಾರೆ.

ಪೊಲೀಸರು 1,263 ಡ್ರೈವಿಂಗ್ ಲೈಸೆನ್ಸ್‌ಗಳನ್ನು ವಶಕ್ಕೆ ಪಡೆದಿದ್ದಾರೆ ಮತ್ತು ಮದ್ಯಪಾನ ಮಾಡಿ ಚಾಲನೆ ಪ್ರಕರಣಗಳಲ್ಲಿ ಅಮಾನತುಗೊಳಿಸಲು ಐದು ಆರ್‌ಸಿಗಳನ್ನು ಪ್ರಾದೇಶಿಕ ಸಾರಿಗೆ ಕಚೇರಿಗಳಿಗೆ ಕಳುಹಿಸಿದ್ದಾರೆ.

ಬೆಂಗಳೂರಿನಲ್ಲಿ ಜೂನ್ 30 ರವರೆಗೆ ಈ ವರ್ಷ 431 ಮಾರಣಾಂತಿಕ ಮತ್ತು 2,015 ಮಾರಣಾಂತಿಕವಲ್ಲದ ಅಪಘಾತಗಳು ಸಂಭವಿಸಿವೆ. 258 ಚಾಲಕರ ಆರ್‌ಸಿಯನ್ನು ಅಮಾನತಿಗೆ ಕಳುಹಿಸಲಾಗಿದೆ ಮತ್ತು ಈ ವರ್ಷ ಮಾರಣಾಂತಿಕ ಅಪಘಾತಗಳಿಗೆ ಕಾರಣವಾದ 95 ಮಂದಿಯ ಆರ್‌ಸಿಯನ್ನು ಅಮಾನತುಗೊಳಿಸಲಾಗಿದೆ ಎಂದು ಟ್ರಾಫಿಕ್ ಪೊಲೀಸರು ತಿಳಿಸಿದ್ದಾರೆ.

## ಇಸ್ಮಾಯಿಲ್ ಹತ್ಯೆ

ಇದೀಗ ಇಸ್ರೇಲ್ ದಾಳಿಯಲ್ಲಿ ಹಮಾಸ್ ಮುಖ್ಯಸ್ಥನನ್ನ ಹತ್ಯೆಗೈದಿದ್ದು ಸೇಡು ತೀರಿಸಿಕೊಂಡಿದೆ ಎಂದು ವರದಿಗಳು ಉಲ್ಲೇಖಿಸಿವೆ. ಹಮಾಸ್ ನಾಯಕನ ಹತ್ಯೆಗೆ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ತೀವ್ರ ಸಂತಾಪ ಸೂಚಿಸಿದೆ.

**ದಾಳಿಯಲ್ಲಿ ಸತ್ತಿದ್ದೆಷ್ಟು ಮಂದಿ :** ಇಸ್ರೇಲ್-ಹಮಾಸ್ ನಡುವೆ ನಡೆದ ಭೀಕರ ದಾಳಿಯಲ್ಲಿ ಈವರೆಗೆ 40,000ಕ್ಕೂ ಹೆಚ್ಚು ಮಂದಿ ಜೀವ ಕಳೆದುಕೊಂಡಿದ್ದಾರೆ. ಈ ಪೈಕಿ 39,145 ಮಂದಿ ಪ್ಯಾಲೆಸ್ತೀನಿಯರು ಹಾಗೂ 1,478 ಮಂದಿ ಇಸ್ರೇಲಿಯನ್ನರು ಪ್ರಾಣ ಕಳೆದುಕೊಂಡಿದ್ದಾರೆ. 108 ಪತ್ರಕರ್ತರು ತಮ್ಮ ಜೀವ ತೆತ್ತಿದ್ದಾರೆ ಎಂದು ಹೇಳಲಾಗಿದೆ.

## ದುಷ್ಕರ್ಮಿಗಳು

ವೀಡಿಯೊದಲ್ಲಿ ದೋಣಿಯ ಮುಂಭಾಗದಲ್ಲಿ ಇರಿಸಲಾದ ಶವದ ಪಕ್ಕದಲ್ಲಿ ವ್ಯಕ್ತಿಯೊಬ್ಬರು ನಿಂತು ಅದು ಸರಿಯಾಗಿ ಬಿಗಿಯಾಗಿದೆಯೇ ಎಂದು ಪರೀಕ್ಷಿಸುತ್ತಿರುವುದನ್ನು ಕಾಣಬಹುದು. ಬಳಿಕ ಮೂವರು ಪುರುಷರು ಮಹಿಳೆಯ ದೇಹವನ್ನು ನೀರಿಗೆ ತಳ್ಳಿರುವುದು ವಿಡಿಯೋದಲ್ಲಿ ಸೆರೆಯಾಗಿದೆ.

@SachinGuptaUP ಎಂಬ ಟ್ವಿಟರ್ ಖಾತೆಯಲ್ಲಿ ವಿಡಿಯೋ ಹಂಚಿಕೊಳ್ಳಲಾಗಿದೆ. ಜುಲೈ 30 ರಂದು ಹಂಚಿಕೊಳ್ಳಲಾಗಿರುವ ಈ ವಿಡಿಯೋ ಒಂದೇ ದಿನದಲ್ಲಿ ಒಂದು ಲಕ್ಷಕ್ಕೂ ಅಧಿಕ ವೀಕ್ಷಣೆಯನ್ನು ಪಡೆದುಕೊಂಡಿದೆ.

ವರದಿಗಳ ಪ್ರಕಾರ, ಸಾಮಾಜಿಕ ಮಾಧ್ಯಮದಲ್ಲಿ ವೀಡಿಯೊ ಕಾಣಿಸಿಕೊಂಡ ಕೂಡಲೇ, ಹಾಪುರ್ ಪೊಲೀಸರು ತನಿಖೆ ಪ್ರಾರಂಭಿಸಿದ್ದು, ವೀಡಿಯೊದಲ್ಲಿ ಕಂಡುಬರುವ ಜನರನ್ನು ಗುರುತಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ವರದಿಯಾಗಿದೆ.

ಇಡೀ ಘಟನೆಯು ಮರ್ಯಾದಾ ಹತ್ಯೆಯ ವಿಷಯವಾಗಿರಬಹುದು ಎಂದು ಪ್ರಾಥಮಿಕ ವರದಿಗಳು ಸೂಚಿಸುತ್ತವೆ. ಕೊಲೆಯನ್ನು ಬೇರೆ ಸ್ಥಳದಲ್ಲಿ ಮಾಡಿ ನಂತರ ಮೃತದೇಹವನ್ನು ದೋಣಿಯಲ್ಲಿ ಸಾಗಿಸಿ ಗಂಗಾ ನದಿಗೆ ಎಸೆಯಲಾಗಿದೆ ಎಂದು ಹೇಳಲಾಗಿದೆ.

## ಬಿಎಂಟಿಸಿ

ಬಸ್ ಟಿಕೆಟ್ ದರ ಹೆಚ್ಚಳ ಮಾಡಿ 4 ವರ್ಷಗಳಾಗಿವೆ. ದರ ಹೆಚ್ಚಳವಾಗಿದೆ, ಬಿಡಿ ಭಾಗಗಳ ದರ ಹೆಚ್ಚಳವಾಗಿದೆ, ನೌಕರರಿಗೆ ಸಂಬಳ ಹೆಚ್ಚಳ ಮಾಡಲಾಗಿದೆ. ನಾಲ್ಕು ನಿಗಮಗಳು ನಷ್ಟದಲ್ಲಿದೆ ದರ ಏರಿಕೆ ಅನಿವಾರ್ಯ ಎಂದು ನಿಗಮಗಳು ಮನವಿ ಮಾಡಿವೆ. ಎಂದು ಸಾರಿಗೆ ಮುಖಂಡ ಜಗದೀಶ್ ತಿಳಿಸಿದ್ದಾರೆ.

ರಾಜ್ಯ ಸರ್ಕಾರ ಈಗಾಗಲೇ ಡಿಸೇಲ್ ಮೇಲೆ ಸುಮಾರು ಮೂರೂವರೆ ರುಪಾಯಿಯಷ್ಟು ದರ ಏರಿಕೆ ಮಾಡಿದ್ದು, ಇದರಿಂದ ನಾಲ್ಕು ನಿಗಮದ ಬಸ್ಸುಗಳಿಗೆ ಡಿಸೇಲ್ ಹಾಕಿಸಲು ತುಂಬಾ ಕಷ್ಟ ಆಗುತ್ತಿದೆ. ಹೆಚ್ಚುವರಿಯಾಗಿ ತಿಂಗಳಿಗೆ 15 ಕೋಟಿ ರೂ. ಹಣ ಬೇಕಾಗುತ್ತದೆ. ವರ್ಷಕ್ಕೆ ಬರೋಬ್ಬರಿ 190 ರಿಂದ 200 ಕೋಟಿಯಷ್ಟು ಹೆಚ್ಚುವರಿ ಹೊರೆ ಆಗುತ್ತದೆ. ಟೈರ್ ಟ್ಯೂಬ್ ಗಳ ದರ ವಿಪರೀತವಾಗಿ ಹೆಚ್ಚಾಗಿದೆ. ದರ ಹೆಚ್ಚಳ ಮಾಡದಿದ್ದರೆ ನಿಗಮಗಳು ಉಳಿಯುವುದಿಲ್ಲ ಎಂದು ಸಾರಿಗೆ ನಿಗಮಗಳು ಸರ್ಕಾರಕ್ಕೆ ಮನವಿ ಮಾಡಿವೆ. ಮತ್ತೊಂದೆಡೆ, ಪ್ರಯಾಣಿಕರು ಮಾತ್ರ ದರ ಏರಿಕೆ ಮಾಡಬೇಡಿ. ಈಗಾಗಲೇ ಎಲ್ಲದರ ದರ ಏರಿಕೆ ಆಗಿದೆ ಎಂದು ಮನವಿ ಮಾಡುತ್ತಿದ್ದಾರೆ.

# ಭದ್ರಾ ನದಿ ಅಬ್ಬರಕ್ಕೆ ಬಾಳೆಹೊನ್ನೂರು ಪಟ್ಟಣ ಜಲಾವೃತ



**ಚಿಕ್ಕಮಗಳೂರು:** ಭದ್ರಾ ನದಿ ಅಬ್ಬರಕ್ಕೆ ಬಾಳೆಹೊನ್ನೂರು ಪಟ್ಟಣ ಜಲಾವೃತವಾಗಿದೆ. ಭಾಗಶಃ ಹಸಿರು, ಮಣ್ಣು ಮಿಶ್ರಿತದ ಮಳೆ ನೀರಿನಲ್ಲಿ ಬಾಳೆಹೊನ್ನೂರು ಮುಳುಗಿದೆ.

ಸಮೃದ್ಧ ಮಳೆಯಿಂದ ಪರಿಸರ ಹಚ್ಚಹಸಿರಾಗಿತ್ತು. ಆದರೆ ಕಳೆದ ಎರಡು ದಿನಗಳಿಂದ ಸುರಿದ ಭಾರೀ ಮಳೆಗೆ ಭದ್ರಾ ನದಿ ಉಕ್ಕಿ ಹರಿದಿದ್ದು ಪಟ್ಟಣದ ತಗ್ಗು ಪ್ರದೇಶಗಳು ಭದ್ರಾ ನದಿ ದಂಡೆಯಲ್ಲಿರುವ ತೋಟಗಳು ಸಂಪೂರ್ಣ ಮುಳುಗಿದೆ.

ಚಿಕ್ಕಮಗಳೂರು ಜಿಲ್ಲೆಗೆ ಇಂದು ಸಹ ರೆಡ್ ಅಲರ್ಟ್ ಜಾರಿಯಾಗಿದೆ. ರಾಜ್ಯದ ನಾಲ್ಕು ಜಿಲ್ಲೆಗೆ ರೆಡ್ ಅಲರ್ಟ್ ಜಾರಿಯಾಗಿದ್ದರೆ ಮೂರು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಜಾರಿಯಾಗಿದೆ.

ದಕ್ಷಿಣ ಕನ್ನಡ, ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗೆ ರೆಡ್ ಅಲರ್ಟ್ ಜಾರಿಯಾಗಿದ್ದು, ಭಾರೀ ಮಳೆ ಬೀಳಲಿದೆ. ಉತ್ತರ ಕನ್ನಡ,ಉಡುಪಿ, ಹಾಸನ ಜಿಲ್ಲೆಗಳಿಗೆ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಜಾರಿ ಮಾಡಿದೆ. ಬೆಳಗಾವಿ, ಮೈಸೂರಿಗೆ ಯೆಲ್ಲೋ ಅಲರ್ಟ್ ಜಾರಿಯಾಗಿದೆ.

## ದಕ್ಷಿಣ ಕನ್ನಡ, ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗೆ ರೆಡ್ ಅಲರ್ಟ್



**ಬೆಂಗಳೂರು:** ರಾಜ್ಯದ ನಾಲ್ಕು ಜಿಲ್ಲೆಗೆ ರೆಡ್ ಅಲರ್ಟ್ ಜಾರಿಯಾಗಿದ್ದರೆ ಮೂರು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಜಾರಿಯಾಗಿದದೆ

ದಕ್ಷಿಣ ಕನ್ನಡ, ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗೆ ರೆಡ್ ಅಲರ್ಟ್ ಜಾರಿಯಾಗಿದ್ದು, ಭಾರೀ ಮಳೆ ಬೀಳಲಿದೆ. ಉತ್ತರ ಕನ್ನಡ, ಉಡುಪಿ, ಹಾಸನ ಜಿಲ್ಲೆಗಳಿಗೆ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಜಾರಿ ಮಾಡಿದೆ. ಬೆಳಗಾವಿ, ಮೈಸೂರಿಗೆ ಯೆಲ್ಲೋ ಅಲರ್ಟ್ ಜಾರಿಯಾಗಿದೆ.

ರೆಡ್ ಅಲರ್ಟ್ ಜಾರಿಯಾದ ಜಿಲ್ಲೆಗಳ ಪೈಕಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಭಾರೀ ಮಳೆಯಾಗಲಿದೆ. ಗಂಟೆಗೆ 40-50 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಯಿದೆ. ಉತ್ತರ ಕನ್ನಡ, ಬೆಳಗಾವಿ ಮತ್ತು ಮೈಸೂರು ಜಿಲ್ಲೆಗಳ ಒಂದು ಅಥವಾ ಎರಡು ಸ್ಥಳಗಳಲ್ಲಿ ಭಾರೀ ಮಳೆಯಾಗಬಹುದು ಎಂದು ಐಎಂಡಿ ತಿಳಿಸಿದೆ.

## ಉದ್ಯೋಗಾವಕಾಶಕ್ಕೆ ಕಾರ್ಯಾಗಾರ

**ಚಿಕ್ಕಬಳ್ಳಾಪುರ:** 2024ನೇ ಸಾಲಿನಲ್ಲಿ ದ್ವಿತೀಯ ಪಿ.ಯು.ಸಿಯಲ್ಲಿ ಶೇ. 70 ಕ್ಕಿಂತ ಅಧಿಕ ಅಂಕ ಪಡೆದಿರುವ ವಾಣಿಜ್ಯ, ಕಲಾ, ವಿಜ್ಞಾನ ವಿದ್ಯಾರ್ಥಿಗಳಿಗೆ ಭಾರತ ದೇಶದ ದೊಡ್ಡ 3ನೇ ಸಾಫ್ಟ್ವೇರ್ ಕಂಪನಿಯಾದ HCL Techನಲ್ಲಿ ಸ್ಟೈಫಂಡ್ ಸಹಿತ ತರಬೇತಿ, ಖಾಯಂ ಉದ್ಯೋಗ ಜೋತೆಗೆ HCL Tech ನಿಂದ ಹಣಕಾಸಿನ ಸಹಾಯದೊಂದಿಗೆ ಉನ್ನತ (ಪದವಿ) ಶಿಕ್ಷಣ ಪಡೆಯಬಹುದಾಗಿರುತ್ತದೆ. ಈ ಉಪಯೋಗಗಳನ್ನು ಪಡೆಯಲು ಜಿಲ್ಲಾ ಕೌಶಲ್ಯಾಭಿವೃದ್ಧಿ ಕಚೇರಿ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ಇವರ ಜಂಟಿಯಾಗಿ ಜುಲೈ 31 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಬಿ.ಬಿ.ರಸ್ತೆಯ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಉಚಿತ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಲು ನಿಮ್ಮ ಸ್ಮಾರ್ಟ್ ಫೋನ್, ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಮತ್ತು ಪಿ.ಯು.ಸಿ ಅಂಕಪಟ್ಟಿ ಮತ್ತು ಆಧಾರ್ ಕಾರ್ಡ್ ನೊಂದಿಗೆ ಹಾಜರಾಗುವುದು. ಅಭ್ಯರ್ಥಿಗಳು ttps://bit.ly/TechBeeKSDC ಲಿಂಕ್ ಮೂಲಕ ನೋಂದಣಿಯಾಗಬೇಕು. ಹೆಚ್ಚಿನ ಮಾಹಿತಿಗಾಗಿ ಆರ್.ಪಿ.ರೆಡ್ಡಿ 8722790340, ಪವನ ಶರ್ಮಾ 9845454471 ಸಂಪರ್ಕಿಸಬಹುದೆಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪ್ರಸಾದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಬಿರಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಕರ್ನಾಟಕ ಸಾಹಿತ್ಯ ಅಕಾಡೆಮಿಯು ಕನ್ನಡ ಜಾಣ-ಜಾಣೆಯರ ವೇದಿಕೆ ಬೆಂಗಳೂರು ಇವರ ಸಹಯೋಗದಲ್ಲಿ 2024ರ ಸೆಪ್ಟೆಂಬರ್ ಕೊನೆಯ ವಾರದಲ್ಲಿ ಹಾಸನ ಜಿಲ್ಲೆಯಲ್ಲಿ ರಾಜ್ಯ ಮಟ್ಟದ ಮೂರು ದಿನಗಳ ಪಿ.ಲಂಕೇಶ್ ಕೃತಿಗಳ ಅಧ್ಯಯನ ಶಿಬಿರವನ್ನು ನಡೆಸಲು ಉದ್ದೇಶಿಸಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯಿರುವ 20 ರಿಂದ 40 ವರ್ಷ ವಯಸ್ಸುಳ್ಳ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಆಗಸ್ಟ್ 17 ರೊಳಗೆ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್ ಸೈಟ್ https://karnatakasahithyaacademy.org ಇಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದೆಂದು ಕನ್ನಡ ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಎನ್.ಕರಿಯಪ್ಪ ರವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಚಾಮುಂಡೇಶ್ವರಿ ವಾರ್ಷಿಕೋತ್ಸವ

**ಕೋಲಾರ:** ಲಕ್ಷ್ಮೀಸಾಗರದ ಚಾಮುಂಡೇಶ್ವರಿ ಹುಟ್ಟುಹಬ್ಬ ಮತ್ತು ದೇಗುಲದ 30 ನೇ ವಾರ್ಷಿಕೋತ್ಸವ ಭಾನುವಾರ ಅದ್ದೂರಿಯಾಗಿ ನಡೆಯಿತು. ಕೋಡಿ ಮಠದ ಶ್ರೀಗಳು ಭಾಗವಹಿಸಿದ್ದು ಭಕ್ತರನ್ನು ಆಶೀರ್ವದಿಸಿದರು. ದೇವಾಲಯದ ಧರ್ಮಾಧಿಕಾರಿ ಚಂದ್ರಣ್ಣ ಮಾತನಾಡಿ, ಮನೆಯಲ್ಲಿ ಉರಿಯುತ್ತಿರುವ ನಿರಂತರ ಜ್ಯೋತಿ ಕುರಿತು ಕೋಡಿಮಠದ ತಾಳೆಗರಿಯಲ್ಲಿ ಉಲ್ಲೇಖವಿದೆ. ಮಹಾರಾಜರು ಮೈಸೂರಿನಿಂದ ಕುರುಡುಮಲೆ ದೇವಾಲಯಕ್ಕೆ ಹೋಗುವ ಮಾರ್ಗಮಧ್ಯೆ ರಾತ್ರಿ ತಂಗಿದ್ದ ಸ್ಥಳದಲ್ಲಿ ಹಚ್ಚಿದ ದೀಪದ ಸ್ವರೂಪ ಇದಾಗಿದೆ. ಪ್ರಪಂಚಕ್ಕೆ 2007ರಿಂದ ಜ್ಯೋತಿ ದರ್ಶನದ ಭಾಗ್ಯ ಸಿಕ್ಕಿದ್ದರೂ ವಾಸ್ತವವಾಗಿ ಅನಾದಿ ಕಾಲದಿಂದಲೂ ದೀಪ ಉರಿಯುತ್ತಿದೆ ಎಂದು ತಿಳಿಸಿದರು. ಚಾಮುಂಡೇಶ್ವರಿ ತಾಯಿ ಮತ್ತು ಅಖಂಡ ಜ್ಯೋತಿ ದರ್ಶನದಿಂದ ಎಲ್ಲ ಕಷ್ಟ ಕಾರ್ಪಣ್ಯಗಳು ನಿವಾರಣೆ ಆಗುತ್ತಿದ್ದು ಜನರಿಗೆ ನೆಮ್ಮದಿ ಸಿಕ್ಕಿದೆ. ಸ್ವತಃ ಕೋಡಿ ಮಠದ ಶ್ರೀಗಳು ವರ್ಷಕ್ಕೆ ಮೂರು ಬಾರಿ ದೇಗುಲಕ್ಕೆ ಬಂದು ಪೂಜೆ-ಧ್ಯಾನ ಮಾಡುವ ಮೂಲಕ ಸ್ಥಳದ ಮಹಿಮೆಯನ್ನು ಎತ್ತಿ ಹಿಡಿಯುತ್ತಿದ್ದಾರೆ. ಚಾಮುಂಡೇಶ್ವರಿ ಹಬ್ಬಕ್ಕೆ ಬೆಂಗಳೂರಿನ ಗರುಡಾಚಾರ್ ಪಾಳ್ಯದ ಚಾಮುಂಡೇಶ್ವರಿ ಸೇವಾ ಸಮಿತಿ ಮುಖಂಡರು ಪ್ರತ್ಯಂಗಿರಿ ಅಲಂಕಾರ ಮಾಡುವ ಮೂಲಕ ಹಿರಿಮೆ ಹೆಚ್ಚಿಸಿದ್ದಾರೆ ಎಂದು ನುಡಿದರು. ನಾಗಲಾಪುರ ಮಠದ ಶಿವಾನಂದ ಶಿವಯೋಗಿ ರಾಜೇಂದ್ರ ಶ್ರೀ, ಕಲಾವಿದ ಎನ್.ಆರ್.ಜ್ಞಾನಮೂರ್ತಿ, ದೇವಿ ಭಕ್ತರಾದ ಕೆ.ಆರ್.ಪುರಂನ ಕೆ.ಟಿ.ರಾಜಕುಮಾರ್, ಕೋಲಾರ ಮಂಜುನಾಥ್, ಅಶೋಕ್, ಪ್ರಶಾಂತ್, ವಿನಯ್, ಜಗದೀಶ್,ಭರತ್, ದೀಕ್ಷಿತ್,ಜೀವನ್, ಅಕ್ಷಯ್, ಅರ್ಚಕ ನಾಗಭೂಷಣ್ ಶಾಸ್ತ್ರಿ, ಶಿಕ್ಷಣ ಇಲಾಖೆ ಅಧಿಕಾರಿ ಸಿ.ಆರ್.ಅಶೋಕ್ ಇದ್ದರು.



# ರಸಪ್ರಶ್ನೆಗಳ ಮೂಲಕ ಬೌದ್ಧಿಕ ಜ್ಞಾನದ ಅವಶ್ಯಕ: ಡಾ.ಪಿ.ಪರಮಶಿವಯ್ಯ

**ತುಮಕೂರು:** ವಿದ್ಯಾರ್ಥಿಗಳನ್ನು ರಸಪ್ರಶ್ನೆಗಳ ಮೂಲಕ ಜ್ಞಾನ ಬಂಡಾರವನ್ನು ಹೆಚ್ಚಿಸುತ್ತದೆ, ಹಾಗೂ ವಿದ್ಯಾರ್ಥಿಗಳ ಬೌದ್ಧಿಕ ಜ್ಞಾನದ ವಿಸ್ತರಣೆವೂ ಮೂಲಕ ರಸಪ್ರಶ್ನೆ ಸಹಕಾರಿಯಾಗಲಿದೆ. ಅಲ್ಲದೆ ಯಾವುದೇ ಒಬ್ಬ ವಿದ್ಯಾರ್ಥಿ ಅಧ್ಯಯನ ಪ್ರಶ್ನೆಗಳನ್ನು ಕ್ವಿಜ್‌ಪ್ರಶ್ನೆಗಳ ಮೂಲಕ ತಯಾರಿ ಮಾಡಿಕೊಳ್ಳಬೇಕು. ಆ ರೀತಿ ಮಾಡಿಕೊಂಡಿದ್ದರೆ ಜ್ಞಾನವನ್ನು ಉತ್ತಮ ಪಡಿಸಿಕೊಳ್ಳಬಹುದು ಹಾಗೂ ಐ.ಎ.ಎಸ್. ಮತ್ತು ಕೆ.ಎ.ಎಸ್. ಇನ್ನೂ ಮುಂತಾದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಯಾವ ರೀತಿ ಅಭ್ಯಾಸ ಮಾಡಬೇಕೆಂದು ತುಮಕೂರು ವಿಶ್ವವಿದ್ಯಾಲಯದ ವಾಣಿಜ್ಯಶಾಸ್ತ್ರದ ಹಿರಿಯ ಪ್ರಾಧ್ಯಾಪಕರಾದ ಡಾ.ಪಿ.ಪರಮಶಿವಯ್ಯರವರು ವಿದ್ಯಾರ್ಥಿಗಳಿಗೆ ತಿಳಿಸಿದರು.

ನಗರದ ಶ್ರೀದೇವಿ ತಾಂತ್ರಿಕ ಮಹಾವಿದ್ಯಾಲಯದ ಎಂ.ಬಿ.ಎ. ವಿಭಾಗದ ವತಿಯಿಂದ ತುಮಕೂರು ಜಿಲ್ಲೆಯಲ್ಲಿನ ಪದವಿ ವಿದ್ಯಾರ್ಥಿಗಳಿಗಾಗಿ ಬಿಜ್‌ಕ್ವಿಜ್ ಸ್ಪರ್ಧೆಯನ್ನು ಜುಲೈ 26 ರಂದು ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಇದೇ ಸಂದರ್ಭದಲ್ಲಿ ಅಧ್ಯಕ್ಷತೆ ವಹಿಸಿದ್ದ ಶ್ರೀದೇವಿ ಸಂಸ್ಥೆಯ ಮಾನವ ಸಂಪನ್ಮೂಲ ಮತ್ತು ಮಾಹಿತಿ ತಂತ್ರಜ್ಞಾನ ನಿರ್ದೇಶಕರಾದ ಎಂ.ಎಸ್.ಪಾಟೀಲ್‌ರವರು ಮಾತನಾಡುತ್ತಾ ಬಿಜ್‌ಕ್ವಿಜ್ ಸ್ಪರ್ಧೆಗಳಿಗೆ ಭಾಗವಹಿಸಿದ್ದ ವಿವಿಧ




ಪದವಿ ಕಾಲೇಜು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು. ಕಾರ್ಯಕ್ರಮದಲ್ಲಿ ಶ್ರೀದೇವಿ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ನರೇಂದ್ರ ವಿಶ್ವನಾಥ್‌ರವರು ಮಾತನಾಡುತ್ತಾ ವಿದ್ಯಾರ್ಥಿಗಳು ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಲು, ಛಲ ಹಾಗೂ ಪರಿಶ್ರಮವಿದ್ದರೆ ಸುಲಭವಾಗಿ ಸಾಧಿಸಬಹುದು. ಪ್ರತಿಯೊಬ್ಬರೂ ಆದರ್ಶ ವ್ಯಕ್ತಿಗಳಾಗಬೇಕು, ವಿದ್ಯಾರ್ಥಿಗಳು ಪ್ರತಿಯೊಂದು ಕ್ಷಣವನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ಎಂ.ಬಿ.ಎ. ವಿಭಾಗದ ಮುಖ್ಯಸ್ಥರಾದ ಡಾ.ಕೆ.ಎಸ್.ರಾಮಕೃಷ್ಣರವರು ಮಾತನಾಡುತ್ತಾ ತುಮಕೂರು ಜಿಲ್ಲೆಯಲ್ಲಿನ 20 ಪದವಿ ಕಾಲೇಜುಗಳಿಂದ ತಲಾ ಇಬ್ಬರು ವಿದ್ಯಾರ್ಥಿಗಳ ತಂಡದಂತೆ ಸುಮಾರು 100 ತಂಡಗಳು ಭಾಗವಹಿಸಿದ್ದಾರೆ ಎಂದು ತಿಳಿಸಿದರು. ಈ ಬಿಜ್‌ಕ್ವಿಜ್ 2024 ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವನ್ನು ತುಮಕೂರು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಾದ ಶೆಹಾ.ಯು ಮತ್ತು ಎಂ.ಎಸ್. ಸಂಧ್ಯಾರವರು 10 ಸಾವಿರ ನಗದು ಬಹುಮಾನವನ್ನು ಹಾಗೂ ಶ್ರೀ ಸಿದ್ದಾರ್ಥ ಇನ್ಸ್ಟ್ಯೂಟ್ ಆಫ್ ಬಿಸಿನೆಸ್ ಮ್ಯಾನೇಜ್ಮೆಂಟ್ ಕಾಲೇಜಿನ ವಿದ್ಯಾರ್ಥಿಗಳಾದ ಹೆಚ್.ಚೇತನ್ ಮತ್ತು ಎನ್.ಹೆಚ್.ಶ್ರೀಹರಿರವರು 5 ಸಾವಿರ ನಗದನ್ನು ಎರಡನೇ ಬಹುಮಾನವಾಗಿ, ಹಾಗೂ ಇದೇ ಕಾಲೇಜಿನ ಆರ್.ಪ್ರೇತಮ್ ಮತ್ತು ಎಸ್.ಶಿವಕುಮಾರ್‌ರವರು 3 ಸಾವಿರ ನಗದು ಮೂರನೇ ಬಹುಮಾನವನ್ನು ಪಡೆದುಕೊಂಡು ತಮ್ಮ ತಮ್ಮ ಕಾಲೇಜುಗಳಿಗೆ ಕೀರ್ತಿಯನ್ನು ತಂದಿದ್ದಾರೆ.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ತುಮಕೂರು ವಿಶ್ವವಿದ್ಯಾಲಯದ ವಾಣಿಜ್ಯಶಾಸ್ತ್ರದ ಹಿರಿಯ ಪ್ರಾಧ್ಯಾಪಕರಾದ ಡಾ.ಪಿ.ಪರಮಶಿವಯ್ಯರವರಿಗೆ ಸನ್ಮಾನಿಸಲಾಗಿತ್ತು. ಶ್ರೀದೇವಿ ಎಂ.ಬಿ.ಎ.ವಿಭಾಗದ ಉಪನ್ಯಾಸಕರಾದ ಡಾ.ಬಿ.ಎನ್.ಪ್ರತಾಪ್, ಡಾ.ಗ್ರೇಸ್ ಹೇಮಲತಾ, ಪ್ರೊ.ಟಿ.ಎಂ.ಪ್ರವೀಣ್ ಕುಮಾರ್, ಪ್ರೊ.ಆರ್.ಬಿಂದು, ಪ್ರೊ.ಎಸ್.ದಿವ್ಯಾ ಹಾಗೂ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿ- ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ತುಂಬಾ ಉತ್ಸಾಹದಿಂದ ಭಾಗವಹಿಸಿದ್ದರು.

# ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿ ವೇತನ

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರಾದ ಬಿ.ಝಡ್.ಜಮೀರ್ ಹೇಳಿಕೆ

**ಬೆಂಗಳೂರು:** ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದ್ದು, 1 ರಿಂದ 8ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ 80 ಕೋಟಿ ರೂ.ವೆಚ್ಚದಲ್ಲಿ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ ಎಂದು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಚಿವರಾದ ಬಿ.ಝಡ್.ಜಮೀರ್ ತಿಳಿಸಿದರು.

ವಸಂತನಗರದ ಡಿ.ದೇವರಾಜ ಅರಸು ಭವನದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ವಿದ್ಯಾರ್ಥಿಗಳಿಗೆ ಹಾಗೂ ಪ್ರಾಂಶುಪಾಲರಿಗೆ ಹಮ್ಮಿಕೊಳ್ಳಲಾಗಿದ್ದ ಶೈಕ್ಷಣಿಕ ಕಾರ್ಯಾಗಾರದ ಉದ್ಘಾಟನೆಯನ್ನು ಗಿಡಗಳಿಗೆ ನೀರುಣಿಸುವ ಮೂಲಕ ನೆರವೇರಿಸಿ ಮಾತನಾಡಿದ ಸಚಿವರು, ವಿದ್ಯಾಭ್ಯಾಸವಿಲ್ಲದೆ ಏನೂ ಮಾಡಲು ಸಾಧ್ಯವಿಲ್ಲ ಎಂದು ಮನಗಂಡಿರುವ ಸರ್ಕಾರ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ 3200 ಕೋಟಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ 1,488 ಕೋಟಿ ರೂಗಳನ್ನು ಶಿಕ್ಷಣಕ್ಕಾಗಿ ಮೀಸಲಿಡಲಾಗಿದೆ ಎಂದರು.

2023-24ನೇ ಸಾಲಿನಲ್ಲಿ ಅಲ್ಪಸಂಖ್ಯಾತರ 62 ವಸತಿ ಶಾಲೆಗಳನ್ನು ಪಿಯು ಕಾಲೇಜುಗಳನ್ನಾಗಿ ಉನ್ನತೀಕರಿಸಲಾಗಿದೆ ಹಾಗೂ ಅಲ್ಪಸಂಖ್ಯಾತರ 50 ಮೊರಾರ್ಜಿದೇಸಾಯಿ ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯಾಬಲವನ್ನು ದ್ವಿಗುಣಗೊಳಿಸಲಾಗಿದ್ದು, ಇದರಿಂದಾಗಿ 3,387 ವಿದ್ಯಾರ್ಥಿಗಳು ಪ್ರವೇಶಾತಿಯನ್ನು ಪಡೆದಿದ್ದಾರೆ. 4,03,877 ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಒಟ್ಟು ರೂ.58.95 ಕೋಟಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನವನ್ನು ಹಾಗೂ 77,330 ವಿದ್ಯಾರ್ಥಿಗಳಿಗೆ ರೂ.70.20 ಕೋಟಿ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನವನ್ನು ಪಾವತಿಸಲಾಗಿದೆ 500 ಕೋಟಿ ರೂ.ಗಳ ವೆಚ್ಚದಲ್ಲಿ 35 ಕನ್ನಡ ಹಾಗೂ ಇಂಗ್ಲೀಷ್ ಭಾಷಾ ಪ್ರಯೋಗಾಲಯಗಳನ್ನು ತೆರೆಯಲಾಗಿದೆ ಎಂದರು.

ಅಲ್ಪಸಂಖ್ಯಾತರ ಪದವಿ ಪೂರ್ವ ವಸತಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸುಮಾರು 6 ಸಾವಿರ ವಿದ್ಯಾರ್ಥಿಗಳಿಗೆ ಪ್ರಥಮ ವರ್ಷದಿಂದಲೇ ನೀಟ್, ಜೆ.ಇ.ಇ, ಸಿ.ಇ.ಟಿ, ಸಿ.ಎ. ಫೌಂಡೇಷನ್/ ಸಿಎಲ್‌ಎಟಿ ಹಾಗೂ ಇತರೆ ಪ್ರವೇಶ ಪರೀಕ್ಷೆಗಳ ತಯಾರಿಗಾಇ ಪ್ರತಿಷ್ಠಿತ ಸಂಸ್ಥೆಗಳಿಂದ ಎರಡು



ವರ್ಷಗಳ ತರಬೇತಿಯನ್ನು ಪ್ರಾರಂಭಿಸಲಾಗಿದೆ. ಪ್ರತಿಷ್ಠಿತ ವಿದೇಶದ ವಿಶ್ವವಿದ್ಯಾಲಯಗಳಲ್ಲಿ ಪದವಿ ಮತ್ತು ಸ್ನಾತಕೋತ್ತರ ವ್ಯಾಸಂಗ ಮಾಡಲು ಅನುಕೂಲವಾಗುವಂತೆ ನಿಗಮದಿಂದ ರೂ.20 ಲಕ್ಷದವರೆಗೆ ಸಾಲ ಒದಗಿಸುವ ಯೋಜನೆಯನ್ನು ಹೊಸದಾಗಿ ಅನುಷ್ಠಾನಗೊಳಿಸಲಾಗಿದ್ದು, ಒಟ್ಟು 66 ವಿದ್ಯಾರ್ಥಿಗಳಿಗೆ 650 ಲಕ್ಷ ರೂ.ಗಳನ್ನು ಮಂಜೂರು ಮಾಡಲಾಗಿದೆ.

ವಿದೇಶಿ ವಿದ್ಯಾರ್ಥಿ ವೇತನ ಯೋಜನೆಯಡಿಯಲ್ಲಿ ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ 304 ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಒಟ್ಟು ರೂ.28.11 ಕೋಟಿಗಳ ವಿದ್ಯಾರ್ಥಿ ವೇತನ ಪಾವತಿಸಲಾಗಿದೆ. ಎಂ.ಫಿಲ್ ಮತ್ತು ಪಿ.ಹೆಚ್.ಡಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆಯಡಿ 241 ವಿದ್ಯಾರ್ಥಿಗಳಿಗೆ ರೂ.425 ಕೋಟಿಗಳನ್ನು ಹಾಗೂ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಯೋಜನೆಯಡಿ 8,854 ವಿದ್ಯಾರ್ಥಿಗಳಿಗೆ ರೂ.4.25 ಕೋಟಿಗಳನ್ನು ವೆಚ್ಚ ಮಾಡಲಾಗಿದೆ ಎಂದರು.

ವಿದ್ಯಾಸಿರಿ ಯೋಜನೆಯಡಿ 2023-24ನೇ ಸಾಲಿಗೆ ರೂ.10.31 ಕೋಟಿಗಳನ್ನು ವೆಚ್ಚ ಮಾಡಲಾಗಿದ್ದು 6,963 ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದಿದ್ದಾರೆ. ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಉತ್ತೇಜನ ಯೋಜನೆಯಡಿ ರೂ.6.04 ಕೋಟಿಗಳನ್ನು ವೆಚ್ಚ ಮಾಡಲಾಗಿದ್ದು, 2,418 ಬಿ.ಎಡ್ ಮತ್ತು ಡಿ.ಎಡ್ ಹಾಗೂ ಐಐಟಿ, ಐಐಎಂ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದಿದ್ದಾರೆ.

ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ 10 ಸಾವಿರ ರೂ.ಗಳ ನಗದು ಬಹುಮಾನ, ಅಭಿನಂದನಾ ಪ್ರಶಸ್ತಿ ಫಲಕ, ಪದಕ, ಹಾಗೂ ಪಿಯು ವಿದ್ಯಾರ್ಥಿಗಳಿಗೆ 15 ಸಾವಿರ ರೂ.ಗಳ ನಗದು ಬಹುಮಾನ, ಅಭಿನಂದನಾ ಪ್ರಶಸ್ತಿ ಫಲಕ, ಪದಕ ಹಾಗೂ ಸಚಿವರು ವೈಯಕ್ತಿಕವಾಗಿ ಈ ಎಲ್ಲಾ ವಿದ್ಯಾರ್ಥಿಗಳಿಗೆ ಸ್ಮಾರ್ಟ್ ವಾಚ್ ನೀಡಿ ಸನ್ಮಾನ ಮಾಡಿದರು.

ಶಿಕ್ಷಕರುಗಳಿಗೆ ಆಭಿನಂದನಾ ಪ್ರಶಸ್ತಿ ಪತ್ರ ಮತ್ತು ವೈಯಕ್ತಿವಾಗಿ ಸ್ಮಾರ್ಟ್ ವಾಚ್ ನೀಡಿ ಸನ್ಮಾನ ಮಾಡಿ ಅಭಿನಂದಿಸಿದ ಸಚಿವರು, ಪ್ರಸಕ್ತ ಸಾಲಿನಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಪ್ರತಿ ವರ್ಷವೂ ನಡೆಸಲಾಗುವುದು. ಈ ರೀತಿಯ ಕಾರ್ಯಕ್ರಮದಿಂದ ಬೇರೆ ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷರಿಗೆ ಸ್ಫೂರ್ತಿದಾಯಕವಾಗುತ್ತದೆ ಎಂದರು.

ಪ್ರತಿಯೊಬ್ಬ ಮಕ್ಕಳಿಗೂ ಶಿಕ್ಷಣ ಸಿಗಬೇಕು ಹಾಗೂ ಯಾರೂ ಶಿಕ್ಷಣದಿಂದ ವಂಚಿತರಾಬಾರದು ಎಂದು ಬಡ ಮಕ್ಕಳಿಗಾಗಿ ಸರ್ಕಾರ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಬಡವರ ಮಕ್ಕಳೆ ಚೆನ್ನಾಗಿ ಓದುತ್ತಿದ್ದು, ಪೋಷಕರು ಮಕ್ಕಳಿಗೆ ಶಿಕ್ಷಣ ಕೊಡಿಸಿ, ಅವರನ್ನು ಉನ್ನತ ಮಟ್ಟಕ್ಕೆ ಬೆಳೆಸಬೇಕು. ಮಕ್ಕಳು ಸಹ ಪೋಷಕರ ಕಷ್ಟವನ್ನು ಅರಿತು ಅವರಿಗೆ ಹೊರೆಯಾಗದಂತೆ ಶಿಕ್ಷಣ ಪಡೆದು ಉನ್ನತ ಸ್ಥಾನಕ್ಕೇರಬೇಕು ಎಂದರು. ಇದೇ ಶೈಕ್ಷಣಿಕ ವರ್ಷದಿಂದ ಪಿಯುಸಿಯಲ್ಲಿ ಶೇ.98 ರಷ್ಟು ಅಂಕ ಪಡೆದ ಅಲ್ಪಸಂಖ್ಯಾತ ವಿದ್ಯಾರ್ಥಿಗಳನ್ನು ನಾನೇ ವೈಯಕಿಕವಾಗಿ ದತ್ತು ಪಡೆದು ಅವರು ಯಾವ ಕಾಲೇಜಿನಲ್ಲಿ ಯಾವ ಶಿಕ್ಷಣ ಪಡೆದರು ಸಹ ನಾನು ಅವರಿಗೆ ಶಿಕ್ಷಣ ಕೊಡಿಸುತ್ತೇನೆ. ಹಾಸ್ಟೆಲ್ ವಿದ್ಯಾರ್ಥಿಗಳನ್ನು ಶಿಕ್ಷಕರು ತಮ್ಮ ಮಕ್ಕಳಂತೆ ಭಾವಿಸಿ ಅವರಿಗೆ ಗುಣಮಟ್ಟದ ಶಿಕ್ಷಣ ನೀಡಬೇಕೆಂದರು. 2023-24ನೇ ಸಾಲಿನ ಇಲಾಖಾ ಸಾಧನಾ ಪುಸ್ತಕ ಹಾಗೂ 2024-25ನೇ ಸಾಲಿನ ಶೈಕ್ಷಣಿಕ ಕ್ರಿಯಾ ಯೋಜನೆ ಮತ್ತು 2024-25ನೇ ಸಾಲಿನ ಕ್ರಿಯಾ ಯೋಜನೆ ಪುಸ್ತಕ ಬಿಡುಗಡೆ ಮಾಡಿದರು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧ್ಯಕ್ಷರಾದ ನಿಸ್ಸಾರ್ ಅಹಮದ್, ಕಾರ್ಯದರ್ಶಿ ಮನೋಜ್ ಜೈನ್, ನಿರ್ದೇಶಕರು ಹಾಗೂ ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು ಉಪಸ್ಥಿತರಿದ್ದರು.

# ವ್ಯಸನ ಮುಕ್ತ ದಿನಾಚರಣೆ ಪರಿಣಾಮಕಾರಿಯಾಗಿರಲಿ

**ರಾಮನಗರ:** ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಆಯೋಜಿಸಲಾಗುವ ವ್ಯಸನ ಮುಕ್ತ ದಿನಾಚರಣೆಯನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಚಂದ್ರಯ್ಯ ಆರ್. ಅವರು ನಿರ್ದೇಶನ ನೀಡಿದರು.

ಅವರು ಜು.29ರ ಸೋಮವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣದಲ್ಲಿರುವ ಅಪರ ಜಿಲ್ಲಾಧಿಕಾರಿಗಳ ಕೊಠಡಿಯಲ್ಲಿ ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆ ಆಚರಿಸುವ ಕುರಿತು ಆಯೋಜಿಸಲಾಗಿದ್ದ ಪೂರ್ವಭಾವಿ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶಾಲಾ-ಕಾಲೇಜು ವಿದ್ಯಾರ್ಥಿಗಳಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಹೆಚ್ಚಿನ ಮಾಹಿತಿ ನೀಡುವ ಮೂಲಕ ಅವರಲ್ಲಿ ದುಶ್ಚಟಗಳಿಂದಾಗುವ ಹಾನಿಗಳ ಬಗ್ಗೆ ಜಾಗೃತಿ ಮೂಡಿಸಬೇಕು. ಈಗಾಗಲೇ ಶಾಲಾ ಕಾಲೇಜು ವ್ಯಾಪ್ತಿಯ 100 ಮೀಟರ್ ಅಂತರದಲ್ಲಿ ತಂಬಾಕು ಪದಾರ್ಥಗಳ ಮಾರಾಟ ನಿಷೇಧವಿದೆ. ಅದಾಗ್ಯೂ ಅವುಗಳ ಉಲ್ಲಂಘನೆ ಕಂಡುಬಂದರೆ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿಗಳು ಕಠಿಣ ಕ್ರಮ ಕೈಗೊಳ್ಳಬೇಕು. ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಆ. 01 ರಂದು ಶಾಲೆ-ಕಾಲೇಜುಗಳಲ್ಲಿ ಜರುಗುವ ಪ್ರಾರ್ಥನೆ ವೇಳೆಯಲ್ಲಿ ವಿದ್ಯಾರ್ಥಿಗಳಿಗೆ ಮಾಹಿತಿ ನೀಡುವಂತೆ ಶಾಲಾ ಹಾಗೂ ಕಾಲೇಜುಗಳಿಗೆ ಶಿಕ್ಷಣ ಇಲಾಖೆಯವರು ನಿರ್ದೇಶನ ನೀಡುವಂತೆ ಸೂಚಿಸಿದ ಅವರು ಹೆಚ್ಚು ವ್ಯಸನಿಗಳಿರುವ ಜಿಲ್ಲೆಯ ಗ್ರಾಮಗಳನ್ನು ಗುರುತಿಸಿ, ಅಲ್ಲಿಯೂ ಮಾದಕ ವಸ್ತುಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಜಿಲ್ಲಾ ಪಂಚಾಯತ್ ನಿಂದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸಲಹೆ ನೀಡಿದರು.

ಬೀಡಿ-ಸಿಗರೇಟು ಸೇದುವುದು, ತಂಬಾಕು ಅಗಿಯುವುದು, ಡ್ರಗ್ಸ್ ಬಳಕೆಯಂತೆಯೇ ವಿದ್ಯಾರ್ಥಿಗಳು ಅತಿಯಾದ ಮೊಬೈಲ್ ಬಳಸುವುದು ಕೂಡ ಇತ್ತೀಚಿನ ದಿನಗಳಲ್ಲಿ ವ್ಯಸನವಾಗಿ ಮಾರ್ಪಟಿದೆ ಮಾದಕ ವ್ಯಸನಗಳಿಂದ ಮುಕ್ತರಾಗಲು ನುರಿತ ಉಪನ್ಯಾಸರಿಂದ ಉಪನ್ಯಾಸ ಹಮ್ಮಿಕೊಳ್ಳಬೇಕು ಹಾಗೂ ಶಾಲೆಗಳಲ್ಲಿ ಈ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯಿಂದ ಪ್ರಬಂಧ ಸ್ಪರ್ಧೆಗಳನ್ನು ಸಹ ಹಮ್ಮಿಕೊಂಡು ಉತ್ತಮವಾಗಿ ಪ್ರಬಂಧ ರಚಿಸಿ ವಿಜೇತರಾಗುವ ವಿದ್ಯಾರ್ಥಿಗಳಿಗೆ ಬಹುಮಾನ ಹಾಗೂ ಪ್ರಮಾಣ ಪತ್ರವನ್ನು ವಿತರಿಸುವಂತೆ ಅವರು ನಿರ್ದೇಶನ ನೀಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ರವಿರಾಜ್ ಎಚ್.ಜಿ., ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶಿವಕುಮಾರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ರಮೇಶ್ ಬಾಬು, ಆರೋಗ್ಯ ಇಲಾಖೆಯ ಡಾ. ಆದರ್ಶ, ಶಿಕ್ಷಣ ಇಲಾಖೆಯ ಚಿನ್ನಸ್ವಾಮಿ, ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



# ಹಂಸ ಸಾಂಸ್ಕೃತಿಕ ಸೌರಭ, ಹಂಸ ಸನ್ಮಾನ್ ಪ್ರದಾನ

**ಬೆಂಗಳೂರು:** ನಾಡಿನ ಸಂಸ್ಕೃತಿಕ ಚಳುವಳಿಯ ಸಂದರ್ಭದಲ್ಲಿ ಪ್ರಮುಖ ಸಂಸ್ಥೆಯಾದ ಹಂಸ ಜ್ಯೋತಿ ಟ್ರಸ್ಟ್ ನ 49ನೇ ವರ್ಷಾಚರಣೆ ಪ್ರಯುಕ್ತ ಹಂಸ ಸಾಂಸ್ಕೃತಿಕ ಸೌರಭ ಹಾಗೂ ಹಂಸ ಸನ್ಮಾನ ಪ್ರಶಸ್ತಿ ಪ್ರದಾನ ವನ್ನು ಜುಲೈ 31 ಬುಧವಾರ ಸಂಜೆ 4:30 ಗಂಟೆಗೆ ಬೆಂಗಳೂರು ಮಲ್ಲತಹಳ್ಳಿ ಕಲಾಗ್ರಾಮದ ಸಾಂಸ್ಕೃತಿಕ ಸಮುಚಯ ಭವನದಲ್ಲಿ ಆಯೋಜಿಸಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಕಾರ್ಯಕ್ರಮ ಉದ್ಘಾಟಿಸುವರು, ಹಿರಿಯರಂಗ ಸಂಘಟಕ ಕರ್ನಾಟಕ ನಾಟಕ ಅಕಾಡೆಮಿ ಮಾಜಿ ಅಧ್ಯಕ್ಷ ಅಧ್ಯಕ್ಷತೆ ವಹಿಸುವ ಸಮಾರಂಭದಲ್ಲಿ ಕಿದ್ವಾಯಿ ಆಸ್ಪತ್ರೆಯ ನಿವೃತ್ತ ನಿರ್ದೇಶಕ ಡಾ. ಸಿ ರಾಮಚಂದ್ರ, ಅಬಕಾರಿ ಇಲಾಖೆ ಉಪಾಯುಕ್ತ ಡಾ ಬಿ ಆರ್ ಹಿರೇಮಠ, ಕನ್ನಡ ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಅಶೋಕ್ ಎನ್ ಚಲವಾದಿ, ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆ ಸಹಾಯಕ ನಿರ್ದೇಶಕಿ ಕೆ ಶಶಿಕಲಾ ಮೊದಲಾದ ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ಆರಂಭದಲ್ಲಿ ಹಂಸ ಸಾಂಸ್ಕೃತಿಕ ವೈಭವ ನಾದತರಂಗಿಣಿ ತಂಡದಿಂದ ವಿದ್ವಾನ್ ಬೆಟ್ಟ ವೆಂಕಟೇಶ್ ನಿರ್ದೇಶನದಲ್ಲಿ ಖ್ಯಾತ ಕಲಾವಿದರು ಗಳಿಂದ ಹಂಸ ನಾದ ವೈಭವ ತಾಳವಾದ್ಯ ಕಚೇರಿ, ಸ್ವಪ್ನ ಹಾಗೂ ನಿನಾದ ಸಂಸ್ಕೃತಿ ಕಲಾಕೇಂದ್ರದ ಖ್ಯಾತ ಗಾಯಕರಿಂದ ಹಂಸ ಸುಗಮ ಸಂಗೀತ ವೈಭವ, ಬ್ಯಾಟರಾಯನಪುರ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿಯರಿಂದ ಹಂಸ ಯಕ್ಷಗಾನ ವೈಭವ ಮತ್ತು ವಿದುಷಿ ಬಿ ಎಸ್ ಇಂದು ನಾಡಿಗ್ ನಿರ್ದೇಶನದಲ್ಲಿ ಶಾರದಾ ನೃತ್ಯಾಲಯ ತಂಡದವರಿಂದ ಹಂಸ ನೃತ್ಯ ವೈಭವ ನಡೆಯಲಿದೆ.

ಕಾರ್ಮಿಕ ಇಲಾಖೆ ಜಂಟಿ ಕಾರ್ಯದರ್ಶಿ ಹಾಗೂ ಚಲನಚಿತ್ರ ಕಲಾವಿದ ಡಾ ಸಂಗಮೇಶ ಉಪಾಸೇ, ಹಿರಿಯ ಸಾಂಸ್ಕೃತಿಕ ಸಂಘಟಕ ಡಿಬಿ ಮಲ್ಲಿಕಾರ್ಜುನ ಸ್ವಾಮಿ ಮಹಾಮನೆ, ಪ್ರಾಂಶುಪಾಲ ಆರ್ ಎನ್ ಸುಬ್ಬರಾವ್, ಸಮಾಜ ಸೇವಕಿ ಡಾ.ಸುಕನ್ಯಾ ಹಿರೇಮಠ, ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ರಾಜ್ಯಾಧ್ಯಕ್ಷ ರೋಶಿನಿ ಗೌಡ, ಉದ್ಯಮಿ ಕೆ ಶ್ರೀನಿವಾಸಲು ರೆಡ್ಡಿ, ಟಿಎನ್ ಗಂಗಾಧರ್, ಶಿಲ್ಪ ಶ್ರೀ, ಆರ್ಪಿ ರವಿಶಂಕರ್, ಶಿರಸ್ತೆದಾರ್ ಎಂ ವಿಜಯಲಕ್ಷ್ಮಿ, ನೃತ್ಯ ಶಿಕ್ಷಕಿ ವಿದುಷಿ ಬಿಎಸ್ ಇಂದು ನಾಡಿಗ್, ಶುಶ್ರೂಷ ಅಧಿಕ್ಷಕಿ ಎನ್ ಸುಮಿತ್ರಾ ದೇವಿ, ಲೆಕ್ಕಪರಿಶೋಧಕ ಕೆ ಅಂಜನ್ ಕುಮಾರ್, ಮೃದಂಗ ಲಯವಾದ್ಯ ಕಲಾವಿದ ವಿದ್ವಾಂ ಬೆಟ್ಟ ವೆಂಕಟೇಶ್, ಬ್ಯಾಂಕ್ ಆಫ್ ಬರೋಡಾದ ಸಹಾಯಕ ಕಾರ್ಯನಿರ್ವಾಹಕ ಸದಾನಂದ ಜಿ ಕುರುಡಿಕೇರಿ ಇವರುಗಳಿಗೆ 2024ನೇ ಸಾಲಿನ ಹಂಸ ಸನ್ಮಾನ ಪ್ರಶಸ್ತಿ ಸೋಹಿಲ್ ಷಾ ಅವರಿಗೆ ಹಂಸ ಯುವ ಪುರಸ್ಕಾರ ಪ್ರದಾನ ಮಾಡಿ ಗೌರವಿಸಲಾಗುವುದು ಎಂದು ಆಯೋಜಕರಾದ ಹಂಸ ಜ್ಯೋತಿ ಟ್ರಸ್ಟ್‌ನ ಸಂಸ್ಥಾಪಕ ವ್ಯವಸ್ಥಾಪಕ ಟ್ರಸ್ಟಿ ಎಂ ಮುರುಳಿಧರ ಮತ್ತು ಹಿರಿಯ ಟ್ರಸ್ಟ್ ಎಂ ಆರ್ ನಾಗರಾಜ ನಾಯ್ಡು ತಿಳಿಸಿರುತ್ತಾರೆ.

# ಬಡವರು, ಸಾಧಕರಿಗೆ ಸಹಾಯ ಮಾಡುವ ಮನಸಿರಲಿ

**ಕೋಲಾರ:** ಮಕ್ಕಳು ಟಿ.ವಿ, ಮೊಬೈಲ್, ದುಚ್ಚಟ, ಸಿನಿಮಾಗಳಿಗೆ ದಾಸರಾಗದಂತೆ ಪೋಷಕರು ಎಚ್ಚರಿಕೆ ವಹಿಸಬೇಕು ಮತ್ತು ಪಾಠದ ಜೊತೆಗೆ ಆಟಗಳಲ್ಲೂ ಭಾಗವಹಿಸಿ ಎಂದು ಆರ್ಯವೈಶ್ಯ ಮಹಾ ಸಭಾ ರಾಜ್ಯ ನಿರ್ದೇಶಕ ಎನ್ ಸಿ ಸತೀಶ್ ಸಲಹೆ ನೀಡಿದರು.

ಜಿಲ್ಲಾ ಆರ್ಯ ವೈಶ್ಯ ಸಂಘ ಭಾನುವಾರ ಜನಾಂಗದ ವಿದ್ಯಾರ್ಥಿಗಳಿಗೆ ನಗರದ ಚನ್ನಯ್ಯ ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿದ್ಯಾರ್ಥಿಗಳು ಶಿಸ್ತಿನಿಂದ ವ್ಯಾಸಂಗ ಮಾಡಿ, ಉನ್ನತ ಸ್ಥಾನಗಳಿಗೆ ಏರಬೇಕು ಹಾಗೂ ಜನಾಂಗದ ಬಡವರಿಗೆ ಸಹಾಯ ಮಾಡುವ ಹೃದಯ ವೈಶಾಲ್ಯ ಬೆಳೆಸಿಕೊಳ್ಳಬೇಕು ಎಂದರು. ಕುಲಕಸುಬಿನಿಂದ ಜೀವನ ನಡೆಸಲು ಸಾಧ್ಯವಿಲ್ಲದಂತಾಗಿದೆ. ಮಕ್ಕಳನ್ನು ಶಾಲೆಗಳಿಗೆ ಸೇರಿಸಿ, ಉತ್ತಮ ಶಿಕ್ಷಣ ಕೊಡಿಸಿದರೆ ವಿವಿಧ ಕ್ಷೇತ್ರಗಳಲ್ಲಿ ಕೆಲಸ ನಿರ್ವಹಿಸುತ್ತಾರೆ ಎಂದು ಸಲಹೆ ನೀಡಿದರು. ಕೋಲಾರದಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಸ್ಥಳವನ್ನು ಈಗಾಗಲೇ ಪರಿಶೀಲನೆ ನಡೆಸಲಾಗಿದ್ದು ಮಂಜೂರಾತಿಗೆ ಶಾಸಕರು ಭರವಸೆ ಕೊಟ್ಟಿದ್ದಾರೆ. ಶಿಕ್ಷಣ ಸಂಸ್ಥೆಯನ್ನು ಆರಂಭಿಸುವ ಚಿಂತನೆಯಿದ್ದು



ಶೀಘ್ರದಲ್ಲೇ ಈ ಸಂಬಂಧ ನಿರ್ಧಾರ ಕೈಗೊಳ್ಳಲಾಗುತ್ತದೆ. ಆರ್ಯವೈಶ್ಯ ಮಹಾ ಸಭಾದ ಎಲ್ಲ ಯೋಜನೆಗಳನ್ನು ಕೋಲಾರ ಜಿಲ್ಲೆಗೆ ಗರಿಷ್ಠವಾಗಿ ಒದಗಿಸುವ ಮೂಲಕ ಮಾದರಿ ಕೆಲಸ ಮಾಡಲಾಗಿದೆ ಎಂದು ಸತೀಶ್ ನುಡಿದರು. ನಮ್ಮ ಜನಾಂಗ ಸಾಮಾಜಿಕ ಮತ್ತು ರಾಜಕೀಯವಾಗಿ ಹಿಂದುಳಿದಿದೆ. ಕುಲಕಸುಬಿನಿಂದ ಜೀವನ ನಡೆಸಲು ಸಾಧ್ಯವಿಲ್ಲದಂತಾಗಿದೆ. ಮಕ್ಕಳನ್ನು ಶಾಲೆಗಳಿಗೆ ಸೇರಿಸಿ, ಉತ್ತಮ ಶಿಕ್ಷಣ ಕೊಡಿಸಿದರೆ ವಿವಿಧ ಕ್ಷೇತ್ರಗಳಲ್ಲಿ ಕೆಲಸ ನಿರ್ವಹಿಸುತ್ತಾರೆ ಎಂದು ಸಲಹೆ ನೀಡಿದರು. ಪತ್ರಕರ್ತರ ಸಂಘದ ರಾಜ್ಯ ಸಮಿತಿ ಸದಸ್ಯ ವಿ.ಮುನಿರಾಜು ಮಾತನಾಡಿ, ಆರ್ಯವೈಶ್ಯ ಸಮುದಾಯದ ಒಗ್ಗಟ್ಟು ಮಾದರಿಯಾಗಿದ್ದು ಯುವಜನತೆ ಉತ್ತಮವಾಗಿ ಅಧ್ಯಯನ ಮಾಡಿ ಮುನ್ನಡೆ ಸಾಧಿಸಬೇಕೆಂದು ಸೂಚಿಸಿದರು. ರಂಗವಿಜಯ ಸಹಯೋಗದೊಂದಿಗೆ'' ವಾಸವಿ ದಿವ್ಯ ದರ್ಶನ ''ನೃತ್ಯ ರೂಪಕ ನಡೆಯಿತು ಇದೇ ಸಂದರ್ಭದಲ್ಲಿ ಸಮಾಜದ ಸಾಧಕರಿಗೆ ಸನ್ಮಾನಿಸಲಾಯಿತು .

ಆರ್ಯವೈಶ್ಯ ಮಹಾ ಸಭಾ ಕಾರ್ಯದರ್ಶಿ ಕೆ.ಆರ್.ಕೃಷ್ಣ ಆರ್ಯವೈಶ್ಯ ಮಹಾ ಸಭಾ ಜಿಲ್ಲಾ ಕಾರ್ಯದರ್ಶಿ ಬಿ.ಎಸ್.ಮಂಜುನಾಥ್, ಮಹಿಳಾ ಮಂಡಳಿ ಅಧ್ಯಕ್ಷೆ ಎ.ಎಸ್.ಜಯಶ್ರೀಗೋವಿಂದರಾಜ್, ಮುಖಂಡರಾದ ರಾಘವೇಂದ್ರ, ಬಾಲಾಜಿ, ಆರ್.ಡಿ.ಉಮಾಶಂಕರ್, ಖಜಾಂಚಿ ಶ್ರೀನಿವಾಸಮೂರ್ತಿ ಹಾಗೂ ಕುಲಭಾಂದವರಿದ್ದರು .

# ವೀರಶೈವ ಧರ್ಮ ಸರ್ವರಿಗೂ ಒಳಿತನ್ನೇ ಬಯಸಿದೆ

**ಬೆಂಗಳೂರು:** ವೀರಶೈವ ಧರ್ಮ ಸರ್ವರಿಗೂ ಒಳಿತನ್ನೇ ಬಯಸುತ್ತ ಬಂದಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಅಹಿಂಸಾದಿ ದಶ ಧರ್ಮ ಸೂತ್ರಗಳನ್ನು ಬೋಧಿಸಿ ಮಾನವ ಜನಾಂಗವನ್ನು ಉದ್ಧರಿಸಿದ್ದಾರೆ. ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಭಾರತ ನಗರದಲ್ಲಿ ಸಮಸ್ತ ವೀರಶೈವ ಲಿಂಗವಂತ ಸಮಾಜ ಆಯೋಜಿಸಿದ್ದ ಇ?ಲಿಂಗಪೂಜೆ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡುತ್ತಿದ್ದರು.

ಜಾತಿಗಿಂತ ನೀತಿ, ತತ್ವಕ್ಕಿಂತ ಆಚರಣೆ, ಮಾತಿಗಿಂತ ಕೃತಿ, ಬೋಧನೆಗಿಂತ ಸಾಧನೆ, ದಾನಕ್ಕಿಂತ ದಾಸೋಹ, ಚರಿತ್ರೆಗಿಂತ ಚಾರಿತ್ರ್ಯಕ್ಕೆ ಒತ್ತುಕೊಟ್ಟಿದ್ದು ವೀರಶೈವ ಧರ್ಮ. ಧರ್ಮ ಪ್ರಧಾನವಾದ ಭಾರತ ದೇಶದಲ್ಲಿ ಹಲವಾರು ಧರ್ಮಗಳು, ಪರಂಪರೆಗಳು ಬೆರೆತುಕೊಂಡು ಬಂದಿದ್ದರೂ ಸರ್ವರಿಗೂ ಒಳಿತನ್ನು ಬಯಸುವುದೇ ಅವೆಲ್ಲವುಗಳ ಗುರಿ ಆಗಿದೆ. ಮಾನವ ಜನ್ಮದ ಉನ್ನತಿ ಮತ್ತು ಶ್ರೇಯಸ್ಸಿಗೆ ಧರ್ಮವೇ ಮೂಲ. ಸತ್ಯಂ ವಧ, ಧರ್ಮಂ ಚರ ಎಂಬ ವಾಕ್ಯದಂತೆ ಸತ್ಯವನ್ನು ಮಾತಾಡುವುದು, ಧರ್ಮದಂತೆ ನಡೆಯುವುದನ್ನು ಎಲ್ಲರೂ ರೂಢಿಸಿಕೊಳ್ಳಬೇಕು. ಜಾತಿ ಧರ್ಮದ ಹೆಸರಿನಲ್ಲಿ ದ್ವೇ? ಭಾವನೆ ಬೆಳೆಯಬಾರದು. ವೈಚಾರಿಕತೆ ಹೆಸರಿನಲ್ಲಿ ಧರ್ಮ-ಸಂಸ್ಕೃತಿ



ನಾಶವಾಗಬಾರದು ಎಂದರು. ಸಮಾರಂಭದಲ್ಲಿ ತಾವರೆಕೆರೆ ಶಿಲಾಮಠದ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತ ನೀಡಿದರು. ಎಡೆಯೂರು, ಸಿದ್ಧರಬೆಟ್ಟ, ದೊಡ್ಡಗುಣಿ, ಸಂಗೊಳ್ಳಿ ಮಠದ ಶ್ರೀಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಹಿರಿಯ ಚಿತ್ರನಟ ದೊಡ್ಡಣ್ಣ, ನಾಟಕ ಅಕಾಡೆಮಿ ಅಧ್ಯಕ್ಷ ಕೆ.ವಿ.ನಾಗರಾಜಮೂರ್ತಿ, ಎಸ್‌ಜೆಆರ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ಯು.ಎಂ.ಬಸವರಾಜ್, ಆರ್.ವಿ.ಭದ್ರಯ್ಯ ಗ್ರಂಧಿಗೆ ಭಂಡಾರದ ಆರ್.ಬಿ.ಬಸವರಾಜ್, ಬೀರೂರು ಶಿವಸ್ವಾಮಿ, ಗಾನಸುಧೆ ಮುಖ್ಯಸ್ಥ ಶಿವಶಂಕರ ಶಾಸ್ತ್ರಿ ಮತ್ತಿತರರು ಪಾಲ್ಗೊಂಡಿದ್ದರು. ಮುಖ್ಯರಸ್ತೆಯಲ್ಲಿ ನಡೆದ ಸಾರೋಟು ಮೆರವಣಿಗೆಯಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳನ್ನು ಬರಮಾಡಿಕೊಳ್ಳಲಾಯಿತು. ಉತ್ಸವದಲ್ಲಿ ಪಾಲ್ಗೊಂಡಿದ್ದ ವೀರಗಾಸೆ ಮತ್ತಿತರ ಮಂಗಳವಾದ್ಯಗಳು ಹಾಗೂ ಮಹಿಳೆಯರ ಪೂರ್ಣಕುಂಭ ನಗರದ ಜನರ ಗಮನಸೆಳೆಯಿತು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಭಕ್ತರಿಗೆ ಶುಭ ಹಾರೈಸಿದರು.

# ಬಡವರಿಗೆ ಸಹಾಯ ಮಾಡುವ ಹೃದಯ ವೈಶಾಲ್ಯ ಬೆಳೆಸಿಕೊಳ್ಳಿ: ತಬಲ ನಾರಾಯಣಪ್ಪ

**ಕೋಲಾರ:** ಮಕ್ಕಳು ಟಿ.ವಿ, ಮೊಬೈಲ್, ದುಚ್ಚಟ, ಸಿನಿಮಾಗಳಿಗೆ ದಾಸರಾಗದಂತೆ ಪೋಷಕರು ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾ ಕುಂಬಾರ ಸಂಘದ ಅಧ್ಯಕ್ಷ ಎ.ತಬಲ ನಾರಾಯಣಪ್ಪ ಸಲಹೆ ನೀಡಿದರು.

ಜಿಲ್ಲಾ ಕುಂಬಾರರ ಸಂಘ ಭಾನುವಾರ ಜನಾಂಗದ ವಿದ್ಯಾರ್ಥಿಗಳಿಗೆ ನಗರದ ಕೆಇಬಿ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಹಾಗೂ ಜಿಲ್ಲಾಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿದ್ಯಾರ್ಥಿಗಳು ಶಿಸ್ತಿನಿಂದ ವ್ಯಾಸಂಗ ಮಾಡಿ, ಉನ್ನತ ಸ್ಥಾನಗಳಿಗೆ ಏರಬೇಕು ಹಾಗೂ ಜನಾಂಗದ ಬಡವರಿಗೆ ಸಹಾಯ ಮಾಡುವ ಹೃದಯ ವೈಶಾಲ್ಯ ಬೆಳೆಸಿಕೊಳ್ಳಬೇಕು ಎಂದರು.

ಕುಂಬಾರ ಜನಾಂಗ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯವಾಗಿ ಹಿಂದುಳಿದಿದೆ. ಕುಲಕಸುಬಿನಿಂದ ಜೀವನ ನಡೆಸಲು ಸಾಧ್ಯವಿಲ್ಲದಂತಾಗಿದೆ. ಮಕ್ಕಳನ್ನು ಶಾಲೆಗಳಿಗೆ ಸೇರಿಸಿ, ಉತ್ತಮ ಶಿಕ್ಷಣ ಕೊಡಿಸಿದರೆ ವಿವಿಧ ಕ್ಷೇತ್ರಗಳಲ್ಲಿ ಕೆಲಸ ನಿರ್ವಹಿಸುತ್ತಾರೆ ಎಂದು ಸಲಹೆ ನೀಡಿದರು.



ಈ ಸಂದರ್ಭದಲ್ಲಿ ಸಣ್ಣ ನೀರಾವರಿ ಅಧೀಕ್ಷಕ ಅಭಿಯಂತರರು ಬಿ.ಪಿ.ಸಂಜೀವರಾಜು, ವಿಧಾನ ಪರಿಷತ್ ಅಪರ ಕಾರ್ಯದರ್ಶಿ ಎಸ್.ನಿರ್ಮಲ, ಕಾರ್ಯಪಾಲಕ ಅಭಿಯಂತರರು ಎಚ್.ಎಂ.ಟಿ.ಸ್ವಾಮಿ, ಜಿಲ್ಲಾ ಕೈಮಗ್ಗ ಮತ್ತು ಜವಳಿ ಇಲಾಖೆ ಉಪನಿರ್ದೇಶಕ ಕೆ. ಎಸ್. ಮಂಜುನಾಥ, ಜಿಲ್ಲಾ ಕುಂಬಾರರ ಸಂಘದ ಗೌರವಾಧ್ಯಕ್ಷ ವೆಂಕಟಾಸ್ವಾಮಿ, ಉಪಾಧ್ಯಕ್ಷ ಬಿ.ನಂಜುಂಡಪ್ಪ, ಗೌಡಹಳ್ಳಿ ವೆಂಕಟಸ್ವಾಮಿ, ಕೋಶಾಧಿಕಾರಿ ಶ್ರೀನಿವಾಸಪ್ಪ, ಕಾರ್ಯದರ್ಶಿ ಎನ್.ರೆಡ್ಡಪ್ಪ, ಕುಲಬಾಂಧವರು ಹಾಗೂ ಮತ್ತಿತರರು ಭಾಗವಹಿಸಿದ್ದರು.

# ರುದ್ರ ರಮಣೀಯವಾಗಿ ಹರಿಯುತ್ತಿದೆ ಕಾವೇರಿ

ಕರ್ನಾಟಕ ತಮಿಳುನಾಡಿನ ಜೀವನಾಡಿಯಾಗಿರುವ ಕಾವೇರಿ ತುಂಬಿ ಭೋರ್ಗರೆಯುತ್ತಿದ್ದು, ಇದೀಗ ಕರ್ನಾಟಕದ ಕೃಷ್ಣರಾಜ ಸಾಗರ ಮತ್ತು ಕಬಿನಿ ಜಲಾಶಯದಿಂದ ಸರಿ ಸುಮಾರು 1.70 ಲಕ್ಷಕ್ಕೂ ಹೆಚ್ಚು ಕ್ಯೂಸಕ್ನೀರು ನದಿ ಪಾತ್ರದ ಪ್ರದೇಶಕ್ಕೆ ಹರಿದು ಬಿಟ್ಟಿರುವುದರಿಂದ ಅಪಾಯದಮಟ್ಟ ಮೀರಿ ಹರಿಯುತ್ತಿದ್ದು, ಕರ್ನಾಟಕ ತಮಿಳುನಾಡು ಗಡಿಯಲ್ಲಿರುವ ಹೊಗೆನಕಲ್ ಜಲಪಾತದಲ್ಲಿ ಜಲವೈಭವ ಸೃಷ್ಟಿಯಾಗಿದೆ.

ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಶ್ರೀ ಮಲೆ ಮಹದೇಶ್ವರ ಬೆಟ್ಟದ ತಪ್ಪಲಲ್ಲಿನ ಗೋಪಿನಾಥಂ ಬಳಿಯ ಕರ್ನಾಟಕ ಮತ್ತು ತಮಿಳುನಾಡು ಗಡಿಯಲ್ಲಿರುವ ಹೊಗೆನಕಲ್ ಜಲಪಾತ ಸಾಗರದ ಮಾದರಿಯಲ್ಲಿ ಇಡೀ ಪರಿಸರ ಗೋಚರಿಸುತ್ತಿದೆ. ಹೊಗೆನಕಲ್ ಜಲಪಾತ ಕರ್ನಾಟಕ ಮತ್ತು ತಮಿಳುನಾಡು ಗಡಿಯಲ್ಲಿ ಬರುವ ಭಾರತದ ನಯಾಗರ ಎಂದೇ ಕರೆಸಿಕೊಳ್ಳುವ ಜಲಪಾತದಲ್ಲಿ ಕಲ್ಲು ಬಂಡೆಗಳಿಂದ ಧುಮುಕುತ್ತಿದ್ದ ನೀರು ಈಗ ಡ್ರೋನ್ ದೃಶ್ಯದಲ್ಲಿ ಸಾಗರದಂತೆ ಗೋಚರಿಸುತ್ತಿದ್ದು, ಹೊಗೆನಕಲ್ ಜಲಪಾತದಲ್ಲಿ ಜಲವೈಭವವೇ ಸೃಷ್ಟಿಯಾಗಿದೆ.

ಹೊಗೆನಕಲ್ ಜಲಪಾತ ರುದ್ರರಮಣೀಯವಾಗಿ



ಹೊರಹರಿವು ಹೆಚ್ಚಳವಾಗಿರುವುದರಿಂದ ಚಾಮರಾಜನಗರ ಹನೂರು ತಾಲೂಕಿನ ಹೊಗೆನಕಲ್ ಗಡಿ ಗ್ರಾಮದಲ್ಲೂ ಜಿಲ್ಲಾಡಳಿತ ಎಚ್ಚರಿಕೆ ವಹಿಸುವ ಮೂಲಕ ಪ್ರವಾಸಿಗರಿಗೆ ನಿಷೇಧ ಹೇರಿದೆ. ಅಲ್ಲದೇ ನದಿಯ ಪಾತ್ರದಲ್ಲಿರುವ ಜನರು ಸಹ ಸುರಕ್ಷಿತ ಸ್ಥಳಕ್ಕೆ ಹನೂರು ತಾಲೂಕಿನ ಗಡಿ ಹೊಗೆನಕಲ್ ಜಲಪಾತ ನೋಡಲು ತೆರಳುವಂತೆ ಚಾಮರಾಜನಗರ ಜಿಲ್ಲಾಡಳಿತ ಸೂಚನೆ ನೀಡಿ ಕಟ್ಟುನಿಟ್ಟಿನ ಮುಂಜಾಗ್ರತ ಕ್ರಮ ಸಹ ವಹಿಸುವ ಮೂಲಕ ಕ್ರಮ ಕೈಗೊಂಡಿದೆ. ತಮಿಳುನಾಡು ಹಾಗೂ ಕರ್ನಾಟಕ ಗಡಿ ಭಾಗದಲ್ಲಿ ಪ್ರವಾಸಿಗರಿಗೆ ಜಲಪಾತದ ಕಡೆ ಹೋಗಲು ನಿಷೇಧ ವಿಧಿಸುವ ಮೂಲಕ ಭಾರಿ ಕಟ್ಟುನಿಟ್ಟಿನ ಕ್ರಮವಹಿಸಿದೆ. ತಮಿಳುನಾಡಿನ ಹೊಗೆನಕಲ್ ಜಲಪಾತದ ತೆಪ್ಪ ನಡೆಸುವವರ ತೆಪ್ಪಗಳನ್ನು ಸಂರಕ್ಷಿಸುವ ಸ್ಥಳವೇ ಮುಳುಗಡೆ ಆಗಿದ್ದು, ತಮಿಳುನಾಡಿನ ಧರ್ಮಪುರಿ ಕೃಷ್ಣಗಿರಿ ಸೇಲಂ ಈ ರೋಡ್ ನಾಮಕಲ್ ತಿರುಚಿ ಕರೂರ್ಪಂಜಾ ಊರು ಭಾಗಗಳಲ್ಲಿ ಎಚ್ಚರಿಕೆ ವಹಿಸುವಂತೆ ಅಲ್ಲಿನ ಸಿಡಬ್ಲ್ಯೂಸಿ ಇಂಜಿನಿಯರ್ಪನ್ನೀರ್ ಪತ್ರಿಕಾ ಪ್ರಕಟಣೆ ಹೊರಡಿಸಿ ತಮಿಳುನಾಡಿನ ಭಾಗದಲ್ಲಿ ಭಾರಿ ಕಟ್ಟೆಚ್ಚರ ವಹಿಸಲಾಗಿದೆ. ಅದೇ ರೀತಿಯಾಗಿ ಕರ್ನಾಟಕದ ಭಾಗದಲ್ಲೂ ಸಹ ಪ್ರವಾಸಿಗರು ನೀರಿಗೆ ಇಳಿಯದಂತೆ ಕಟ್ಟೆಚ್ಚರ ವಹಿಸಲಾಗಿದೆ.

## ಆಚಾರ್ಯರು ಇಡೀ ವಿಶ್ವಕ್ಕೆ ಜ್ಞಾನ ಸಂಪನ್ನರು

**ಕೊಳ್ಳೇಗಾಲ:** ತಾಲೂಕು ಬ್ರಾಹ್ಮಣ ಸಂಘ ಮತ್ತು ವಾಗ್ದೇವಿ ವಿಪ್ರ ಮಹಿಳಾ ಸಂಘದ ಆಶ್ರಯದಲ್ಲಿ ಶ್ರೀಪ್ರಸನ್ನ ರಾಮಮಂದಿರದ ಆವರಣದಲ್ಲಿ ಆಚಾರ್ಯತ್ರಯರ ಜಯಂತಿ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಮೈಸೂರಿನ ಪ್ರಸಿದ್ಧ ಸಂಸ್ಕೃತ ವಿದ್ವಾಂಸರಾದ ಡಾ.ಹೆಚ್ ವಿ ನಾಗರಾಜ ರಾವ್ ರವರು ಉದ್ಘಾಟಿಸಿಟ್ಟು.

ನಂತರ ಮಾತನಾಡಿದ ಅವರು, ಆಚಾರ್ಯತ್ರಯರು ಹಿಮಾಲಯದ ಶಿಖರದಂತೆ. ಭಾರತದ ವೇದಾಂತವನ್ನು ರಕ್ಷಿಸಿ,ಮುಂದಿನ ಪೀಳಿಗೆಗೆ ನೀಡಿದ ಮಹಾನ್ ಚೇತನಗಳು ಎಂದು ಬಣ್ಣಿಸಿದರು. ಪ್ರತಿಯೊಬ್ಬರು ಗ್ರಂಥಗಳನ್ನು ಓದಿ ಅಧ್ಯಯನ ಮಾಡಿ ಜನರಿಗೆ ತಿಳಿಸಬೇಕು. ವೇದಗಳಲ್ಲಿ ಅಪಾರಜ್ಞಾನವಿದೆ. ಜ್ಞಾನದ ಚಿಂತನೆಯನ್ನು ಯುವ ಪೀಳಿಗೆಗೆ ನೀಡಿ ಸಂರಕ್ಷಿಸಬೇಕು. ಆಚಾರ್ಯರಾದ ಶ್ರೀ ಶಂಕರಾಚಾರ್ಯರು , ರಾಮಾನುಜಾಚಾರ್ಯರು, ಮಧ್ವಾಚಾರ್ಯರು ಭಾರತದ ವೇದಾಂತಗಳಿಗೆ ವಿವಿಧ ಅರ್ಥಗಳನ್ನು ನೀಡಿ ಜ್ಞಾನ,ಭಕ್ತಿ ,ಕರ್ಮ ಸಿದ್ದಾಂತಗಳನ್ನು ಜಗತ್ತಿಗೆ ನೀಡಿ ಮಾನವರನ್ನು ಕಲ್ಯಾಣಗೊಳಿಸಿದವರು. ಆಚಾರ್ಯರು ಇಡೀ ವಿಶ್ವಕ್ಕೆ ಜ್ಞಾನ ಸಂಪನ್ನರು. ವೇದಾಂತವನ್ನು ಜಗತ್ತಿಗೆ ತಮ್ಮ ಅರ್ಥ ಸಹಿತ ವಿವರಿಸಿದವರು. ಬ್ರಾಹ್ಮಣ್ಯದ ಮೂಲಕ ಸನ್ಮಾರ್ಗದಿಂದ ಸರ್ವರನ್ನು ಪ್ರೀತಿಸಿ ,ಗೌರವಿಸಿ, ಮಾರ್ಗದರ್ಶನ ನೀಡುವ ಶಕ್ತಿಯನ್ನು ಬೆಳೆಸಿಕೊಳ್ಳಿ ಎಂದರು..ಹಿರಿಯ ವಿದ್ವಾಂಸರಾದ ನಾಗರಾಜರಾವ್ ರವರನ್ನು ರೇಷ್ಮೆ ಶಾಲು ಹಾಗು ಫಲ ತಾಂಬೂಲ ನೀಡಿ ಗೌರವಿಸಲಾಯಿತು.

ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ರಾಷ್ಟ್ರೀಯ ಯುವ ಪ್ರಶಸ್ತಿ ಪುರಸ್ಕೃತ ಸುರೇಶ್ ಎನ್ ಋಗ್ವೇದಿ ಸನ್ಮಾನಿಸಿ ಗೌರವಿಸಿದರು. ಪ್ರತಿಭಾನ್ವಿತರು ರಾಷ್ಟ್ರದ ಸಮಾಜದ ಆಸ್ತಿ. ತಮ್ಮ ಜ್ಞಾನ ವನ್ನು ಸಮಾಜದ ಮುನ್ನಡೆಗೆ ಬಳಸಿ ಎಂದರು. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಉಪಾಧ್ಯಕ್ಷ ನಂ ಶ್ರೀಕಂಠ ಕುಮಾರ್ ಮಾತನಾಡಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆ ಕರ್ನಾಟಕ ರಾಜ್ಯದ ಸಮಸ್ತ ಬ್ರಾಹ್ಮಣರ ಅಭಿವೃದ್ಧಿಗೆ ಹಲವಾರು ಕಾರ್ಯ ಯೋಜನೆಗಳನ್ನು ವಿದ್ಯಾರ್ಥಿ ನಿಲಯವನ್ನು ಪ್ರೋತ್ಸಾಹ ವೇತನವನ್ನು ನೀಡುತ್ತಿದೆ. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ 50 ವರ್ಷಗಳ ತುಂಬಿದ್ದು ಇದರ ಆಚರಣೆ ಡಿಸೆಂಬರ್ ತಿಂಗಳಲ್ಲಿ ಜರುಗಲಿದೆ. ಸರ್ವರು ಸಂಘಟಿತರಾಗಿ ಸಮಾಜದ ಅಭಿವೃದ್ಧಿಗೆ ಶ್ರಮಿಸೋಣ ಎಂದು ತಿಳಿಸಿದರು. ತಾಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಶೇಖರ್ ಶಾಸ್ತ್ರಿ ಮಾತನಾಡಿ ತಾಲೂಕು ಬ್ರಾಹ್ಮಣ ಸಂಘದ ವತಿಯಿಂದ ಪ್ರತಿ ವರ್ಷ ಪ್ರತಿಭಾ ಪುರಸ್ಕಾರ ಆಚಾರ್ಯ ಜಯಂತಿ ಹಾಗೂ ವಿವಿಧ ಕಾರ್ಯಕ್ರಮಗಳನ್ನು ರೂಪಿಸಿದ್ದು ಸಂಘಟಿತರಾಗಿ ಪರಸ್ಪರ ಸಹಕಾರ ಭಾವನೆಯಿಂದ ಸರ್ವರು ಸಂಘವನ್ನು ಮುನ್ನಡೆಗೆ ಕೊಂಡೊಯ್ಯುತ್ತಿರುವುದು ಸಂತೋಷವೆಂದು ತಿಳಿಸಿದರು.

# ಕಾನೂನು ಹೋರಾಟಕ್ಕೆ ಸಿದ್ಧತೆ

## ಬೇಲೂರು ಬಸ್ ನಿಲ್ದಾಣ ಸ್ಥಳಾಂತರಕ್ಕೆ ಸಂಘಟನೆ ಪ್ರಮುಖರ ವಿರೋಧ

**ಬೇಲೂರು:** ಇಲ್ಲಿನ ಬಸ್ ನಿಲ್ದಾಣ ಸ್ಥಳಾಂತರ ವಿಷಯ ದಿನ ಕಳೆದಂತೆ ವಿವಾದಿತವಾಗಿ ವಿಸ್ತಾರಗೊಳ್ಳುತ್ತಿದೆ.

ಪಟ್ಟಣದ ಹೊರಹೊಲೆಯದ ರಾಯಾಪುರ ಗ್ರಾಮದ ಬಳಿ ಬಿದಿರಕಟ್ಟೆಯಲ್ಲಿ ಹೈಟೆಕ್ ಆಗಿ ಬಸ್ ನಿಲ್ದಾಣ ನಿರ್ಮಿಸುವ ವಿಷಯಕ್ಕೆ ಸಂಬಂಧಿಸಿದಂತೆ ಶಾಸಕ ಹೆಚ್. ಕೆ.ಸುರೇಶ್ ಅವರು ಸಂಘ, ಸಂಸ್ಥೆ, ಪ್ರಮುಖರ ಸಭೆ ಕರೆದ ದಿನದಿಂದಲೇ ಸ್ಥಳಾಂತರಕ್ಕೆ ವ್ಯಾಪಕ ವಿರೋಧ ವ್ಯಕ್ತವಾಗಿದ್ದಲ್ಲದೆ, ಬಲವಂತವಾಗಿ ಸ್ಥಳಾಂತರಕ್ಕೆ ಕ್ರಮ ಕೈಗೊಂಡರೆ ಸಾರ್ವಜನಿಕ ಹೋರಾಟದ ಎಚ್ಚರಿಕೆಯನ್ನೂ ನೀಡಲಾಗಿದೆ.

ಈ ಸಂಬಂಧ ಇಂದು ರೈತಸಂಘ, ಕನ್ನಡಪರ ಸಂಘಟನೆಗಳು, ವರ್ತಕರ ಸಂಘ, ಮಾನವಹಕ್ಕುಗಳ ಆಯೋಗ, ಪುರಸಭೆ ಸದಸ್ಯರು, ಪತ್ರಕರ್ತರ ಸಂಘ ಸೇರಿದಂತೆ ಹಲವಾರು ಸಂಘಟನೆಗಳ ಪ್ರಮುಖರನ್ನು ಒಳಗೊಂಡಂತೆ ಪ್ರವಾಸಿ ಮಂದಿರದಲ್ಲಿ ಸಭೆ ನಡೆಸಲಾಯಿತು. ಈ ಸಂದರ್ಭ ಮಾತನಾಡಿದ ಪ್ರಮುಖರೆಲ್ಲರೂ ಹಾಲಿ ಬಸ್ ನಿಲ್ದಾಣ ಇರುವ ಸ್ಥಳದಲ್ಲೇ ಇರಬೇಕು, ನಿಲ್ದಾಣದ ಪಕ್ಕದಲ್ಲಿರುವ ಲೋಕೋಪಯೋಗಿ ಇಲಾಖೆ ಸ್ಥಳ ವಶಪಡಿಸಿಕೊಂಡು ವಿಸ್ತರಿಸಬೇಕು, ಇದಕ್ಕಾಗಿ ಪುರಸಭೆಯ ಆಡಳಿತ ಸದಸ್ಯರ ಸಹಕಾರ ಪಡೆಯಬೇಕು, ನಿಯೋಗದ ಮೂಲಕ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರನ್ನು ಭೇಟಿಯಾಗಿ ಸ್ಥಳಾಂತರ ವಿಷಯ ಕೈಬಿಟ್ಟು ಈಗ ಇರುವಲ್ಲಿಯೇ ವಿಸ್ತರಿಸುವಂತೆ ಹಾಗೂ ಲೋಕೋಪಯೋಗಿ ಇಲಾಖೆಯ ಪರಿವೀಕ್ಷಣಾ ಮಂದಿರವನ್ನು ಯಗಚಿ ಅಣೆಕಟ್ಟೆ ಸಮೀಪಕ್ಕೆ ಸ್ಥಳಾಂತರಿಸುವಂತೆ ಮನವಿ ಮಾಡಲು ನಿರ್ಣಯ ಕೈಗೊಳ್ಳಲಾಯಿತು.

ಒಂದುವೇಳೆ ಹಠಮಾರಿತನ ತೋರಿದಲ್ಲಿ ಕಾನೂನಾತ್ಮಕ ಹೋರಾಟ ನಡೆಸುವುದು, ಬೇಲೂರು ಬಂದ್ ಕರೆ ಕೊಡುವುದು, ಅನಿರ್ಧಿಷ್ಟಾವಧಿ ಪ್ರತಿಭಟನೆ ನಡೆಸಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ಮಾತನಾಡಿದ ಹಲವರು, ನಿಲ್ದಾಣ ಸ್ಥಳಾಂತರವಾದರೆ ಆಗುವ ಸಮಸ್ಯೆಗಳ ಕುರಿತು ಮಾಹಿತಿ ಒದಗಿಸಿ, ದೇಗುಲಕ್ಕೆ, ಆಸ್ಪತ್ರೆಗೆ, ಶಾಲಾ ಕಾಲೇಜಿಗೆ, ರೈಲ್ವೆ ನಿಲ್ದಾಣಕ್ಕೆ, ಪುರಸಭೆಗೆ, ಬ್ಯಾಂಕ್ ಹಾಗೂ ವ್ಯಾಪಾರ ವಹಿವಾಟಿಗೆ, ಇನ್ನಿತರ ವ್ಯವಸ್ಥೆಗೆ ಅನುಗುಣವಾಗಿ ಹೃದಯ ಭಾಗದಲ್ಲಿ ಬಸ್ ನಿಲ್ದಾಣವಿದೆ. ಇದನ್ನು ಸ್ಥಳಾಂತರ ಮಾಡದೆ ನೆಹರೂನಗರದಲ್ಲಿ ಅಲ್ಲಿಗೆ ತಕ್ಕುನಾಗಿ ಬಸ್ ನಿಲ್ದಾಣವೊಂದನ್ನು ನಿರ್ಮಿಸಲಿ, ಚಿಕ್ಕಮಗಳೂರು,



> **ಸಂಘಟನೆಗಳು ನೀಡುವ ಪತ್ರವನ್ನು ಪುರಸಭೆಯಲ್ಲಿ ಆಡಳಿತಾಧಿಕಾರಿ ಆಗಿರುವ ಸಕಲೇಶಪುರ ಉಪ ವಿಭಾಗಾಧಿಕಾರಿಗಳ ಗಮನಕ್ಕೆ ತಂದು ಹಾಲಿ ನಿಲ್ದಾಣ ಇರುವಲ್ಲಿಯೇ ಹೈಟೆಕ್ ನಿಲ್ದಾಣ ನಿರ್ಮಿಸಲು ಒತ್ತಾಯಿಸಲಾಗುವುದು.**
> **-ಎ.ಆರ್.ಅಶೋಕ್** ಪುರಸಭ ಸದಸ್ಯ

> **ಈಗಿರುವ ಸ್ಥಳದಲ್ಲೆ ನಿಲ್ದಾಣ ಉಳಿಸಿಕೊಳ್ಳಲು ಹಂತ ಹಂತವಾಗಿ ಹೋರಾಟ ನಡೆಸಿ ನಂತರ ಬಂದ್‌ಗೆ ಕರೆ ಕೊಡಲಾಗುವುದು, ಅದಕ್ಕೂ ಬೆಲೆ ಸಿಗದಿದ್ದರೆ ಕಾನೂನು ಹೋರಾಟ ನಡೆಸಲಾಗುವುದು.**
> **-ಸ್ವಾಮಿಗೌಡ** ರೈತ ಸಂಘದ ಜಿ.ಕಾರ್ಯದರ್ಶಿ

ಬೆಂಗಳೂರು, ಅರಸೀಕೆರೆ ಇಲ್ಲಿಂದ ಆಗಮಿಸುವ ಪ್ರಯಾಣಿಕರು ಇಳಿದುಕೊಳ್ಳಲು ಸಹಕಾರಿಯಾಗಲಿದೆ. ಅದನ್ನು ಬಿಟ್ಟು ಯಾರನ್ನೋ ಓಲೈಸಲು ಇಲ್ಲಿನ ನಿಲ್ದಾಣವನ್ನು ಸ್ಥಳಾಂತರಿಸುವ ಆಲೋಚನೆ ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಪ್ರಮುಖ ಸಮಸ್ಯೆಯಾದ ಮುಖ್ಯರಸ್ತೆ ವಿಸ್ತರಣೆ, ಹೊಳೆಬೀದಿ ಅಭಿವೃದ್ಧಿ ಇವುಗಳ ಬಗ್ಗೆ ಶಾಸಕರು ಒತ್ತು ಕೊಡಬೇಕಿದೆ, ಇದರಿಂದ ಅವರಿಗೂ ಒಳ್ಳೆಯ ಹೆಸರು ಬರುತ್ತದೆ. ದಾಸೋಹ ಭವನದಲ್ಲಿ ಶಾಸಕರು ಕರೆದಿದ್ದ ಸಭೆಗೆ ಶಾಸಕರೇ 2 ಗಂಟೆ ತಡವಾಗಿ ಬಂದಿದ್ದರಿಂದ ಸಭೆಯಿಂದ ಹೊರ ನಡೆದವೇ ಹೊರತು ಯಾರೊಬ್ಬರೂ ಶಾಸಕರ ವಿರುದ್ಧ ಮಾತನಾಡಿಲ್ಲ, ಬಸ್ ನಿಲ್ದಾಣ ಈಗಿರುವ ಸ್ಥಳದಲ್ಲೇ ಬಸ್ ನಿಲ್ದಾಣ ಆಗಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸಿದ್ದೇವೆ ಹೊರತು ಶಾಸಕರ ವಿರುದ್ಧ ನಡೆಸಿಲ್ಲ, ಇದನ್ನು ಅರ್ಥ ಮಾಡಿಕೊಳ್ಳಬೇಕಿದೆ ಎಂಬುದು ಹಲವರ ಅಭಿಮತವಾಗಿತ್ತು. ವರ್ತಕರ ಸಂಘದ ಅಧ್ಯಕ್ಷ ಗಿರಿಯಪ್ಪಶೆಟ್ಟಿ, ಬಸ್ ಈಗ ಇರುವ ಸ್ಥಳದಲ್ಲೆ ವಿಸ್ತರಣೆಯಾಗಬೇಕು, ನಿಲ್ದಾಣಕ್ಕಾಗಿ ಬಂದ್ ಕರೆಕೊಟ್ಟರೆ ನಾವೂ ಸಂಪೂರ್ಣ ಬೆಂಬಲ ನೀಡುವುದಾಗಿ ತಿಳಿಸಿದರು.

ಕರವೇ ಅಧ್ಯಕ್ಷ ಚಂದ್ರಶೇಖರ್, ಬಸ್ ನಿಲ್ದಾಣಕ್ಕೆ 5 ಕೋಟಿ ರೂ. ಮಂಜೂರಾಗಿದೆ ಎನ್ನುವುದು, ಬಿದಿರೆಕಟ್ಟೆಯಲ್ಲಿ ನಿಲ್ದಾಣ ನಿರ್ಮಿಸುವುದಕ್ಕೆ ಕಂದಾಯ ಇಲಾಖೆಯಿಂದ ಅನುಮತಿ ಪಡೆದಿರುವ ದಾಖಲೆಗಳಿವೆಯೆ ಎಂದು ಪ್ರಶ್ನಿಸಿದರು. ಶಾಸಕರು ದುಡ್ಡು ಪಡೆಯದಿದ್ದರೂ ಕಚೇರಿಗಳಲ್ಲಿ ದುಡ್ಡು ಕೊಡದೆ ಯಾವ ಕೆಲಸಗಳಾಗುತ್ತಿವೆ ಎಂಬ ವಿಷಯ ಮುನ್ನೆಲೆಗೆ ಬಂತು.

ರೈತ ಸಂಘದ ಸ್ವಾಮಿಗೌಡ, ಬೋಗಮಲ್ಲೇಶ್, ವರ್ತಕರ ಸಂಘದ ಅಧ್ಯಕ್ಷ ಗಿರಿಯಪ್ಪಶೆಟ್ಟಿ, ಕರವೇ ಚಂದ್ರಶೇಖರ್, ಹಳೇಬೀಡು ಬೇಲೂರು ಪ್ರಾಧಿಕಾರದ ಮಾಜಿ ಅಧ್ಯಕ್ಷ ಕೋಟೆ ಶ್ರೀನಿವಾಸ್, ಬೋಜೇಗೌಡ, ಔಷಧಿ ಅಂಗಡಿಗಳ ಮಾಲೀಕರ ಸಂಘದ ಅಧ್ಯಕ್ಷ ರವೀಂದ್ರನಾಥ್, ಜಯಕರ್ನಾಟಕ ರಾಜಣ್ಣ, ಮಾನವಹಕ್ಕು ಸಂಘಟನೆಯ ಅರುಣಕುಮಾರ್, ಡಾ.ಸಂಘದ ತೀರ್ಥಂಕರ್, ಪತ್ರಕರ್ತರ ಸಂಘದ ಅಧ್ಯಕ್ಷೆ ಭಾರತೀಗೌಡ, ಪುರಸಭೆ ಸದಸ್ಯ ಎ.ಆರ್. ಅಶೋಕ್, ಜಮಾಲೂದ್ದೀನ್, ಫೈಯಾಜ್, ಅಶೋಕ್ ನಾಯಕ್, ಪ್ರಮುಖರಾದ ಬಿರಟೆಮನೆ ಸುರೇಶ್, ಡಿ.ಕೆ. ವೆಂಕಟೇಶ್, ಸತೀಶ್, ಉಮೇಶ್, ನೂರ್‌ಅಹ್ಮದ್, ವಿಶಾಲಾಕ್ಷಿ, ಖಾದರ್, ಎನ್.ಅನಂತು, ವಾದಿರಾಜ್, ನರಸಿಂಹಸ್ವಾಮಿ, ಹರೀಶ್, ರತ್ನಾಕರ್ ಇದ್ದರು.

## ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನದ ಅಂಗವಾಗಿ ವ್ಯಸನಮುಕ್ತ ದಿನಾಚರಣೆ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ ಮತ್ತು ಟೈಟಾನ್ ಕಂಪನಿ ಲಿಮಿಟೆಡ್, ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ''ಶ್ರೀ ಮು.ನಿ.ಪ್ರ.ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನದ ಅಂಗವಾಗಿ ವ್ಯಸನಮುಕ್ತ ದಿನಾಚರಣೆ'' ಯನ್ನು ಆಗಸ್ಟ್ 1 ರಂದು ಚಿಕ್ಕಬಳ್ಳಾಪುರದ ಟೈಟಾನ್ ಕಂಪನಿ ಲಿಮಿಟೆಡ್, ಕೆ.ಐ.ಎ.ಡಿ.ಬಿ ಕೈಗಾರಿಕಾ ಅಭಿವೃದ್ಧಿ ಪ್ರದೇಶದಲ್ಲಿ ಹಮ್ಮಿಕೊಳ್ಳಲಾಗಿದೆ.
ಕಾರ್ಯಕ್ರಮದ ಉದ್ಘಾಟನೆಯನ್ನು ಉನ್ನತ ಶಿಕ್ಷಣ ಸಚಿವರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಸಿ ಸುಧಾಕರ್ ಅವರು ನೆರವೇರಿಸಲಿದ್ದಾರೆ.
ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಿಕ್ಕಬಳ್ಳಾಪುರ ಶಾಸಕರಾದ ಪಿ.ಇ ಪ್ರದೀಪ್ ಈಶ್ವರ್ ರವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ಸಂಸದರಾದ ಡಾ. ಕೆ. ಸುಧಾಕರ್, ಕೋಲಾರ ಲೋಕಸಭಾ ಕ್ಷೇತ್ರ ಸಂಸದರಾದ ಎಂ. ಮಲ್ಲೇಶ್ ಬಾಬು, ಬಾಗೇಪಲ್ಲಿ ಶಾಸಕರಾದ ಎಸ್.ಎನ್. ಸುಬ್ಬಾರೆಡ್ಡಿ, ಶಿಡ್ಲಘಟ್ಟ ಶಾಸಕರಾದ ಬಿ.ಎನ್. ರವಿಕುಮಾರ್, ಗೌರಿಬಿದನೂರು ಶಾಸಕರಾದ ಕೆ.ಹೆಚ್ ಪುಟ್ಟಸ್ವಾಮಿಗೌಡ, ವಿಧಾನ ಪರಿಷತ್ತಿನ ಸದಸ್ಯರಾದ ಎಂ ಚಿದಾನಂದ ಗೌಡ, ಎಂ.ಎಲ್. ಅನಿಲ್ ಕುಮಾರ್, ಡಿ.ಟಿ. ಶ್ರೀನಿವಾಸ, ಅಗಲಗುರ್ಕಿ ಗ್ರಾಮ ಪಂಚಾಯ್ತಿ ಅಧ್ಯಕ್ಷರಾದ ನರಸಿಂಹಪ್ಪ ರವರು ಭಾಗವಹಿಸಲಿದ್ದಾರೆ. ಸರ್ಕಾರದ ಕಾರ್ಯದರ್ಶಿಗಳು ಮೂಲಭೂತ ಸೌಲಭ್ಯ ಅಭಿವೃದ್ಧಿ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿಗಳಾದ ಡಾ. ಎನ್. ಮಂಜುಳ, ಚಿಕ್ಕಬಳ್ಳಾಪುರ ಟೈಟಾನ್ ಕಂಪನಿ ಅಮಿಟೆಡ್, ಭದ್ರ, ಕಾರ್ಖಾನೆ ಮುಖ್ಯಸ್ಥರು ಸುಬ್ರತ ಕುಮಾರ್. ಚಿಕ್ಕಬಳ್ಳಾಪುರ ಟೈಟಾನ್ ಕಂಪನಿ ಲಿಮಿಟೆಡ್ ವ್ಯವಸ್ಥಾಪಕರಾದ ಎಂ. ಪ್ರತಾಬನ್ ರವರು ಭಾಗವಹಿಸುವರು. ವಿಶೇಷ ಉಪನ್ಯಾಸವನ್ನು ಜಿಲ್ಲಾ ಮಾನಸಿಕ ಆರೋಗ್ಯ ಇಲಾಖೆಯ ಮನೋವೈದ್ಯರಾದ ಡಾ.ಜಿ. ಹೇಮಂತ್ ಕುಮಾರ್ ರವರು ನೀಡಲಿದ್ದಾರೆ. ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು, ಸರ್ಕಾರಿ ನೌಕರರ ಸಂಘ ಹಾಗೂ ಇತರೆ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ.



## ಬಿಜೆಪಿ ಕಾರ್ಯಕಾರಿಣಿ ಸಭೆ

**ಮಂಡ್ಯ:** ತಾಲ್ಲೂಕಿನ ಜಿ.ಕೆಬ್ಬಹಳ್ಳಿ ಗ್ರಾಮದ ಕಾಲಭೈರವೇಶ್ವರ ಸಮುದಾಯ ಭವನದಲ್ಲಿ ಬಿಜೆಪಿಯಿಂದ ನಡೆದ ಗ್ರಾಮಾಂತರ ಕಾರ್ಯಕಾರಿಣಿ ಸಭಾಕಾರ್ಯಕ್ರಮ ನಡೆಯಿತು. ಸಭೆಗೆ ಚಾಲನೆ ನೀಡಿದ ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಅಶೋಕ್ ಜಯರಾಂ ಮಾತನಾಡಿ, 'ಮೂರನೇ ಬಾರಿ ನರೇಂದ್ರ ಮೋದಿ ಅವರು ಪ್ರಧಾನ ಮಂತ್ರಿಯಾಗಿ ಆಯ್ಕೆಯಾಗುವ ಮೂಲಕ ಉತ್ತಮ ಆಡಳಿತವನ್ನು ದೇಶದಲ್ಲಿ ನೀಡುತ್ತಿದ್ದಾರೆ. ಅದೇ ರೀತಿ ಮಂಡ್ಯ ಜಿಲ್ಲೆಯಲ್ಲಿ ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಮೈತ್ರಿ ಪಕ್ಷದ ನೇತೃತ್ವದಲ್ಲಿ ಲಕ್ಷಾಂತರ ಮತಗಳಲ್ಲಿ ಲೀಡ್ ನೀಡಿ ಎಚ್.ಡಿ.ಕುಮಾರಸ್ವಾಮಿ ಅವರನ್ನು ಗೆಲ್ಲಿಸಿಕೊಂಡಿದ್ದೇವೆ, ಜೊತೆಗೆ ರಾಜ್ಯದಲ್ಲಿ 19 ಸೀಟುಗಳನ್ನು ಗೆದ್ದುಕೊಂಡಿದ್ದೇವೆ' ಎಂದು ತಿಳಿಸಿದರು. ಬಿಜೆಪಿ ರಾಜ್ಯ ವೈದ್ಯಕೀಯ ಪ್ರಕೋಷ್ಠಕ ಡಾ.ಸದಾನಂದ ಮಾತನಾಡಿ, 'ರಾಜ್ಯದಲ್ಲಿ ಬಿಜೆಪಿ ಸುಭದ್ರಗೊಳ್ಳುತ್ತಿದೆ, ಜನರ ಚಿತ್ತ ಬಿಜೆಪಿಯತ್ತ ಇದೆ. ಮುಂಬರುವ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲಿ ಕಾರ್ಯಕರ್ತರು ಹಾಗೂ ಮುಖಂಡರು ಶಕ್ತಿ ಮೀರಿ ತಮ್ಮ ಅಭ್ಯರ್ಥಿಯ ಪರವಾಗಿ ದುಡಿಯಬೇಕು' ಎಂದರು. ಸಭೆಯಲ್ಲಿ ಗ್ರಾಮಾಂತರ ಅಧ್ಯಕ್ಷ ಭೀಮೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿವೇಕ್, ಗ್ರಾ.ಪಂ.ಸದಸ್ಯ ಶಂಕರಚಾರಿ, ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಜವರೇಗೌಡ, ಗ್ರಾಮಾಂತರ ಪ್ರಕೋಷ್ಠ ಕಾರ್ಯದರ್ಶಿಗಳಾದ ಶಿವಕುಮಾರ್ ಆರಾಧ್ಯ, ಡಿ.ಕೆ. ಶಿವಕುಮಾರ್, ಮಹಿಳಾ ಮೋರ್ಚಾ ಅಧ್ಯಕ್ಷೆ ಜ್ಯೋತಿ ಇದ್ದರು.



## ಪೊಲೀಸ್ ಶ್ವಾನದಳದ ಬಾಹು ಇನ್ನಿಲ್ಲ

**ಚಾಮರಾಜನಗರ:** ಜಿಲ್ಲಾ ಪೊಲೀಸ್ ಘಟಕದ ಶ್ವಾನದಳದಲ್ಲಿ 07 ವರ್ಷ 04 ತಿಂಗಳು ಕಾಲ ಸೇವೆ ಸಲ್ಲಿಸಿದ್ದ ಬಾಹು ಅಕಾಲಿಕ ಮರಣ ಹೊಂದಿದೆ. ಜಿಲ್ಲಾ ಪೊಲೀಸ್ ಘಟಕದ ಶ್ವಾನದಳದ ಬಾಹು ಅಕಾಲಿಕ ನಿಧನದಿಂದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಬೇಸರ ವ್ಯಕ್ತಪಡಿಸಿದ್ದು, ಮೃತ ಬಾಹು ವನ್ನು ಡಿಎಆರ್ ಆವರಣದಲ್ಲಿರಿಸಿ ಅಂತಿಮ ದರ್ಶನ ಪಡೆದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಕವಿತಾ ಬಿ.ಟಿ. , ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಉದೇಶ್ ಹಾಗೂ ಜಿಲ್ಲೆಯ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಮೃತ ಬಾಹುವಿನ ಅಂತಿಮ ದರ್ಶನ ಪಡೆದ ಬಳಿಕ ಅಂತ್ಯ ಸಂಸ್ಕಾರ ಮಾಡಲಾಯಿತು.



**ವಿಜಯಪುರದ ಪಟ್ಟಣದ ಶ್ರೀ ಸೋಮೇಶ್ವರ ಸ್ವಾಮಿ ದೇವಾಲಯ ರಸ್ತೆಯಲ್ಲಿರುವ ನಿವೃತ್ತ ರಾಜ್ಯ ಹಾಗೂ ರಾಷ್ಟ್ರ ಪ್ರಶಸ್ತಿ ವಿಜೇತ ಶಿಕ್ಷಕ ನಂದೀಶ್ ರವರನ್ನು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ನಯನ ಸಭಾಂಗಣದಲ್ಲಿ ಭಾನುವಾರದಂದು ಕರ್ನಾಟಕ ಮಕ್ಕಳ ರಕ್ಷಣಾ ವೇದಿಕೆ ಹಾಗೂ ರಿಸರ್ಚ್ ದಿ ರಿಸರೆಕ್ಷನ್ ಫೌಂಡೇಶನ್ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಸುಪ್ರೀಂಕೋರ್ಟ್ ನಿವೃತ್ತ ಮುಖ್ಯ ನ್ಯಾಯಮೂರ್ತಿಗಳಾದ ಸಂತೋಷ್ ಹೆಗಡೆ ರವರು, ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಿದರು. ಹಿರಿಯ ಸಾಹಿತಿ ಕನ್ನಡಪರ ಹೋರಾಟಗಾರರಾದ ಮಕ್ಕಳ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಬಿವಿ ಮುನಿರಾಜು, ಉಚ್ಚ ನ್ಯಾಯಾಲಯದ ವಕೀಲರಾದ ಪಿಎಂ ನಾರಾಯಣಸ್ವಾಮಿ, ಜಯಾ ಕೀರ್ತಿ ಚಾರಿಟೇಬಲ್ ಟ್ರಸ್ಟ್ ರೇವಣ್ಣ, ದಿ ರಿಸರೆಕ್ಷನ್ ಫೌಂಡೇಶನ್ ಪ್ರಧಾನ ಕಾರ್ಯದರ್ಶಿ ಪಿವೈ ಇಮಾನಿಯಲ್ ಉಪಸ್ಥಿತರಿದ್ದರು.**

# ಎಸ್‌ಸಿ, ಎಸ್ ಟಿ ಕುಂದು ಕೊರತೆ ಸಭೆ

**ಚಾಮರಾಜನಗರ:** ಚಾಮರಾಜನಗರದ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಎಸ್ ಸಿ/ ಎಸ್ ಟಿ ಕುಂದು ಕೊರತೆ ಸಭೆಯನ್ನು ಆಯೋಜನೆ ಮಾಡಲಾಯಿತು.

ಚಾಮರಾಜನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿಯಲ್ಲಿ ನಡೆದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಪೊಲೀಸ್ ಅಧಿಕ್ಷಕರಾದ ಡಾ// ಕವಿತಾ.ಬಿ.ಟಿ ರವರು ವಹಿಸಿ, ಸಂವಿಧಾನ ಪೀಠಿಕೆ ಬೋದಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಕಳೆದ ಭಾರಿ ಸಭೆಯ ಅನುಪಾಲನ ವರದಿ ಮಂಡಿಸಲಾಯಿತು. ಸಭೆಯ ಪ್ರಾರಂಭದಲ್ಲಿ ಸಂತೆಮರಳ್ಳಿ ಜೋಡಿ ಕೊಲೆ ವಿಷಯವಾಗಿ ಪೊಲೀಸ್ ಹಾಗೂ ಮುಖಂಡರ ವಾಗ್ವಾದದಿಂದ ಪ್ರಾರಂಭವಾದ ಸಭೆವು ನಂತರ ಯಶಸ್ವಿಯಾಗಿ ನಡೆಯಿತು.

ವಿಶೇಷವಾಗಿ ಸಮುದಾಯದ ಮುಖಂಡರು ಪ್ರಮುಖವಾಗಿ ದೌರ್ಜನ್ಯ ಪ್ರಕರಣ, ಸುಳ್ಳು ಕೇಸುಗಳು, ಅಕ್ರಮ ಮದ್ಯ ಮಾರಾಟ, ಸಿಮ್ಸ್ ಆಸ್ಪತ್ರೆ ಅವ್ಯವಸ್ಥೆಯ ಬಗ್ಗೆ ಧ್ವನಿ ಎತ್ತಿದರು. ಪ್ರಮುಖವಾಗಿ ಮುಖಂಡರು ಚಾಮರಾಜನಗರ ಸಿಮ್ಸ್ ಆಸ್ಪತ್ರೆ



ಹಾಗೂ ಸಂಸ್ಥೆಯ ಅವ್ಯವಸ್ಥೆಯನ್ನು ಪ್ರಶ್ನೆ ಮಾಡುವ ಸಾರ್ವಜನಿಕರು, ಸಂಘಟನೆಯ ಪದಾಧಿಕಾರಿಗಳು, ಪತ್ರಕರ್ತರು ಹಾಗೂ ಸಂಸ್ಥೆಯ ಸಿಬ್ಬಂದಿಗಳ ಮೇಲೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಸುಳ್ಳು ಪ್ರಕರಣ ದಾಖಲು ಮಾಡಿಸುವುದು ನಡೆಯುತ್ತಿದೆ. ಆಗಾಗಿ ನಾಗರೀಕ ಹಕ್ಕನ್ನು ಹತ್ತಿಕುವ ಕೆಲಸವನ್ನು ಅಧಿಕಾರ ಬಲ ಹಾಗೂ ಹಣ ಬಲವನ್ನು ಬಳಸಿಕೊಂಡು ಅಧಿಕಾರ ದುರುಪಯೋಗ ಮಾಡಿಕೊಂಡು ಸಿಮ್ಸ್ ಡೀನ್ ಹಾಗೂ ನಿರ್ದೇಶಕ ಡಾ. ಮಂಜುನಾಥ್ ಮಾಡಿತ್ತಿದ್ದಾರೆ ಎಂದು ಸಭೆಯಲ್ಲಿ ತಿಳಿಸಿದರು.

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಡಿ ವೈ ಎಸ್ ಪಿ ಕಛೇರಿಗೆ ಪಂಚೆಯಲ್ಲಿ ಬಂದಂತಹ ವ್ಯಕ್ತಿಯನ್ನು ಒಳಗಡೆ ಬಿಡಲಿಲ್ಲ ಎಂಬ ದೂರು ಸಹ ಕೇಳಿ ಬಂದಿತು.ಎಲ್ಲಾ ಸಮಸ್ಯೆಗಳಿಗೂ ಸಕರಾತ್ಮವಾಗಿ ಸ್ಪಂದಿಸಿದ ಜಿಲ್ಲಾ ಅಧಿಕ್ಷಕರು ನೊಂದವರಿಗೆ ಖಂಡಿತವಾಗಿ ನ್ಯಾಯ ಕೊಡಿಸುವುದಾಗಿ ಮುಖಂಡರಿಗೆ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮುಖಂಡರು ನೂತನ ಎಸ್ ಪಿ ಕವಿತಾ ರವರನ್ನು ಸನ್ಮಾನಿಸಿ ಗೌರವಿಸಿದರು. ಸಭೆಯಲ್ಲಿ ಹೆಚ್ಚುವರಿ ಎಸ್ ಪಿ ಉದೇಶ್, ಡಿ ವೈ ಎಸ್ ಪಿ ಲಕ್ಷ್ಮಯ್ಯ, ದರ್ಮೇಂದ್ರ, ಸರ್ಕಲ್ ಇನ್ಸ್ಪೆಕ್ಟರ್ ಗಳು ,ರಾಜೇಶ್, ಶಿವಮಾದಯ್ಯ, ಶ್ರೀಕಾಂತ್ ಪಿ ಎಸ್ ಐ ಗಳು ಹಾಗೂ ಎಸ್ ಸಿ,ಎಸ್ ಟಿ ಮುಖಂಡರು ಮತ್ತು ಇಲಾಖೆ ಸಿಬ್ಬಂದಿಗಳು ಹಾಜರಿದ್ದರು.

# ಶಾಸಕ ಏಕವಚನದಲ್ಲಿ ಮಾತನಾಡುವುದು ಸರಿಯಲ್ಲ

**ಕೋಲಾರ :** ಕೆಲ ದಿನಗಳ ಹಿಂದೆ ಬಂಗಾರಪೇಟೆಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಶಾಸಕ ಎಸ್ ಎನ್ ನಾರಾಯಣಸ್ವಾಮಿ ಅವರು ನನ್ನ ಕುರಿತು ಪ್ರಸ್ತಾಪ ಮಾಡುತ್ತ ಏಕವಚನದಲ್ಲಿ ಮಾತನಾಡಿದ್ದಾರೆ. ಅವರಿಗೆ ಇದು ಶೋಭೆ ತರುವುದಿಲ್ಲ. ಅವರಂತೆ ನಾನು ಯಾವುದೇ ಸರ್ಕಾರಿ ಜಮೀನು ಕಬಳಿಕೆ ಮಾಡಿಲ್ಲ ಎಂದು ಬಂಗಾರಪೇಟೆ ಮಾಜಿ ಶಾಸಕ ಎಂ ನಾರಾಯಣಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸೋಮವಾರದಂದು ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ ಬೂದಿಕೋಟೆಯಲ್ಲಿ ಒಬ್ಬ ಮುಖಂಡ ಮುಂದಿದೆ ಮುಸಲಿ ಹಬ್ಬ ಎಂದು ನನ್ನ ನೆನೆದು ಮಾತನಾಡಿದ್ದಾರೆ. ಅವರಿಗೆ ಹೇಳುತ್ತೇನೆ ತಾಲೂಕ ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್ ಚುನಾವಣೆ ಸಮೀಪದಲ್ಲಿದೆ ಆಗ ಅವರಿಗೂ ಇದೆ ಮುಸಲಿ ಹಬ್ಬ ಎಂದು ಮುಖಂಡನ ವಿರುದ್ಧ ಟಾಂಗ್ ನೀಡಿದರು.

ಆ ನಂತರ ಶಾಸಕ ಎಸ್ ಎನ್ ನಾರಾಯಣಸ್ವಾಮಿ ಕುರಿತು ಮಾತನಾಡುತ್ತ ಎಸ್ ಎನ್ ನಾರಾಯಣಸ್ವಾಮಿ ಅವರು ಬೆಳೆದು ಬಂದ ರೀತಿ ನನಗೆ ಗೊತ್ತು. ಅವರು ಬರುವ ನಾನು ಆ ಪಕ್ಷದಲ್ಲಿದ್ದೆ. ಎಸ್ ಎನ್ ರೆಸಾರ್ಟ್ ಯಾವ ರೀತಿ ಕಟ್ಟಿದ್ದು ನನಗೆ ಗೊತ್ತು. ಆ ಜಾಗದ ಹಿಂದಿನ ಕತೆಗಳು ಸಾಕಷ್ಟಿದೆ. ಅವರು ಮಾಡಿರುವ ಗಲ್ಫ್ ಸಹ ಸರ್ಕಾರಿ ಒತ್ತುವರಿ ಜಾಗವಾಗಿದೆ. ಈ ಕುರಿತು ಡಿಕೆ ರವಿ ಅವರು ಸುಮಾರು 47 ಎಕರೆ ಒತ್ತುವರಿ ವರದಿ ನೀಡಿದರು.



ಆ ನಂತರ ಅವರನ್ನು ಜಿಲ್ಲೆಯಿಂದ ಎತ್ತಂಗಡಿ ಮಾಡಿದರು.

ನಾನು ಅವರ ಇವರ ಪರ ಎಂದು ಅವರಿವರಿಗೆ ಹೇಳುತ್ತಾರೆ. ನನ್ನ ನಡುವಳಿಕೆ ನೋಡಿ ಎಲ್ಲಾ ಜನಾಂಗ ಜೊತೆಗಿದ್ದಾರೆ. ನಾಡಪ್ರಭು ಕೆಂಪೇಗೌಡ ಅವರ ಪ್ರತಿಮೆ ರಸ್ತೆಯಲ್ಲಿ ಚಿಕ್ಕ ಜಾಗದಲ್ಲಿ ನಿಲ್ಲಿಸಿ ಒಕ್ಕಲಿಗರ ಮನ ಗೆಲ್ಲುವ ಕೆಲಸ ಮಾಡಿದ್ದಾರೆ. ತಂದೆ ಮಗ ಕಷ್ಟಪಟ್ಟು ಎಸ್ ಎನ್ ರೆಸಾರ್ಟ್ ನಿರ್ಮಾಣ ಮಾಡಿ ಬಹಳಷ್ಟು ಸಂಪಾದನೆ ಮಾಡಿದ್ದಾರೆ. ಅದೇ ದುಡ್ಡಲ್ಲಿ ಒಂದಲ್ಲ ಎರಡು ಎಕರೆ ಜಾಗ ತೆಗೆದು ಇನ್ನು ವಿಶಾಲವಾಗಿ ನಿರ್ಮಾಣ ಮಾಡಬಹುದಾಗಿತ್ತಲ್ಲ ಎಂದು ಪ್ರಶ್ನೆ ಮಾಡಿದರು.

ಬೆಂಗಳೂರಲ್ಲಿ, ದಾವಣಗೆರೆಯಲ್ಲಿ, ಬಂಗಾರಪೇಟೆ ಇನ್ನಿತರೇ ಸ್ಥಳಗಳಲ್ಲಿ ನನ್ನದು ನೂರಾರು ಎಕರೆ ಜಾಗವಿದೆ ಎಂದು ಹೇಳುತ್ತಾರೆ. ಅದರ ದಾಖಲೆ ನೀಡಲಿ ಸ್ವಾಮಿ ಎಂದರು. ದಾವಣಗೆರೆಯಲ್ಲಿರುವ ಪ್ರಸಿದ್ದ ದೇವಸ್ಥಾನಕ್ಕೆ ಐದು ವಾರ ಹೋಗಬೇಕೆಂದಾಗ ಹೋಗಿದ್ದೇನೆ. ಅಷ್ಟು ಮಾತ್ರಕ್ಕೆ ಅಲ್ಲಿ ನಂದು ಭೂಮಿ ಇದೆ ಅದಕ್ಕೆ ಹೋಗಿದ್ದಾರೆ ಎಂದು ಸುಳ್ಳು ಹೇಳಿಕೆ ನೀಡಿದ್ದಾರೆ. ನಾನು ನನ್ನ ಹೆಸರಿನಲ್ಲಿ, ನನ್ನ ಹೆಂಡತಿ ಹೆಸರಿನಲ್ಲಿ, ನನ್ನ ಮಕ್ಕಳು ಮತ್ತು ಸಂಬಂಧಿಕರ ಹೆಸರಿನಲ್ಲಿ ಯಾವುದೇ ಆಕ್ರಮ ಆಸ್ತಿ ಮಾಡಿಲ್ಲ. ನಾನು ಹುಟ್ಟಿನಿಂದಲೂ ವ್ಯವಸಾಯಗಾರ. ನಮ್ಮ ಮನೆಯಲ್ಲಿ ಈಗಲೂ ರೇಷ್ಮೆ ಬೆಳೆಯುತ್ತೇವೆ. ಜೊತೆಗೆ ಆಲೂಗಡ್ಡೆ, ಟೆಮೊಟೊ, ಹೂಕೋಸು ಇನ್ನು ಅನೇಕ ಬೆಳೆ ಬೆಳೆಯುತ್ತೇವೆ. ನಾನು ಅದರಲ್ಲಿ ಲಕ್ಷಗಟ್ಟಲೆ ಸಂಪಾದನೆ ಮಾಡಿದ್ದೇನೆ. ಒಬ್ಬ ಶಾಸಕರಾಗಿ ಎಸ್ ಎನ್ ನಾರಾಯಣಸ್ವಾಮಿ ಈ ರೀತಿ ಮಾತನಾಡುವುದು ಸರಿಯಲ್ಲ. ನನ್ನ ಮೇಲೆ ಆರೋಪ ಮಾಡುವ ಮೊದಲು ದಾಖಲೆ ನೀಡಲಿ. ಕಾಂಗ್ರೆಸ್ ಪಕ್ಷದಲ್ಲೇ ಇದ್ದು ಕಳೆದ ಕೆಲವು ಚುನಾವಣೆಗಳಲ್ಲಿ ಇತರೆ ಪಕ್ಷಗಳ ಸಹಕಾರ ನೀಡಿ ಕಾಂಗ್ರೆಸ್ ಪಕ್ಷಕ್ಕೆ ದ್ರೋಹ ಬಗೆದಿದ್ದಾರೆ ಎಂದರು. ತಂಬಳ್ಳಿ ಮುನಿಯಪ್ಪ, ಶಿವಕುಮಾರ್, ನಾರಾಯಣ ಗೌಡ, ಸೀಸಂದ್ರ ರಮೇಶ್, ಮಾದವನ್ ಮತ್ತು ರಮೇಶ್ ಸೇರಿದಂತೆ ಇತರರು ಇದ್ದರು.

# ಯುವಕರು ದೇಶಕ್ಕೆ ಸೇವೆಗೆ ಸಮರ್ಪಿಸಿಕೊಳ್ಳಿ

**ವಿಜಯಪುರ:** ದೇಶದ ಪ್ರತಿಯೊಬ್ಬ ಪ್ರಜೆಯು ದೇಶಾಭಿಮಾನ ಬೆಳೆಸಿಕೊಳ್ಳಬೇಕು, ಅದರಲ್ಲೂ ಯುವಕರು ದೇಶಕ್ಕೆ ಸೇವೆ ಸಲ್ಲಿಸುವ ಮೂಲಕ ತಮ್ಮ ಜೀವನವನ್ನು ಸಾರ್ಥಕಪಡಿಸಿಕೊಳ್ಳಬೇಕು ಎಂದು ಅಖಿಲ ಕರ್ನಾಟಕ ಮಿತ್ರ ಸಂಘದ ರಾಜ್ಯ ಅಧ್ಯಕ್ಷ ಚಿ.ಮಾ.ಸುಧಾಕರ್ ತಿಳಿಸಿದರು.

ಪಟ್ಟಣದ ರಾಜೀವನಗರ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯಲ್ಲಿ ಅಖಿಲ ಕರ್ನಾಟಕ ಮಿತ್ರ ಸಂಘದ ವತಿಯಿಂದ ಆಯೋಜಿಸಿದ್ದ ಕಾರ್ಗಿಲ್ ವಿಜಯೋತ್ಸವ ಬಗ್ಗೆ ಉಪನ್ಯಾಸವನ್ನು ನೀಡಿ ಮಾತನಾಡಿದರು.

ಇಂದಿನ ಯುವ ಸಮೂಹವು ದೇಶಕ್ಕೆ ಸಲ್ಲಿಸುವ ಸೇವೆ ಮಾಡಲು ಮುಂದಾಗಬೇಕು. ಅಂದು ಕಾರ್ಗಿಲ್ ಸಮಯದಲ್ಲಿ ಪಾಕಿಸ್ತಾನದ ವಿರುದ್ಧ ಜಯಗಳಿಸಲು ಶ್ರಮಿಸಿದ ನಮ್ಮ ಯೋಧರ ಪರಾಕ್ರಮ ಮೆಚ್ಚುವಂತಹದ್ದು. ಜೊತೆಗೆ ಆ ಸಮಯದಲ್ಲಿ ವೀರ ಮರಣವನ್ನಪ್ಪಿದ ವೀರ ಯೋಧರಿಗೆ ಇಂದು ನಮನ ಸಲ್ಲಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದು ಹೇಳಿದರು.

ಬರಹಗಾರ ಮುರುಳೀಧರ್ ಮಾತನಾಡಿ, ನಮ್ಮ ಸೈನ್ಯದ ಶೌರ್ಯ, ಸೈನಿಕರ ಸಾಹಸವನ್ನು ಜಗತ್ತಿಗೆ ಪರಿಚಯಿಸಿದ್ದು ಕಾರ್ಗಿಲ್ ಯುದ್ಧ. ದೇಶದ ರಕ್ಷಣೆಗಾಗಿ ನಮ್ಮ ಲಕ್ಷಾಂತರ ಸೈನಿಕರು



ಪ್ರಾಣಬಿಟ್ಟರು ಅವರಿಂದಲೇ ನಾವೆಲ್ಲರೂ ಇಲ್ಲಿ ನೆಮ್ಮದಿಯಾಗಿದ್ದೇವೆ ಎಂದರು.

ಗಡಿಯಲ್ಲಿ ಹಗಲು ರಾತ್ರಿ ಎನ್ನದೆ ಶತ್ರುಗಳಿಂದ ದೇಶವನ್ನು ಕಾಯುತ್ತಿರುವ ಸೈನಿಕರ ತ್ಯಾಗ ಎಂದು ಮರೆಯದಂತದ್ದು. ಅಂತಹ ಸೈನಿಕರನ್ನು ನಾವೆಲ್ಲರೂ ಪ್ರತಿಕ್ಷಣವೂ ನೆನೆಯಬೇಕಾಗಿದೆ ಎಂದು ಮಕ್ಕಳಿಗೆ ತಿಳಿಸಿದರು. ಮುಖ್ಯ ಶಿಕ್ಷಕ ಎ.ಎಂ.ನಾರಾಯಣಸ್ವಾಮಿ ಮಾತನಾಡಿ, ಕಾರ್ಗಿಲ್ ಯುದ್ದದಲ್ಲಿ ವೀರ ಸಾಹಸಿಗಳಗಿ ನಮಗಾಗಿ ಹುತಾತ್ಮರಾದರು.ಇನ್ನು ಕೆಲವರು ಅಂಗವಿಕಲರಾದರು. ಹೀಗಿದ್ದರೂ ತನ್ನ ಪಕ್ಕದಲ್ಲಿಯೇ ಹೆಣವಾಗುತ್ತಿದ್ದ ಸಹ ಯೋಧರ ನಡುವೆ ಬಹಳಷ್ಟು ಸೈನಿಕರು ಮುನ್ನುಗ್ಗಿ ಶತ್ರುಗಳನ್ನು ಎದುರಿಸಿದರು. ಅದರ ಪರಿಣಾಮವೇ ಇವತ್ತು ನಾವೆಲ್ಲರೂ ಹೆಮ್ಮೆಯಿಂದ ಕಾರ್ಗಿಲ್ ದಿವಸವನ್ನು ಆಚರಿಸುವಂತಾಗಿದೆ ಎಂದು ಹೇಳಿದರು.

ಮಿತ್ರ ಸಂಘದ ಕಾರ್ಯಾಧ್ಯಕ್ಷ ವಿ. ವಿಶ್ವನಾಥ್ ಮಾಮು, ಶಾಲೆಯ ಸಹ ಶಿಕ್ಷಕ ಬೈರೇಗೌಡ ಹಾಗೂ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್



## ರಿಯಾಲಿಟಿ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ಪ್ರಶಸ್ತಿ ಪ್ರದಾನ

ರಿಯಾಲಿಟಿ ಬುಕ್ ಆಫ್ ವರ್ಲ್ಡ್ ರೆಕಾರ್ಡ್, ನವದೆಹಲಿ ಹಾಗೂ ಕರ್ನಾಟಕ ಕಲ್ಚರಲ್ ಅಕಾಡೆಮಿ ಬೆಂಗಳೂರು ಸಂಯುಕ್ತ ಆಶ್ರಯದಲ್ಲಿ ಸಂಸ್ಥೆಯ ವಾರ್ಷಿಕೋತ್ಸವದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ರಿಯಾಲಿಟಿ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ಅವಾರ್ಡ್ ಹಾಗೂ ಕನ್ನಡ ಕಸ್ತೂರಿ ರಾಜ್ಯ ಪ್ರಶಸ್ತಿಯನ್ನು ಬೆಂಗಳೂರಿನ ಯಶವಂತಪುರದ ಬಾಂಬೆ ಡ್ಶೈಯಿಂಗ್ ರಸ್ತೆಯಲ್ಲಿರುವ ಲಲಿತ ಕಲಾ ಅಡಿಟೋರಿಯಂ ನಲ್ಲಿ ಹಮ್ಮಿಕೊಳ್ಳಲಾಗಿತ್ತು. ಬೆಂಗಳೂರು ನಗರದ . ಸಫಾಯಿ ಕರ್ಮಾಚಾರಿ ಅಂದೋಲನದ ಕೋ ಅರ್ಡಿನೇಟರ್ ,ನವದೆಹಲಿ.ಜಿ ಎಸ್ ನಾಗೇಂದ್ರ ಅವರಿಗೆ ರಿಯಾಲಿಟಿ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ಹಾಗೂ ಕರ್ನಾಟಕ ಯೂತ್ ವೆಲ್ ಫೇರ್ ಅಸೋಸಿಯೇಷನ್ ವತಿಯಿಂದ 'ಸೇವಾ ಯೋಧ ರತ್ನ' ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಮುಖ್ಯ ಅತಿಥಿಗಳಾಗಿ ಪತ್ರಕರ್ತರು,ಸಾಹಿತಿ ಜಾನಪದ ಪರಿಷತ್ತು ಅಧ್ಯಕ್ಷರ ವೈ.ಬಿ.ಎಚ್ ಜಯದೇವ್, ಚಲನಚಿತ್ರ ನಟಿ ಅಭಿನಯ,ಚಲನಚಿತ್ರ ಹಿನ್ನೆಲೆ ಗಾಯಕ, ಸಂಗೀತ ನಿರ್ದೇಶಕ ನಂದನ್, ಹೆಸರಾಂತ ಜ್ಯೋತಿಷಿ , ವಾಸ್ತು ತಜ್ಞರಾದಂತ ಡಾ. ಬಿ ಡಿ ಶಾಸ್ತ್ರಿ, ಚಲನಚಿತ್ರ ನಿರ್ದೇಶಕಿ ,ಸಂಗೀತ ನಿರ್ದೇಶಕಿ, ನಟಿ ನೃತ್ಯಗಾರ್ತಿ ಗಾಯಕಿ ಡಾ.ಗೀತಾ ಎಚ್ ಕೈವಾರ ಹಾಗೂ ರಿಯಾಲಿಟಿ ಬುಕ್ ವರ್ಲ್ಡ್ ರೆಕಾರ್ಡ್ ಸಂಸ್ಥೆಯ ಸಂಸ್ಥಾಪಕರಾದ ಡಾ. ಕರಾಟೆ ಶ್ರೀನಾಥ್ ಎ.ಪಿ ಮತ್ತು ಕರ್ನಾಟಕ ಕಲ್ಚರಲ್ ಅಕಾಡೆಮಿ ಪ್ರಧಾನ ಕಾರ್ಯದರ್ಶಿಗಳಾದ ಡಾ.ಟಿ. ಕೃಷ್ಣ ಉಪಸ್ಥಿತರಿದ್ದರು

## ಚಿಕನ್ ಪೆಪ್ಪರ್ ಫ್ರೈ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಕೋಳಿಮಾಂಸ – 1/2 ಕೆಜಿ, ಕಾಳುಮೆಣಸಿನಪುಡಿ – 1 ಚಮಚ, ದನಿಯಾಪುಡಿ – 2 ಚಮಚ, ಅಚ್ಚಖಾರದ ಪುಡಿ– ಅರ್ಧ ಚಮಚ, ಈರುಳ್ಳಿ – 2, ಶುಂಠಿ–ಬೆಳ್ಳುಳ್ಳಿ ಪೇಸ್ಟ್ – 1 ಚಮಚ, ಹಸಿಮೆಣಸಿನಕಾಯಿ – 2, ಕೊತ್ತಂಬರಿಸೊಪ್ಪು – ಸ್ವಲ್ಪ, ಕರೀಬೇವು – ಸ್ವಲ್ಪ, ಅರಿಸಿನಪುಡಿ – ಚಿಟಿಕೆ, ಉಪ್ಪು – ರುಚಿಗೆ ತಕ್ಕಷ್ಟು, ಎಣ್ಣೆ– ಅಗತ್ಯಕ್ಕೆ ತಕ್ಕಷ್ಟು, ಚಕ್ಕೆ–ಲವಂಗ ಪುಡಿ– ಕಾಲು ಚಮಚ

### ಮಾಡುವ ವಿಧಾನ

ಕೋಳಿ ಮಾಂಸವನ್ನು ಚೆನ್ನಾಗಿ ತೊಳೆದಕೊಳ್ಳಿ. ಒಲೆಯ ಮೇಲೆ ಬಾಣಲೆ ಇಟ್ಟು ಅದಕ್ಕೆ ಸ್ವಲ್ಪ ಎಣ್ಣೆ ಹಾಕಿ. ಕಾದ ನಂತರ ಈರುಳ್ಳಿ, ಕರಿಬೇವು, ಹಸಿಮೆಣಸಿನ ಕಾಯಿ ಹಾಕಿ. ಈರುಳ್ಳಿ ಕೆಂಪಗಾಗುತ್ತಿದ್ದಂತೆಯೇ ಶುಂಠಿ–ಬೆಳ್ಳುಳ್ಳಿ ಪೇಸ್ಟ್ ಹಾಕಿ.

2 ನಿಮಿಷದ ಬಳಿಕ ಕೋಳಿಮಾಂಸ ಹಾಗೂ ಉಪ್ಪು ಹಾಕಿ 5 ನಿಮಿಷ ಫ್ರೈ ಮಾಡಿ, ಬಳಿಕ ಕಾಳು ಮೆಣಸಿನ ಪುಡಿ, ದನಿಯಾ ಪುಡಿ, ಅಚ್ಚ ಖಾರದ ಪುಡಿ ಹಾಗೂ ಚಕ್ಕೆ–ಲವಂಗ ಪುಡಿ ಹಾಕಿ. ಸ್ವಲ್ಪ ನೀರು ಹಾಕಿ 5 ನಿಮಿಷ ಬೇಯಲು ಬಿಡಿ. ಇದೀಗ ಕೊತ್ತಂಬರಿಸೊಪ್ಪಿನಿಂದ ಅಲಂಕರಿಸಿದರೆ ಪೆಪ್ಪರ್ ಚಿಕನ್ ಸವಿಯಲು ಸಿದ್ಧ.

## ನಟಿ ಸಾಯಿ ಪಲ್ಲವಿ ಪ್ರೇಮ್ ಕಹಾನಿ



ಸಾಯಿ ಪಲ್ಲವಿ ಸದ್ಯದ ಟಾಪ್ ನಟಿಯರ ಸಾಲಿನಲ್ಲಿಯೇ ಇದ್ದಾರೆ. ಬಾಲಿವುಡ್ನಿಂದಲೂ ಆಫರ್ ಹುಡುಕಿಕೊಂಡು ಬರ್ತಿವೆ. ಅದರಲ್ಲಿ ಬಾಲಿವುಡ್ನ ರಾಮಾಯಣದಲ್ಲೂ ಸೀತೆಯ ಪಾತ್ರಧಾರಿ ಆಗಿದ್ದಾರೆ. ಈ ಮೂಲಕ ಸಾಯಿ ಪಲ್ಲವಿ ಅಲ್ಲೂ ತಮ್ಮ ಸರಳತೆಯ ಛಾಪು ಮೂಡಿಸುತ್ತಿದ್ದಾರೆ. ಸೀತೆ ಪಾತ್ರಧಾರಿ ಸಾಯಿ ಪಲ್ಲವಿ, ಹೆಚ್ಚಾಗಿ ತೆಲುಗು ಸಿನಿಮಾಗಳನ್ನೆ ಮಾಡುತ್ತಾ ಬಂದಿದ್ದಾರೆ. ಇದರ ಜೊತೆಗೆ ತಮಿಳು ಮತ್ತು ಮಲೆಯಾಲಂ ಭಾಷೆಯ ಸಿನಿಮಾಗಳಲ್ಲೂ ಸಾಯಿ ಪಲ್ಲವಿ ಹೆಸರು ಮಾಡಿದ್ದಾರೆ. ಆ ಹೆಸರನ್ನ ತಮ್ಮ ಸರಳ ಉಡುಪಿನಿಂದಲೂ ಗಳಿಸಿಕೊಂಡಿದ್ದಾರೆ. ಬಿ–ಟೌನ್ಗೆ ಕಾಲಿಡುತ್ತಿದ್ದಂತೆಯೇ ಅಲ್ಲಿನ ಕೆಲವರು ಸಾಯಿ ಪಲ್ಲವಿ ಬಗ್ಗೆ ಗಾಸಿಪ್ ಹರಡುತ್ತಿದ್ದಾರೆ. 2 ಮಕ್ಕಳನ್ನು ಹೊಂದಿರುವ ವಿವಾಹಿತ ಪುರುಷನ ಜೊತೆ ಸಾಯಿ ಪಲ್ಲವಿ ಡೇಟಿಂಗ್ ಮಾಡುತ್ತಿದ್ದಾರೆ ಎಂದು ಹೇಳಲಾಗುತ್ತಿದೆ. ಸಾಯಿ ಪಲ್ಲವಿ ಅವರ ಇಮೇಜ್ಗೆ ಹಾನಿ ಮಾಡುವ ಉದ್ದೇಶದಿಂದ ಈ ರೀತಿ ಗಾಳಿಸುದ್ದಿ ಹರಡಲಾಗಿದೆ ಎನ್ನಲಾಗಿದೆ. ಆಮಿರ್ ಖಾನ್ ಮಗ ಜುನೈದ್ ಖಾನ್ ನಟನೆಯ ಸಿನಿಮಾದಲ್ಲಿ ಸಾಯಿ ಪಲ್ಲವಿ ನಾಯಕಿ ಆಗಿ ನಟಿಸುತ್ತಿದ್ದಾರೆ. ಅಲ್ಲದೇ, ರಣಬೀರ್ ಕಪೂರ್ ನಟನೆಯ ರಾಮಾಯಣ ಸಿನಿಮಾದಲ್ಲಿ ಸಾಯಿ ಪಲ್ಲವಿ ಅವರು ಸೀತೆಯ ಪಾತ್ರ ಮಾಡುತ್ತಿದ್ದಾರೆ. ಸದ್ಯ ಸಾಯಿ ಪಲ್ಲವಿ ಮದುವೆಯಾಗಿರುವ ಪ್ರಸಿದ್ಧ ನಟನೊಂದಿಗೆ ಡೇಟಿಂಗ್ ಮಾಡುತ್ತಿದ್ದಾರೆ ಎಂಬ ವದಂತಿಗಳು ಹುಟ್ಟಿಕೊಂಡಿವೆ. ಈ ಸುದ್ದಿ ವಿಶೇಷವಾಗಿ ಅವರ ಅಭಿಮಾನಿಗಳನ್ನು ಆಶ್ಚರ್ಯಗೊಳಿಸಿದೆ. ನಟಿಯ ಫಾಲೋವರ್ಸ್ಗಳು ಈ ವದಂತಿಗಳನ್ನು ತಳ್ಳಿಹಾಕುತ್ತಿದ್ದಾರೆ. ಸದ್ಯ ಈ ಸುದ್ದಿ ನ್ಯಾಷನಲ್ ಲೆವೆಲ್ನಲ್ಲಿ ಸಂಚಲನ ಸೃಷ್ಟಿಸಿದೆ. ಆದರೆ ಈ ನಟ ಯಾರು ಎನ್ನೋದನ್ನು ಮಾತ್ರ ವರದಿಗಳಲ್ಲಿ ತಿಳಿಸಲಾಗಿಲ್ಲ. ಸದ್ಯಕ್ಕೆ ಈ ವದಂತಿಗಳಿಗೆ ಸಾಯಿ ಪಲ್ಲವಿ ಉತ್ತರ ನೀಡಿಲ್ಲ. ರಾಮಾಯಣ' ಸಿನಿಮಾಗೆ ನಿತೇಶ್ ತಿವಾರಿ ಅವರು ನಿರ್ದೇಶನ ಮಾಡುತ್ತಿದ್ದಾರೆ. ಭಾರಿ ಬಜೆಟ್ನಲ್ಲಿ ಈ ಸಿನಿಮಾ ಸಿದ್ಧವಾಗುತ್ತಿದೆ.

## ವಿಟಮಿನ್ ಸಿ ಯಾಕೆ ಬೇಕು?




### ಹೆಲ್ತ್ ಟಿಪ್ಸ್

ನಮ್ಮ ದೇಹದಲ್ಲಿನ ರೋಗ ನಿರೋಧಕ ಶಕ್ತಿ ಸರಿಯಾಗಿ ಕೆಲಸ ಮಾಡಬೇಕು ಅಂದರೆ ಈ ವಿಟಮಿನ್ ಸಿ ಅಗತ್ಯವಾಗಿದೆ. ಇದು ಬಿಳಿ ರಕ್ತ ಕಣಗಳ ಉತ್ಪಾದನೆಯನ್ನು ಉತ್ತೇಜಿಸುತ್ತದೆ. ವಿಶೇಷವಾಗಿ ಲಿಂಫೋಸೈಟ್ಸ್ ಮತ್ತು ಫಾಗೊಸೈಟ್ಗಳು ಹೆಚ್ಚಾಗುತ್ತದೆ, ಇದು ದೇಹವನ್ನು ಸೋಂಕುಗಳಿಂದ ರಕ್ಷಿಸಲು ಸಹಾಯ ಮಾಡುತ್ತದೆ. ಹೆಚ್ಚುವರಿಯಾಗಿ, ವಿಟಮಿನ್ ಸಿ ಈ ಜೀವಕೋಶಗಳ ಕಾರ್ಯವನ್ನು ಹೆಚ್ಚಿಸುತ್ತದೆ, ರೋಗಕಾರಕಗಳನ್ನು ಪತ್ತೆಹಚ್ಚುವ ಮತ್ತು ನಾಶಮಾಡುವ ಸಾಮರ್ಥ್ಯವನ್ನು ಮತ್ತಷ್ಟು ಸುಧಾರಿಸುತ್ತದೆ. ಹೀಗಾಗಿ ವೈದ್ಯರು ಸಣ್ಣಪುಟ್ಟ ಕಾಯಿಲೆಗೆ ನೀವು ಆಸ್ಪತ್ರೆಗೆ ತೆರಳಿದ ಸಂದರ್ಭದಲ್ಲಿ ಅವರು ಹಣ್ಣು, ಸೊಪ್ಪು, ತರಕಾರಿ ಸೇವಿಸಲು ಸಲಹೆ ನೀಡುತ್ತಾರೆ.

ಶಕ್ತಿಯುತವಾದ ಉತ್ಕರ್ಷಣ ನಿರೋಧಕವಾಗಿ ವಿಟಮಿನ್ ಸಿ ದೇಹದಲ್ಲಿ ಸ್ವತಂತ್ರ ರಾಡಿಕಲ್ಗಳನ್ನು ತಟಸ್ಥಗೊಳಿಸಲು ಸಹಾಯ ಮಾಡುತ್ತದೆ. ಸ್ವತಂತ್ರ ರಾಡಿಕಲ್ಗಳು ಅಸ್ಥಿರ ಅಣುಗಳಾಗಿವೆ, ಅದು ಜೀವಕೋಶಗಳನ್ನು ಹಾನಿಗೊಳಿಸುತ್ತದೆ, ಉರಿಯೂತ ಮತ್ತು ದೀರ್ಘಕಾಲದ ಕಾಯಿಲೆಗಳಿಗೆ ಕಾರಣವಾಗುತ್ತದೆ. ಆದರೆ ವಿಟಮಿನ್ ಸಿ ಸೇವನೆಯು ನಿಮ್ಮ ದೇಹದಲ್ಲಿ ರೋಗ ನಿರೋಧಕ ಶಕ್ತಿಯನ್ನ ವೃದ್ಧಿಸಲಿದೆ. ಇದರಿಂದ ನೀವು ಕಾಯಿಲೆ ಬೀಳುವ ಪ್ರಮಾಣವೂ ಕಡಿಮೆಯಾಗಲಿದೆ. ಜೊತೆಗೆ ಹೃದ್ರೋಗ ಮತ್ತು ಕ್ಯಾನ್ಸರ್ನಂತಹ ದೀರ್ಘಕಾಲದ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ.

ವಿಟಮಿನ್ ಸಿ ಕಾಲಜನ್ ಉತ್ಪಾದನೆಗೆ ಅವಶ್ಯಕವಾಗಿದೆ, ಇದು ಚರ್ಮದ ಸ್ಥಿತಿಸ್ಥಾಪಕತ್ವ ಮತ್ತು ಶಕ್ತಿಯನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ಕಾಲಜನ್ ಉತ್ಪಾದನೆಯು ವಯಸ್ಸಾದಂತೆ ಕಡಿಮೆಯಾಗುತ್ತದೆ, ಇದು ಸುಕ್ಕುಗಳು ಮತ್ತು ಚರ್ಮವನ್ನು ಕುಗ್ಗಿಸಲು ಕಾರಣವಾಗುತ್ತದೆ. ಹೀಗಾಗಿ ವಿಟಮಿನ್ ಸಿ ಚರ್ಮದ ಹೊಳಪು ಹಾಗೂ ಮೃದುತ್ವಕ್ಕೆ ಕಾರಣವಾಗುತ್ತದೆ.

ಕಬ್ಬಿಣಾಂಶ ಹೀರಿಕೊಳ್ಳಲು ಸಹಾಯ ಮಾಡಲಿದೆ. ವಿಟಮಿನ್ ಸಿ ಅಂಶ ಕಡಿಮೆಯಾದರೆ ನಿಮ್ಮ ದೇಹವು ಕಬ್ಬಿಣಾಂಶದ ಕೊರತೆ ಎದುರಿಸುತ್ತದೆ. ನೀವು ಸೇವಿಸುವ ಆಹಾರದಲ್ಲಿ ಇರುವ ಕಬ್ಬಿಣಾಂಶವನ್ನು ಹೀರಿಕೊಳ್ಳಬೇಕಾದರೆ ವಿಟಮಿನ್ ಸಿ ಅವಶ್ಯಕ. ಹೀಗಾಗಿ ನಿಮ್ಮ ದೇಹದಲ್ಲಿ ವಿಟಮಿನ್ ಸಿ ಕೊರತೆಯಾಗಿ ನೀವು ಕಬ್ಬಿಣಾಂಶ ಆಧಿಕವಿರುವ ಆಹಾರ ಸೇವಿಸುತ್ತಿದ್ದರೂ ಅದು ಪ್ರಯೋಜನವಾಗುವುದಿಲ್ಲ. ಕಣ್ಣಿನ ಆರೋಗ್ಯದಲ್ಲಿ ವಿಟಮಿನ್ ಸಿ ಪ್ರಮುಖ ಪಾತ್ರ ವಹಿಸುತ್ತದೆ. ಇದರ ಉತ್ಕರ್ಷಣ ನಿರೋಧಕ ಗುಣಲಕ್ಷಣಗಳು ಸ್ವತಂತ್ರ ರಾಡಿಕಲ್ಗಳಿಂದ ಉಂಟಾಗುವ ಆಕ್ಸಿಡೇಟಿವ್ ಹಾನಿಯಿಂದ ಕಣ್ಣುಗಳನ್ನು ರಕ್ಷಿಸಲು ಸಹಾಯ ಮಾಡುತ್ತದೆ.

## ಸ್ಟಾರ್ ಸಹೋದರರ ಜಟಾಪಟಿ- 'ಕಂಗುವ' ಸೂರ್ಯಗೆ ವಿಲನ್ ಆದ ಕಾರ್ತಿ

ತಮಿಳಿನ ಸ್ಟಾರ್ ಸಹೋದರರಾದ ಸೂರ್ಯ ಮತ್ತು ಕಾರ್ತಿ ಇದೀಗ ಫ್ಯಾನ್ಸ್ಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಒಂದೇ ಸಿನಿಮಾದಲ್ಲಿ ಇಬ್ಬರು ಎದುರಾಳಿಗಳಾಗುತ್ತಿದ್ದಾರೆ. 'ಕಂಗುವ' ಚಿತ್ರಕ್ಕೆ ಕಾರ್ತಿ ಎಂಟ್ರಿ ಕೊಟ್ಟಿದ್ದಾರೆ. ಬಹುಭಾಷೆಗಳಲ್ಲಿ ಮೂಡಿ ಬರುತ್ತಿರುವ 'ಕಂಗುವ' ಸಿನಿಮಾದಲ್ಲಿ ಭಿನ್ನ ಪಾತ್ರದಲ್ಲಿ ಸೂರ್ಯ ನಟಿಸುತ್ತಿದ್ದಾರೆ. ಈ ಚಿತ್ರದಲ್ಲಿ ಅಣ್ಣ ಸೂರ್ಯನ ಮುಂದೆ ಕಾರ್ತಿ ವಿಲನ್ ಆಗಿ ಘರ್ಜಿಸಲಿದ್ದಾರೆ. ವಿಭಿನ್ನ ಗೆಟಪ್ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಈ ಕುರಿತು ಚಿತ್ರತಂಡವೇ ಅಧಿಕೃತ ಮಾಹಿತಿ ನೀಡಿದೆ. ಇದು ಒಂದೇ ಅಲ್ಲ, ಇದರ ಜೊತೆ ಮತ್ತೊಂದು ಸಿನಿಮಾದ ಮಾತುಕತೆ ಕೂಡ ಆಗಿದೆ. ಅದರಲ್ಲಿ ಕಾರ್ತಿಗೆ ಸೂರ್ಯ ವಿಲನ್ ಆಗಲಿದ್ದಾರೆ ಎನ್ನಲಾಗಿದೆ. ಸದ್ಯ ಈ ಸುದ್ದಿ ತಿಳಿದು ಫ್ಯಾನ್ಸ್ ಥ್ರಿಲ್ ಆಗಿದ್ದಾರೆ. 'ಕಂಗುವ' ಚಿತ್ರವನ್ನು ಶಿವ ನಿರ್ದೇಶನ ಮಾಡಿದ್ದಾರೆ. ಸೂರ್ಯಗೆ ನಾಯಕಿಯಾಗಿ ದಿಶಾ ಪಟಾನಿ ನಟಿಸಿದ್ದಾರೆ. ಬಾಬಿ ಡಿಯೋಲ್ ಈ ಸಿನಿಮಾದ ಭಾಗವಾಗಿದ್ದಾರೆ. ಅಕ್ಟೋಬರ್ 10ರಂದು ಸಿನಿಮಾ ರಿಲೀಸ್ ಆಗಲಿದೆ.



## ಸೌಂದರ್ಯ ಹೆಚ್ಚಿಸಲಿದೆ ಬಾಳೆಹಣ್ಣು

### ಬ್ಯೂಟಿ ಟಿಪ್ಸ್

ಬಾಳೆ ಹಣ್ಣು ತಿನ್ನುವುದರಿಂದ ದೇಹದ ಆರೋಗ್ಯ ಸುಧಾರಣೆಯಾಗುವಂತೆ, ಸೌಂದರ್ಯವರ್ಧಕ ಉತ್ಪನ್ನವಾಗಿ ಬಳಸುವುದರ ಮೂಲಕವೂ ಸೌಂದರ್ಯ ವೃದ್ಧಿಸಿಕೊಳ್ಳಬಹುದು. ಹೇಗೆ ಅಂತ ನೋಡಿ. ಇದರಲ್ಲಿ ಇರುವ ಪೊಟ್ಯಾಸಿಯಂ ಗುಣ ಒಣ ಚರ್ಮವನ್ನು ಹೆಚ್ಚು ತೇವಾಂಶದಿಂದ ಕೂಡಿರುವಂತೆ ಮಾಡುತ್ತದೆ. ಬಾಳೆಹಣ್ಣು ಅತ್ಯುತ್ತಮ ಎಕ್ಸ್ಫೋಲಿಯೇಟರ್ ಆಗಿ ಕಾರ್ಯನಿರ್ವಹಿಸುತ್ತದೆ. ಚರ್ಮದ ಮೇಲಿನ ಜಿಡ್ಡಿನಂಶವನ್ನು ನಿಯಂತ್ರಣದಲ್ಲಿ ಇಡುತ್ತದೆ. ನೈಸರ್ಗಿಕವಾಗಿ ಸುಕ್ಕುಗಟ್ಟುವುದನ್ನು ತಡೆಯಬೇಕೆಂದರೆ ಬಾಳೆಹಣ್ಣಿನ ಸೇವನೆ ಹಾಗೂ ಚರ್ಮದ ಮೇಲೆ ಬಾಳೆಹಣ್ಣಿನ ಲೇಪನ ಹೊಂದುವುದು ಸೂಕ್ತ. ಬಾಳೆಹಣ್ಣಿನಲ್ಲಿ ಉತ್ಕರ್ಷಣ ನಿರೋಧಕ ಗುಣವಿದೆ. ಅದು ಆರೋಗ್ಯ ವೃದ್ಧಿಗೆ ಸಹಾಯ ಮಾಡುತ್ತದೆ. ಬಾಳೆಹಣ್ಣಿನ ಸಿಪ್ಪೆಯಿಂದ ಮುಖದ ಮೇಲೆ ಮೃದುವಾದ ಮಸಾಜ್ ಮಾಡುವುದರಿಂದ ಮುಖದಲ್ಲಿ ಉಂಟಾಗುವ ಉರಿಯೂತ ನಿವಾರಿಸಬಹುದು.ಬಾಳೆಹಣ್ಣಿನ ಲೇಪನವನ್ನು ಆಗಾಗ ನೆತ್ತಿ ಹಾಗೂ ಕೂದಲ ಬುಡಕ್ಕೆ ಅನ್ವಯಿಸುವುದರಿಂದ ಕೇಶರಾಶಿಗಳಿಗೆ ಸಂಬಂಧಿಸಿದ ಅನೇಕ ಸಮಸ್ಯೆಗಳನ್ನು ನಿವಾರಿಸಬಹುದು. ಬಾಳೆಹಣ್ಣಿನಲ್ಲಿ ಸಿಲಿಕಾ ಅಂಶ ಹೆಚ್ಚಾಗಿರುತ್ತದೆ. ಕೂದಲು ಒಡೆಯುವುದು, ಬಣ್ಣ ಕಳೆದುಕೊಳ್ಳುವುದು ಹಾಗೂ ಉದುರುವ ಸಮಸ್ಯೆಗಳು ನಿವಾರಣೆಯಾಗುತ್ತದೆ.



ಬಾಳೆಹಣ್ಣು ಪೊಟ್ಯಾಸಿಯಂ, ವಿಟಮಿನ್, ಕ್ಯಾಲ್ಸಿಯಮ್, ಕಾರ್ಬೋಹೈಡ್ರೇಟ್ ಅಂಶ ಹಾಗೂ ನೈಸರ್ಗಿಕವಾಗಿ ಇರುವ ತೈಲ ಗುಣವು ಕೂದಲಿಗೆ ಪೋಷಣೆ ನೀಡುತ್ತವೆ.

## ಚೈತನ್ಯದಾಯಕ ರಾತ್ರಿ ಆಕಾಶ

### ವಿಶೇಷ ಉಪನ್ಯಾಸ ನೀಡಿದ ಖ್ಯಾತ ಖಗೋಳಶಾಸ್ತ್ರಜ್ಞ ಮತ್ತು ಶಾ ಪ್ರಶಸ್ತಿ ಪುರಸ್ಕೃತ ಪ್ರೊ.ಶ್ರೀನಿವಾಸ್ ಕುಲಕರ್ಣಿ

ಖಗೋಳಶಾಸ್ತ್ರದ 2024ರ ಶಾ ಪ್ರಶಸ್ತಿ ಪುರಸ್ಕೃತರಾಗಿರುವ ಖ್ಯಾತ ಖಗೋಲಶಾಸ್ತ್ರಜ್ಞ ಪ್ರೊ. ಶ್ರೀನಿವಾಸ್ ಕುಲಕರ್ಣಿ ಅವರ ಚೈತನ್ಯದಾಯಕ ರಾತ್ರಿ ಆಕಾಶ ವಿಷಯ ಕುರಿತ ಉಪನ್ಯಾಸ ಕಾರ್ಯಕ್ರಮವನ್ನು ಇಂಟರ್ನ್ಯಾಷನಲ್ ಸೆಂಟರ್ ಫಾರ್ ಥಿಯರೆಟಿಕಲ್ ಸೈನ್ಸಸ್ (ಐಸಿಟಿಎಸ್) ನಗರದಲ್ಲಿ ಏರ್ಪಡಿಸಿತ್ತು.

ಮೂರ್ತಿ ಟ್ರಸ್ಟ್ ನ ಸಹಯೋಗದಲ್ಲಿ ಟೌನ್ ಹಾಲ್ನಲ್ಲಿ ಭಾನುವಾರ (ಜುಲೈ 28) ನಡೆದ ಕಾರ್ಯಕ್ರಮದಲ್ಲಿ 400ಕ್ಕೂ ಹೆಚ್ಚು ಜನರು ಪಾಲ್ಗೊಂಡಿದ್ದರು. ಪ್ರೊ. ಕುಲಕರ್ಣಿ ಅವರು, ಮೂಲತಃ ಕರ್ನಾಟಕದವರಾಗಿದ್ದು, ಕ್ಯಾಲ್ಟೆಕ್ನಲ್ಲಿ ಖಗೋಳಶಾಸ್ತ್ರ ಮತ್ತು ಗ್ರಹ ವಿಜ್ಞಾನದ ಪ್ರಾಧ್ಯಾಪಕರಾಗಿದ್ದಾರೆ.ಸಭಿಕರನ್ನು ಕನ್ನಡದಲ್ಲಿ ಸಂಕ್ಷಿಪ್ತವಾಗಿ ಸ್ವಾಗತಿಸುವುದರೊಂದಿಗೆ ಪ್ರೊ. ಶ್ರೀನಿವಾಸ್ ಅವರು ತಮ್ಮ ಉಪನ್ಯಾಸವನ್ನು ಪ್ರಾರಂಭಿಸಿದರು. ಸಭಿಕರ ಸಾಲಿನಲ್ಲಿ ತಮ್ಮ ಬಾಲ್ಯದ ಶಾಲಾ ಶಿಕ್ಷಕರು ಮತ್ತು ಸಹಪಾಠಿಗಳನ್ನು ಕಂಡು ಅವರು ಪುಳಕಿತರಾದರು. ತಮ್ಮ ಸಂಶೋಧನೆಯ ಶೈಲಿ ಮತ್ತು ಅದರ ಫಲಿತಾಂಶಗಳತ್ತ ಮಾತನಾಡುತ್ತ ಸಾಗಿದ ಅವರು, ಭೌತಶಾಸ್ತ್ರದ ವಿರುದ್ಧದ ವಿದ್ಯಮಾನಶಾಸ್ತ್ರ ಮತ್ತು ಅಮೆರಿಕದ ಕ್ಯಾಲಿಫೋರ್ನಿಯಾದ ಕ್ಯಾಲ್ಟೆಕ್ನ ಪಾಲೋಮರ್ ವೀಕ್ಷಣಾಲಯದಲ್ಲಿ ಇರುವ ಅತ್ಯಾಧುನಿಕ ರೋಬೋಟಿಕ್ ಕ್ಯಾಮೆರಾವಾದ ಜ್ವಿಕಿ ಟ್ರಾನ್ಸಿಯೆಂಟ್ ಫೆಸಿಲಿಟಿಯ (ಜೆಡ್ಟಿಎಫ್) ಅದ್ಭುತ ಆವಿಷ್ಕಾರಗಳ ವಿವರಗಳನ್ನು ಸಭಿಕರ ಜೊತೆ




ಹಂಚಿಕೊಂಡರು. ಪ್ರೊ. ಕುಲಕರ್ಣಿ ಅವರು ತಮ್ಮ ಉಪನ್ಯಾಸದಲ್ಲಿ ಜೆಡ್ಟಿಎಫ್–ನ ಅಭಿವೃದ್ಧಿ, ರಾತ್ರಿ ವೇಳೆಯಲ್ಲಿ ಆಕಾಶ ಅನ್ವೇಷಿಸುವಲ್ಲಿ ಅದರ ಪಾತ್ರ ಮತ್ತು ಖಗೋಲ ಮಾಹಿತಿ ವಿಜ್ಞಾನ, ಮಷಿನ್ ಲರ್ನಿಂಗ್ ಮತ್ತು ಕೃತಕ ಬುದ್ಧಿಮತ್ತೆಯು (ಎಐ) ಚೈತನ್ಯದಾಯಕ ಬ್ರಹ್ಮಾಂಡದ ವಿದ್ಯಮಾನಗಳ ಅಧ್ಯಯನದಲ್ಲಿ ಹೇಗೆ ಕ್ರಾಂತಿಯನ್ನುಂಟು ಮಾಡುತ್ತಿವೆ ಎಂಬುದರ ಮೇಲೆ ಬೆಳಕು ಚೆಲ್ಲುವ ಮಾಹಿತಿಗಳನ್ನು ಹಂಚಿಕೊಂಡರು.ಅವರ ಉಪನ್ಯಾಸದ ನಂತರ, ಅವರ ಸಂಶೋಧನಾ ಕೆಲಸದ ಬಗ್ಗೆ, ವಿಶೇಷವಾಗಿ ನಕ್ಷತ್ರಗಳ ಹುಟ್ಟು ಮತ್ತು ಅಂತ್ಯದ ಬಗ್ಗೆ ಸಭಿಕರು ಪೈಪೋಟಿಯಿಂದ ಪ್ರಶ್ನೆಗಳನ್ನು ಕೇಳಿ ಮಾಹಿತಿ ಪಡೆದರು. ಪ್ರೊ. ಕುಲಕರ್ಣಿ ಅವರು ಹುಬ್ಬಳ್ಳಿಯಲ್ಲಿ ತಾವು ಕಳೆದ ಬಾಲ್ಯ ಮತ್ತು ಐಐಟಿ ದೆಹಲಿಯಲ್ಲಿ ಸಂಶೋಧಕನಾಗಿ ತಮ್ಮ ವೃತ್ತಿ ಬದುಕಿನ ಆರಂಭಿಕ ದಿನಗಳ ಬಗ್ಗೆ ಪ್ರಶ್ನೆಗಳಿಗೆ ಉತ್ತರಿಸಲು ಹೆಚ್ಚು ಸಂಭ್ರಮಪಟ್ಟರು.

ಸ್ವಯಂ–ಅರಿವಿಗೆ ಸಂಬಂಧಿಸಿದಂತೆ ನಿಮ್ಮ ಹೃದಯದ ಮಾತಿಗೆ ಕಿವಿಗೊಡಿ. ಉತ್ತಮ ವೃತ್ತಿ ಆಯ್ಕೆಗಳನ್ನು ಮಾಡುವಲ್ಲಿ ಹೃದಯದ ಸಲಹೆ ಅನುಸರಿಸಬೇಕು ಎಂದು ಯುವ ಪೀಳಿಗೆಗೆ ಕಿವಿ ಮಾತು ಹೇಳಿದರು.ಖಗೋಳಶಾಸ್ತ್ರದ ಉತ್ಸಾಹಿಗಳು, ವಿದ್ಯಾರ್ಥಿಗಳು, ಸಂಶೋಧಕರು ಮತ್ತು ಸಾರ್ವಜನಿಕರು ಸೇರಿದಂತೆ ವೈವಿಧ್ಯಮಯ ಪ್ರೇಕ್ಷಕರು ಈ ಉಪಯುಕ್ತಕರ ಉಪನ್ಯಾಸಕ್ಕೆ ಸಾಕ್ಷಿಯಾದರು. ಉಪನ್ಯಾಸ ಕಾರ್ಯಕ್ರಮಕ್ಕೆ ಪ್ರವೇಶವು ಉಚಿತವಾಗಿತ್ತು. ಉಪನ್ಯಾಸದ ನಂತರ ಉಪಾಹಾರ ವಿತರಿಸಲಾಯಿತು. ಉಪನ್ಯಾಸ ಆಲಿಸಲು ಬಂದವರ ನೆರವಿಗಾಗಿ ಏರ್ಪಡಿಸಲಾಗಿದ್ದ ಮೆಜೆಸ್ಟಿಕ್ ಮೆಟ್ರೊ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ಷಟಲ್ ಬಸ್ ಸೌಲಭ್ಯವು ಸಭಿಕರ ಪಾಲಿಗೆ ತುಂಬ ಉಪಯುಕ್ತಕರವಾಗಿತ್ತು.

ಇಂಟರ್ನ್ಯಾಷನಲ್ ಸೆಂಟರ್ ಫಾರ್ ಥಿಯರೆಟಿಕಲ್ ಸೈನ್ಸಸ್ (ಐಸಿಟಿಎಸ್), ಟಾಟಾ ಇನ್ಸ್ಟಿಟ್ಯೂಟ್ ಆಫ್ ಫಂಡಮೆಂಟಲ್ ರಿಸರ್ಚ್ನ (ಟಿಐಎಫ್ಆರ್) ಉಪಕ್ರಮವಾಗಿದೆ. ಇದು ಸೈದ್ಧಾಂತಿಕ ವಿಜ್ಞಾನಗಳಲ್ಲಿ ವೈಜ್ಞಾನಿಕ ಸಂಶೋಧನೆ ಮತ್ತು ಶಿಕ್ಷಣ ಉತ್ತೇಜಿಸುವ ಗುರಿ ಹೊಂದಿದೆ. ಸ್ಥಳೀಯ ಸಮುದಾಯದ ಪ್ರಯೋಜನಕ್ಕಾಗಿ ಪ್ರಕೃತಿಯ ಮರುಸ್ಥಾಪನೆ, ಸಂಸ್ಕೃತಿಯ ಸಂರಕ್ಷಣೆ ಮತ್ತು ವಿಜ್ಞಾನದ ಪ್ರಗತಿಯನ್ನು ಬೆಂಬಲಿಸುವ ಗುರಿಯನ್ನು ಮೂರ್ತಿ ಟ್ರಸ್ಟ್ ಹೊಂದಿದೆ.



ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ–9964739507

www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಹಿರಿಯರ ಮಾತಿಗೆ ಗೌರವ, ದೂರ ಪ್ರಯಾಣ, ಮಹಿಳೆಯರಿಗೆ ಶುಭ, ದೇವತಾ ಕಾರ್ಯ.

**ವೃಷಭ:** ಸ್ವಯಂಕೃತ ಅಪರಾಧ, ವಿದೇಶ ಯಾನ ಶೀತ ಸಂಬಂಧ ಕಾಯಿಲೆ, ಕೆಲಸಗಳಲ್ಲಿ ಮುನ್ನಡೆ, ಅಧಿಕ ಖರ್ಚು.

**ಮಿಥುನ:** ಯತ್ನ ಕಾರ್ಯಗಳಲ್ಲಿ ವಿಳಂಬ, ಬಂಧು ಮಿತ್ರರ ಆಗಮನ, ಆರೋಗ್ಯದಲ್ಲಿ ಏರುಪೇರು, ಪರಸ್ಥಳವಾಸ.

**ಕಟಕ:** ನಾನಾ ವಿಚಾರಗಳಲ್ಲಿ ಆಸಕ್ತಿ, ಮನಸ್ಸಿನಲ್ಲಿ ನಾನಾ ಆಲೋಚನೆ, ಶತ್ರು ಕಾಟ, ಚಂಚಲ ಮನಸ್ಸು

**ಸಿಂಹ:** ಸಾಧಾರಣ ಪ್ರಗತಿ, ಉದ್ಯೋಗದಲ್ಲಿ ವರ್ಗಾವಣೆ, ಆತಂಕ, ಶತ್ರು ಭಾದೆ, ಸುಖ ಭೋಜನ, ಅಧಿಕ ಖರ್ಚು.

**ಕನ್ಯಾ:** ವ್ಯವಹಾರದಲ್ಲಿ ಲಾಭ, ಕುಟುಂಬದಲ್ಲಿ ಕಿರಿಕಿರಿ, ಹೆತ್ತವರಲ್ಲಿ ದ್ವೇಷ, ಸಜ್ಜನ ಸಹವಾಸದಿಂದ ಕೀರ್ತಿ.

**ತುಲಾ:** ಮನಸ್ಸಿನಲ್ಲಿ ಭಯ, ಸಂಕಷ್ಟಗಳು ಹೆಚ್ಚು, ಆತುರದ ನಿರ್ಧಾರ, ಶ್ರಮದಲ್ಲಿ ಅಭಿವೃದ್ಧಿ.

**ವೃಶ್ಚಿಕ:** ಅಮೂಲ್ಯ ವಸ್ತುಗಳ ಖರೀದಿ, ಯಾರನ್ನು ಹೆಚ್ಚಾಗಿ ನಂಬಬೇಡಿ, ಕೋಪ ಜಾಸ್ತಿ, ಅನಾರೋಗ್ಯ.

**ಧನಸ್ಸು:** ಕೆಲಸದಲ್ಲಿ ಏಕಾಗ್ರತೆ, ಪರಿಶ್ರಮದಿಂದ ಪ್ರಗತಿ, ದುಷ್ಟರಿಂದ ದೂರವಿರಿ, ಅಕಾಲ ಭೋಜನ.

**ಮಕರ:** ಸಾಲ ಮರುಪಾವತಿಸುವಿರಿ, ಆರೋಗ್ಯದಲ್ಲಿ ತೊಂದರೆ, ತಾಳ್ಮೆ ಇರಲಿ, ಗುರಿ ಸಾಧಿಸಲು ಸುಸಮಯ.

**ಕುಂಭ:** ಆತ್ಮೀಯರೊಂದಿಗೆ ಮಾತುಕತೆ, ಉನ್ನತ ವಿದ್ಯಾಭ್ಯಾಸ, ಸ್ತ್ರೀ ಸೌಖ್ಯ, ರೋಗಭಾದೆ, ಅಪಕೀರ್ತಿ, ಮನೋವ್ಯಥೆ.

**ಮೀನ:** ಖರ್ಚು, ಗೌರವ, ಶರೀರದಲ್ಲಿ ಆಯಾಸ, ವಿವಾಹ ಯೋಗ

## ವಿಶ್ವ ರೇಂಜರ್ ದಿನ

ಜುಲೈ 31 ರಂದು ವಿಶ್ವ ರೇಂಜರ್ ದಿನ ಎಂದು ನೀವು ಕೇಳಿದಾಗ 'ಪಾರ್ಕ್ ರೇಂಜರ್' ಮನಸ್ಸಿಗೆ ಬರುವ ಮೊದಲ ವಿಷಯವಲ್ಲ. ನೀವು ಸೇನಾ ರೇಂಜರ್ಗಳು, ಟೆಕ್ಸಾಸ್ ರೇಂಜರ್ಗಳು ಅಥವಾ ನ್ಯೂಯಾರ್ಕ್ ರೇಂಜರ್ಗಳ ದರ್ಶನಗಳನ್ನು ಹೊಂದುವ ಸಾಧ್ಯತೆ ಹೆಚ್ಚು. ಆದರೆ ವಿಶ್ವ ರೇಂಜರ್ ದಿನವು ಮಿಲಿಟರಿ ಅಥವಾ ಕ್ರೀಡಾ ವೀರರ ಬಗ್ಗೆ ಅಲ್ಲ. ಇಂದು, ನಾವು ಪಾರ್ಕ್ ರೇಂಜರ್ಗಳಿಗೆ ಗೌರವ ಸಲ್ಲಿಸುತ್ತೇವೆ, ಇದನ್ನು ಅರಣ್ಯ ರೇಂಜರ್ಗಳು ಎಂದೂ ಕರೆಯುತ್ತಾರೆ – ಅಮೆರಿಕದ ಕ್ಷೀಣಿಸುತ್ತಿರುವ ಅರಣ್ಯ ಭೂ ಸಂಪನ್ಮೂಲಗಳನ್ನು ರಕ್ಷಿಸುವ, ಸಂರಕ್ಷಿಸುವ ಮತ್ತು ರಕ್ಷಿಸುವ ಹಾಡದ ವೀರರು. ಮತ್ತು ಕರ್ತವ್ಯದ ಸಾಲಿನಲ್ಲಿ ಪ್ರಾಣ ಕಳೆದುಕೊಂಡ ರೇಂಜರ್ಗಳನ್ನು ನಾವು ಸ್ಮರಿಸುತ್ತೇವೆ. ರಾಷ್ಟ್ರೀಯ ಉದ್ಯಾನವನದ ಪ್ರವೇಶ ಬೂತ್ನಲ್ಲಿ ಪಾರ್ಕ್ ರೇಂಜರ್ ಪಾಸ್ಗಳನ್ನು ಪರಿಶೀಲಿಸುವುದು ಮತ್ತು ಪ್ರವೇಶ ಶುಲ್ಕವನ್ನು ಸಂಗ್ರಹಿಸುವುದು ಅಥವಾ ಅರಣ್ಯ ರೇಂಜರ್ ವನ್ಯಜೀವಿಗಳನ್ನು ವ್ಯಾಖ್ಯಾನಿಸುವುದು ಮತ್ತು ಪ್ರವಾಸಗಳಲ್ಲಿ ಸಂದರ್ಶಕರನ್ನು ಕರೆದೊಯ್ಯುವಾಗ ಸಂರಕ್ಷಣೆ ಕುರಿತು ಚರ್ಚಿಸುವುದನ್ನು ನಮ್ಮಲ್ಲಿ ಹೆಚ್ಚಿನವರು ಸುಲಭವಾಗಿ ಚಿತ್ರಿಸಬಹುದು. ಆದರೆ ನಮ್ಮಲ್ಲಿ ಕೆಲವರು ಉದ್ಯಾನವನದ ರೇಂಜರ್ನ ಕರ್ತವ್ಯಗಳು ಅವರ ವೃತ್ತಿಗೆ ಅಂತರ್ಗತವಾಗಿರುವ ಜೀವ–ಬೆದರಿಕೆಯ ಅಪಾಯಗಳೊಂದಿಗೆ ಎಷ್ಟು ಬಾರಿ ಮುಖಾಮುಖಿಯಾಗುತ್ತವೆ ಎಂಬುದರ ಬಗ್ಗೆ ಪರಿಚಿತರಾಗಿದ್ದಾರೆ. 2004 ರಲ್ಲಿ, ಪಾರ್ಕ್ ರೇಂಜರ್ಗಳು ವಿಶ್ವಾದ್ಯಂತ ಎದುರಿಸುತ್ತಿರುವ ಅಪಾಯಗಳ ಬಗ್ಗೆ ಗೌರವ ಮತ್ತು ಅರಿವಿನ ಕೊರತೆಯ ಬಗ್ಗೆ ಕಾಳಜಿ ವಹಿಸಿದರು, ಸಾಕ್ಷ್ಯಚಿತ್ರ ನಿರ್ಮಾಪಕ ಮತ್ತು ಸಂರಕ್ಷಣಾವಾದಿ ಸೀನ್ ವಿಲ್ಮೋರ್ ಅವರು ಉದ್ಯಾನವನದ ರೇಂಜರ್ಗಳ ದುರವಸ್ಥೆಯ ನೈಜ–ಜೀವನದ ಕಥೆಗಳನ್ನು ಮಸೂರದ ಮೂಲಕ ಸಾರ್ವಜನಿಕ ಗಮನಕ್ಕೆ ತರಲು ತಮ್ಮ ಧ್ಯೇಯವನ್ನು ಮಾಡಿದರು. ಒಂದು ಕ್ಯಾಮೆರಾ. ಸ್ವತಃ ಪಾರ್ಕ್ ರೇಂಜರ್ ಆಗಿರುವ ವಿಲ್ಮೋರ್ ಅವರು ಸುಮಾರು ಒಂದು ವರ್ಷ ಪೂರ್ತಿ 23 ದೇಶಗಳಲ್ಲಿ ರೇಂಜರ್ಗಳನ್ನು ಸಂದರ್ಶಿಸಿದರು, ದಿ ಥಿನ್ ಗ್ರೀನ್ ಲೈನ್ ಎಂಬ ಸಾಕ್ಷ್ಯಚಿತ್ರಕ್ಕಾಗಿ ಸೇವೆ ಮತ್ತು ತ್ಯಾಗದ ಸ್ಪೂರ್ತಿದಾಯಕ ಕಥೆಗಳನ್ನು ಬಹಿರಂಗಪಡಿಸಿದರು ಮತ್ತು ರೆಕಾರ್ಡ್ ಮಾಡಿದರು. 2007 ರಲ್ಲಿ ಅದರ ಪ್ರಥಮ ಪ್ರದರ್ಶನದಿಂದ, ದಿ ಥಿನ್ ಗ್ರೀನ್ ಲೈನ್ ಅನ್ನು 50 ಕ್ಕೂ ಹೆಚ್ಚು ದೇಶಗಳಲ್ಲಿ ಜನರು ವೀಕ್ಷಿಸಿದ್ದಾರೆ, ಘನತೆ, ಹೆಮ್ಮೆ ಮತ್ತು ಪ್ರಪಂಚದಾದ್ಯಂತ ಪಾರ್ಕ್ ರೇಂಜರ್ಗಳ ಭರವಸೆಯನ್ನು ಮರುಸ್ಥಾಪಿಸಿದ್ದಾರೆ. ಸಾಕ್ಷ್ಯಚಿತ್ರವು ಉದ್ಯಾನವನದ ರೇಂಜರ್ಗಳ ದೈನಂದಿನ ಜೀವನದಲ್ಲಿ ಅಪರೂಪದ ನೋಟವನ್ನು ಒದಗಿಸುತ್ತದೆ, ಅವರು ಮತ್ತು ಅವರ ಕುಟುಂಬಗಳು ಅವರು ಪ್ರತಿದಿನ ತೆಗೆದುಕೊಳ್ಳುವ ಸಾಮಾನ್ಯ ಅಪಾಯಗಳ ಮಧ್ಯೆ ಮಾಡುವ ತ್ಯಾಗವನ್ನು ಹಂಚಿಕೊಳ್ಳುತ್ತಾರೆ. ಈ ಚಲನಚಿತ್ರವು ರೇಂಜರ್ ವಿಲ್ಮೋರ್ಗೆ ದಿ ಥಿನ್ ಗ್ರೀನ್ ಲೈನ್ ಫೌಂಡೇಶನ್ ಅನ್ನು ಸ್ಥಾಪಿಸಲು ವೇಗವರ್ಧಕವಾಯಿತು, ಈಗ 1992 ರಲ್ಲಿ ಸ್ಥಾಪಿಸಲಾದ ಇಂಟರ್ನ್ಯಾಷನಲ್ ರೇಂಜರ್ಸ್ ಫೆಡರೇಶನ್ ಅಥವಾ ಖಖಈ ನ ಅಧಿಕೃತ ಚಾರಿಟಿ ಅಂಗವಾಗಿದೆ. ಥಿನ್ ಗ್ರೀನ್ ಲೈನ್ ಫೌಂಡೇಶನ್ ಮತ್ತು ಇಂಟರ್ನ್ಯಾಷನಲ್ ರೇಂಜರ್ಸ್ ಫೆಡರೇಶನ್ 2007 ರಲ್ಲಿ ಪಡೆಗಳನ್ನು ಸೇರಿಕೊಂಡು, ಇಂಟರ್ನ್ಯಾಷನಲ್ ರೇಂಜರ್ಸ್ ಫೌಂಡೇಶನ್ ಸ್ಥಾಪನೆಯ 15 ನೇ ವಾರ್ಷಿಕೋತ್ಸವವನ್ನು ಗುರುತಿಸಿ ಮೊದಲ ವಿಶ್ವ ರೇಂಜರ್ ದಿನವನ್ನು ಆಚರಿಸಲಾಯಿತು.

# ಕಮಲಾ ಪರ ಪ್ರಚಾರಕ್ಕಿಳಿದ 3.6 ಲಕ್ಷ ಜನ



**ಅಮೆರಿಕ:** 2024ರ ಅಮೆರಿಕ ಅಧ್ಯಕ್ಷೀಯ ಚುನಾವಣೆ ಸಾಕಷ್ಟು ಕುತೂಹಲ ಕೆರಳಿಸಿದೆ. ಬೈಡನ್ ಅಧ್ಯಕ್ಷೀಯ ಚುನಾವಣೆಯಿಂದ ಹಿಂದೆ ಸರಿಯುವುದಾಗಿ ಘೋಷಿಸಿದ ಬಳಿಕ ಆ ಸ್ಥಾನಕ್ಕೆ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಹೆಸರು ಕೇಳಿ ಬಂದಿದೆ. ಇದೀಗ ಡೆಮಕ್ರಾಟಿಕ್ ಪಕ್ಷದ ಸಂಭವನೀಯ ಅಭ್ಯರ್ಥಿ ಕಮಲಾ ಹ್ಯಾರಿಸ್ ಪರ ಪ್ರಚಾರಕ್ಕೆ 3.6 ಲಕ್ಷ ಜನರು ಸ್ವಪ್ರೇರಿತರಾಗಿ ಮುಂದೆ ಬಂದಿದ್ದಾರೆ.

ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿರುದ್ಧದ ಸ್ಪರ್ಧೆಯಲ್ಲಿ ಕಮಲಾ ಪರವಾಗಿ ತಳಮಟ್ಟದಲ್ಲಿ ಬೆಂಬಲ ಬಲಗೊಳ್ಳುತ್ತಿದೆ ಎಂಬುದನ್ನು ಇದು ಸಾಭೀತು ಪಡಿಸಿದೆ.

ಅಧ್ಯಕ್ಷ ಜೋ ಬೈಡನ್ ಅವರು ಸ್ಪರ್ಧೆಯಿಂದ ಹಿಂದೆ ಸರಿದ ಬಳಿಕ ಕಮಲಾ ಅಧಿಕೃತವಾಗಿ ತಾನು ಆಕಾಂಕ್ಷಿ ಎಂದು ಪ್ರಕಟಿಸಿದ್ದರು. ಆದರೆ ಹ್ಯಾರಿಸ್ ಅವರನ್ನು ಪಕ್ಷ ಇನ್ನೂ ಅಧಿಕೃತವಾಗಿ ಅಭ್ಯರ್ಥಿತನವನ್ನು ಘೋಷಿಸಬೇಕಿದೆ.

'ಕಮಲಾ ಹ್ಯಾರಿಸ್ ಪರ ಮೊದಲ ವಾರದಲ್ಲಿ 200 ಮಿಲಿಯನ್ ಡಾಲರ್ ನಿಧಿ ಸಂಗ್ರಹವಾಗಿದ್ದು, 17 ಸಾವಿರ ಕಾರ್ಯಕರ್ತರು ಸ್ವಪ್ರೇರಣೆಯಿಂದ ಪ್ರಚಾರಕ್ಕೆ ಮುಂದಾಗಿದ್ದರು. ಈಗ ಕಾರ್ಯಕರ್ತರ ಸಂಖ್ಯೆ 3.6 ಲಕ್ಷಕ್ಕೆ ಏರಿದೆ' ಎಂದು ಪ್ರಚಾರ ಕಾರ್ಯದ ಮುಂಚೂಣಿಯಲ್ಲಿರುವ ಡ್ಯಾನ್ ಕನ್ನಿನೆನ್ ಹೇಳಿದರು.

'ಹ್ಯಾರಿಸ್ ಫಾರ್ ಪ್ರೆಸಿಡೆಂಟ್' ಅಭಿಯಾನ ಬರುವ ದಿನಗಳಲ್ಲಿ ಇನ್ನಷ್ಟು ಚುರುಕು ಪಡೆಯಲಿದೆ. ಗೆಲುವಿಗೆ ಅಗತ್ಯವಿರುವ 270 ಚುನಾವಣಾ ಮತ ಪಡೆಯಲು ಅಮೆರಿಕದ ಬ್ಲೂವಾಲ್ ಮತ್ತು ಸನ್ ಬೆಲ್ಟ್ ಎರಡೂ ವಲಯದಲ್ಲಿ ಪ್ರಚಾರವನ್ನು ತೀವ್ರಗೊಳಿಸಲಾಗುವುದು' ಎಂದು ಹೇಳಿದರು.

# 8ನೇ ವೇತನ ಆಯೋಗ ರಚನೆಗೆ ನೋ ಎಂದ ಕೇಂದ್ರ ಸರ್ಕಾರ

**ನವದೆಹಲಿ:** 8ನೇ ಕೇಂದ್ರ ವೇತನ ಆಯೋಗದ ರಚನೆಗಾಗಿ ಸರ್ಕಾರವು ಎರಡು ಮನವಿಗಳನ್ನ ಸ್ವೀಕರಿಸಿದೆ, ಆದರೆ ಅಂತಹ ಯಾವುದೇ ಪ್ರಸ್ತಾಪವು ಪ್ರಸ್ತುತ ಪರಿಗಣನೆಯಲ್ಲಿಲ್ಲ ಎಂದು ಮಂಗಳವಾರ ಸಂಸತ್ತಿಗೆ ತಿಳಿಸಲಾಯಿತು.



**8ನೇ ವೇತನ ಆಯೋಗದ ಇತ್ತೀಚಿನ ಅಪ್ಡೇಟ್:** ಜೂನ್ 2024ರಲ್ಲಿ 8ನೇ ಕೇಂದ್ರ ವೇತನ ಆಯೋಗವನ್ನ ರಚಿಸಲು ಎರಡು ಮನವಿಗಳನ್ನ ಸ್ವೀಕರಿಸಲಾಗಿದೆ.

ಪ್ರಸ್ತುತ ಅಂತಹ ಯಾವುದೇ ಪ್ರಸ್ತಾಪವು ಸರ್ಕಾರದ ಪರಿಗಣನೆಯಲ್ಲಿಲ್ಲ ಎಂದು ಹಣಕಾಸು ರಾಜ್ಯ ಸಚಿವ ಪಂಕಜ್ ಚೌಧರಿ ರಾಜ್ಯಸಭೆಗೆ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಸಾಮಾನ್ಯವಾಗಿ, ಸರ್ಕಾರಿ ನೌಕರರ ವೇತನವನ್ನ ಪರಿಷ್ಕರಿಸಲು ಕೇಂದ್ರ ಸರ್ಕಾರವು ಪ್ರತಿ 10 ವರ್ಷಗಳಿಗೊಮ್ಮೆ ವೇತನ ಆಯೋಗವನ್ನ ರಚಿಸುತ್ತದೆ.

7ನೇ ವೇತನ ಆಯೋಗವನ್ನ ಫೆಬ್ರವರಿ 2014ರಲ್ಲಿ ರಚಿಸಲಾಯಿತು. ಇದರ ಶಿಫಾರಸುಗಳನ್ನ ಜನವರಿ 1, 2016 ರಿಂದ ಜಾರಿಗೆ ತರಲಾಯಿತು.

ಕ್ರಮೇಣ 8ನೇ ವೇತನ ಆಯೋಗದತ್ತ ಗಮನ ಹರಿಸುತ್ತಿದ್ದರೆ, 7ನೇ ವೇತನ ಆಯೋಗವು ಕೇಂದ್ರ ಸರ್ಕಾರಿ ನೌಕರರ ವೇತನದ ಮೇಲೆ ಪ್ರಭಾವ ಬೀರುತ್ತಲೇ ಇದೆ. ಹಣದುಬ್ಬರದ ಕಾರಣದಿಂದಾಗಿ ಕೇಂದ್ರ ಸರ್ಕಾರಿ ನೌಕರರು ತಮ್ಮ ಸಂಬಳದ ನಿಜವಾದ ಮೌಲ್ಯದ ಸವೆತವನ್ನ ಸರಿದೂಗಿಸಲು, ಅವರಿಗೆ ತುಟ್ಟಿಭತ್ಯೆ (ಡಿಎ) ನೀಡಲಾಗುತ್ತದೆ ಮತ್ತು ಹಣದುಬ್ಬರದ ದರದ ಆಧಾರದ ಮೇಲೆ ಪ್ರತಿ ಆರು ತಿಂಗಳಿಗೊಮ್ಮೆ ಡಿಎ ದರವನ್ನು ನಿಯತಕಾಲಿಕವಾಗಿ ಪರಿಷ್ಕರಿಸಲಾಗುತ್ತದೆ.

# ಅಮೆರಿಕದ ವನ್ಯಜೀವಿಗಳಲ್ಲಿ ಕೋವಿಡ್ ಸೋಂಕು ಪತ್ತೆ

**ಅಮೆರಿಕ:** ಅಮೆರಿಕದಲ್ಲಿ ಜನರ ಆವಾಸಸ್ಥಾನಗಳ ಸುತ್ತಮುತ್ತ ಕಂಡುಬರುವ ಆರು ಪ್ರಾಣಿಗಳಲ್ಲಿ ಕೋವಿಡ್-19ಗೆ ಕಾರಣವಾದ ಸಾರ್ಸ್-ಕೋವ್-2 ವೈರಸ್ ಪತ್ತೆಯಾಗಿದೆ. ಐದು ಪ್ರಭೇದಗಳಿಗೆ ಈ ಮೊದಲೇ ಸಾರ್ಸ್-ಕೋವ್-2 ವೈರಸ್ ಸೋಂಕು ತಗುಲಿತ್ತು ಎಂದು ಹೊಸ ಅಧ್ಯಯನ ತಿಳಿಸಿದೆ. ಜಿಂಕೆ ಇಲಿಗಳು, ವರ್ಜೀನಿಯಾ ಒಪೊಸಮ್ಗಳು (ಇಲಿ ರೀತಿಯ ಪ್ರಾಣಿ), ರಕೂನ್ಗಳು (ನಾಯಿಯ ರೀತಿಯ ಪ್ರಾಣಿ), ನೆಲಹಾಗ್ಗಳು (ಅಳಿಲು ರೀತಿಯ ಪ್ರಾಣಿ), ಪೂರ್ವ ಕಾಟನ್ ಟೈಲ್ ಮೊಲಗಳು ಮತ್ತು ಪೂರ್ವ ಕೆಂಪು ಬಾವಲಿಗಳು ಈ ಆರು ಪ್ರಭೇದಗಳ ಪ್ರಾಣಿಗಳಲ್ಲಿ ಸಾರ್ಸ್-ಕೋವ್-2 ವೈರಸ್ ಪತ್ತೆಯಾಗಿದೆ. ಒಂದು ಒಪೊಸಮ್ನಲ್ಲಿ ಕಂಡುಬಂದಿರುವ ವೈರಸ್ ಈ ಹಿಂದೆ ತಿಳಿಯದ ವೈರಲ್ ರೂಪಾಂತರಗಳನ್ನು ಹೊಂದಿದೆ ಮತ್ತು ಈ ವೈರಸ್ ಮಾನವರು ಮತ್ತು ಅವರ ರೋಗನಿರೋಧಕ ಪ್ರತಿಕ್ರಿಯೆಯ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎಂಬುದನ್ನು ನಿರ್ಧರಿಸುತ್ತದೆ. ವರ್ಜೀನಿಯಾ ಟೆಕ್ ಯೂನಿವರ್ಸಿಟಿ ನಡೆಸಿದ ಅಧ್ಯಯನದ ಪ್ರಕಾರ, ಪ್ರಭೇದಗಳನ್ನು ಅವಲಂಬಿಸಿ ಸೋಂಕು ತಗಲುವ ಪ್ರಮಾಣ ಶೇಕಡಾ 40 ರಿಂದ 60 ರಷ್ಟಿದೆ. ನೇಚರ್ ಕಮ್ಯುನಿಕೇಷನ್ಸ್ ಜರ್ನಲ್ನಲ್ಲಿ ಪ್ರಕಟವಾದ ಅಧ್ಯಯನದ ಪ್ರಕಾರ, ಜನರು ನಡೆದಾಡುವ ದಾರಿಗಳು ಮತ್ತು ಹೆಚ್ಚಿನ ದಟ್ಟಣೆಯ ಸಾರ್ವಜನಿಕ ಪ್ರದೇಶಗಳ ಬಳಿ ವಾಸಿಸುವ ಪ್ರಾಣಿಗಳಲ್ಲಿ ಸಾರ್ಸ್-ಕೋವ್-2 ಸೋಂಕು ಹೆಚ್ಚಾಗಿ ಕಂಡು ಬಂದಿದೆ. ಅಂದರೆ ಈ ಪ್ರಾಣಿಗಳಿಗೆ ಮಾನವರಿಂದಲೇ ಸೋಂಕು ತಗುಲಿದೆ ಎನ್ನಲಾಗುತ್ತಿದೆ. ಆನುವಂಶಿಕ ಟ್ರ್ಯಾಕಿಂಗ್ನಲ್ಲಿ ವಿಶಿಷ್ಟ ವೈರಲ್ ರೂಪಾಂತರಗಳಿರುವುದು ಕಂಡು ಬಂದಿದ್ದು, ಇದು ಮಾನವರಲ್ಲಿನ ಕೋವಿಡ್ ಸೋಂಕಿನ ರೂಪಾಂತರಗಳಿಗೆ ನಿಕಟವಾಗಿ ಹೊಂದಿಕೆಯಾಗುತ್ತದೆ ಮತ್ತು ಇದು ಒಂದು ಪ್ರಭೇದದಿಂದ ಮತ್ತೊಂದು ಪ್ರಭೇದಕ್ಕೆ ವೈರಸ್ ವರ್ಗಾವಣೆಯಾಗಿರುವುದನ್ನು ಸೂಚಿಸುತ್ತದೆ.



# ಒಲಿಂಪಿಕ್‌ನಲ್ಲಿ ಪದಕ ವಿಜೇತನಿಗೆ ಕೋವಿಡ್ ಪಾಸಿಟಿವ್!

**ಪ್ಯಾರಿಸ್:** ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ 100 ಮೀಟರ್ ಬ್ರೆಸ್ಟ್ ಸ್ಟ್ರೋಕ್ ನಲ್ಲಿ ಬೆಳ್ಳಿ ಪದಕ ಗೆದ್ದಿರುವ ಇಂಗ್ಲೆಂಡ್ನ ಈಜುಗಾರ ಆಡಮ್ ಪೀಟಿ ಅವರಿಗೆ ಕೋವಿಡ್ ಸೋಂಕು ದೃಢಪಟ್ಟಿದೆ. ಭಾನುವಾರ ನಡೆದ ಸ್ಪರ್ಧೆಯಲ್ಲಿ ಆಡಮ್ ಎರಡನೇ ಸ್ಥಾನ ಗಳಿಸಿದ್ದು, ಬಳಿಕ ಅವರು ಅಸ್ವಸ್ಥರಾಗಿದ್ದಾರೆ. ಅವರಿಗೆ ಗಂಟಲು ನೋವು ಕಂಡುಬಂದಿದ್ದು, ಅವರ ಆರೋಗ್ಯ ಹದಗೆಡುತ್ತಿದ್ದಂತೆ ಕೊರೊನಾ ಪರೀಕ್ಷೆಗೆ ಒಳಪಡಿಸಲಾಗಿತ್ತು. ಇದೀಗ ವರದಿಯಲ್ಲಿ ಕೋವಿಡ್ ಪಾಸಿಟಿವ್ ಬಂದಿದೆ. ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಕ್ರೀಡಾಪಟುಗಳಿಗೆ ಕೋವಿಡ್ -19 ಪಾಸಿಟಿವ್ ಕಂಡುಬಂದಿರುವುದು ಇದೇ ಮೊದಲೇನಲ್ಲ. ಇದಕ್ಕೂ ಮೊದಲು ಉದ್ಘಾಟನಾ ಸಮಾರಂಭದ ಕೆಲವು ದಿನಗಳ ಮುನ್ನ ಆಸ್ಟ್ರೇಲಿಯಾದ ವಾಟರ್ ಪೋಲೋ ಸ್ಕ್ವಾಡ್‌ನ ಐದು ಸದಸ್ಯರು ಸೋಂಕಿಗೆ ಒಳಗಾಗಿದ್ದರು.



# ಕ್ಯಾಲಿಫೋರ್ನಿಯಾ 3.7 ಲಕ್ಷ ಎಕರೆಗೆ ವ್ಯಾಪಿಸಿದ ಕಾಡ್ಗಿಚ್ಚು

**ನ್ಯೂಯಾರ್ಕ್:** ಅಮೆರಿಕದ ಕ್ಯಾಲಿಫೋರ್ನಿಯಾ ರಾಜ್ಯದಲ್ಲಿ ತೀವ್ರಗತಿಯಲ್ಲಿ ಹರಡಿರುವ ಕಾಡ್ಗಿಚ್ಚನ್ನು ನಿಯಂತ್ರಿಸಲು ಸುಮಾರು 4,900 ಅಧಿಕ ಅಗ್ನಿಶಾಮಕ ಸಿಬ್ಬಂದಿ ಪ್ರಯತ್ನಿಸುತ್ತಿದ್ದು ಸುಮಾರು 3,70,000 ಎಕರೆ ಪ್ರದೇಶಕ್ಕೆ ಕಾಡ್ಗಿಚ್ಚು ವ್ಯಾಪಿಸಿದ್ದು ಸಾವಿರಾರು ಮಂದಿಯನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಗೊಳಿಸಿರುವುದಾಗಿ ವರದಿಯಾಗಿದೆ. ಕ್ಯಾಲಿಫೋರ್ನಿಯಾದ ಉತ್ತರದಲ್ಲಿರುವ ಚಿಕೊ ನಗರದಲ್ಲಿ ಕಳೆದ ಬುಧವಾರದಿಂದಲೂ ಬೆಂಕಿ ಉರಿಯುತ್ತಿದ್ದು ರಾಜ್ಯದ ಇತಿಹಾಸದಲ್ಲೇ ಅತ್ಯಂತ ಭೀಕರ ಅಗ್ನಿದುರಂತವಾಗಿದೆ. 400 ಅಗ್ನಿಶಾಮಕ ಯಂತ್ರಗಳು, ಸುಮಾರು 4,900 ಅಗ್ನಿಶಾಮಕ ಸಿಬ್ಬಂದಿ, 33 ಹೆಲಿಕಾಪ್ಟರ್ ಗಳನ್ನು ಬಳಸಿ ಕಾಡ್ಗಿಚ್ಚನ್ನು ನಿಯಂತ್ರಿಸುವ ಪ್ರಯತ್ನ ಮುಂದುವರಿದಿದ್ದು ಜೋರಾಗಿ ಗಾಳಿ ಬೀಸುತ್ತಿರುವುದರಿಂದ ಬೆಂಕಿ ತೀವ್ರಗತಿಯಲ್ಲಿ ಹರಡುತ್ತಿದೆ ಎಂದು ಅಧಿಕಾರಿಗಳು ಸ್ಥಳೀಯ ನಿವಾಸಿಗಳಿಗೆ ಎಚ್ಚರಿಕೆ ನೀಡಿದ್ದಾರೆ. 42 ವರ್ಷದ ವ್ಯಕ್ತಿಯೊಬ್ಬ ಬೆಂಕಿಯಲ್ಲಿ ಉರಿಯುತ್ತಿದ್ದ ಕಾರನ್ನು ಹಳ್ಳಕ್ಕೆ ತಳ್ಳಿದಾಗ ಹಳ್ಳದ ಬದಿಯಲ್ಲಿದ್ದ ಒಣಹುಲ್ಲಿಗೆ ಬೆಂಕಿ ಹೊತ್ತಿಕೊಂಡಿದೆ. ಕ್ರಮೇಣ ಸಮೀಪದ ಅರಣ್ಯಪ್ರದೇಶಕ್ಕೆ ವ್ಯಾಪಿಸಿ ಕಾಡ್ಗಿಚ್ಚಿನ ರೂಪ ಪಡೆದಿದೆ. ಘಟನೆಗೆ ಸಂಬಂಧಿಸಿ ಆರೋಪಿಯನ್ನು ಬಂಧಿಸಿರುವುದಾಗಿ ಅಧಿಕಾರಿಗಳು ಹೇಳಿದ್ದಾರೆ.



# ವಯನಾಡು ದುರಂತವನ್ನು ಮಾನವ ನಿರ್ಮಿತ ಎಂದ ಮಾಧವ್ ಗಾಡ್ಗೀಳ್



**ಕೇರಳ:** ಕೇರಳದ ವಯನಾಡಿನಲ್ಲಿ ಸಂಭವಿಸಿದ ಪ್ರಾಕೃತಿಕ ದುರಂತವನ್ನು ಪರಿಸರತಜ್ಞ ಮಾಧವ್ ಗಾಡ್ಗೀಳ್ ಅವರು ಮಾನವ ನಿರ್ಮಿತ ಎಂದು ಕರೆದಿದ್ದಾರೆ. 2018ರಲ್ಲಿ ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಭೀಕರ ಪ್ರವಾಹ, ಭೂಕುಸಿತಗಳು ಹಾಗೂ ಇತ್ತೀಚೆಗಷ್ಟೇ ಉತ್ತರ ಕನ್ನಡದ ಶಿರೂರಿನಲ್ಲಿ ಸಂಭವಿಸಿದ ಗುಡ್ಡ ಕುಸಿತ, ನಿನ್ನೆ ಕೇರಳದ ವಯನಾಡಿನಲ್ಲಿ ಆದ ಗುಡ್ಡ ಕುಸಿತ, ಭೂಕುಸಿತ ಪರಿಸರ ತಜ್ಞರನ್ನು ಮತ್ತೆ ಚರ್ಚೆಗೀಡು ಮಾಡಿದೆ.

ಈ ದುರಂತವನ್ನು ಮಾನವ ನಿರ್ಮಿತ ಎಂದಿರುವ ಮಾಧವ್ ಪರಿಸರಕ್ಕೆ ಸಂಬಂಧಿಸಿದ ಶಿಫಾರಸುಗಳನ್ನು ಜಾರಿಗೊಳಿಸಲು ಕೇರಳ ಸರ್ಕಾರ ವಿಫಲವಾಗಿದೆ ಎಂದು ಹೇಳಿದ್ದಾರೆ. ಸುದ್ದಿಗಾರರ ಮಾತನಾಡಿರುವ ಅವರು, ಹವಾಮಾನ ವೈಪರೀತ್ಯದ ನಡುವೆ ಇಂತಹ ವಿಪತ್ತುಗಳನ್ನು ತಡೆಗಟ್ಟಲು ವಿನ್ಯಾಸಗೊಳಿಸಿದ ಸಮಿತಿಯ ಮಾರ್ಗಸೂಚಿಗಳನ್ನು ರಾಜ್ಯ ಸರ್ಕಾರ ಪಾಲಿಸುತ್ತಿಲ್ಲ. ಪರಿಸರ ಸೂಕ್ಷ್ಮ ವಲಯಗಳು I ಮತ್ತು ಪರಿಸರ ಸೂಕ್ಷ್ಮ ವಲಯಗಳು II ಪ್ರದೇಶಗಳಲ್ಲಿ ನಿರ್ಮಾಣ ಚಟುವಟಿಕೆಗಳ ಮೇಲೆ ಸ್ಪಷ್ಟವಾದ ನಿರ್ಬಂಧಗಳು ಮತ್ತು ನಿಬಂಧನೆಗಳು ಇದ್ದವು. ಮಂಗಳವಾರ ವಯನಾಡಿನ ಬೇರೆ ಬೇರೆ ಕಡೆಗಳಲ್ಲಿ ಸಂಭವಿಸಿದ ಭೂಕುಸಿತಕ್ಕೆ ಇದುವರೆಗೆ 150ಕ್ಕೂ ಹೆಚ್ಚು ಜೀವಗಳು ಬಲಿಯಾಗಿವೆ.

13 ವರ್ಷಗಳ ಹಳೆಯ ವರದಿ ವಯನಾಡಿನ ಪ್ರಾಕೃತಿಕ ದುರಂತದ ನಂತರ 13 ವರ್ಷಗಳ ಹಳೆಯ ವರದಿ ಮುನ್ನಲೆಗೆ ಬಂದು ಹತ್ತು ಹಲವು ಚರ್ಚೆಗಳನ್ನು ಹುಟ್ಟುಹಾಕಿದೆ. ಪರಿಸರ ಸೂಕ್ಷ್ಮ ಪ್ರದೇಶಗಳಲ್ಲಿ ವಿವೇಚನಾರಹಿತ ಕಲ್ಲುಗಣಿಗಾರಿಕೆ ಮತ್ತು ನಿರ್ಮಾಣ ಚಟುವಟಿಕೆಗಳನ್ನು ನಿಲ್ಲಿಸಬೇಕೆಂದು 13 ವರ್ಷಗಳ ಹಿಂದೆಯೇ ಮಾಧವ್ ಗಾಡ್ಗೀಳ್ ನೇತೃತ್ವದ ಪಶ್ಚಿಮ ಘಟ್ಟಗಳ ಪರಿಸರ ತಜ್ಞರ ಸಮಿತಿಯು ಆಗಸ್ಟ್ 2011 ರಲ್ಲಿ ಕೇಂದ್ರಕ್ಕೆ ವರದಿ ಸಲ್ಲಿಸಿತ್ತು.

ಇಂದು ಭೂಕುಸಿತ ಸಂಭವಿಸಿದ ವಯನಾಡಿನ ಮೆಪ್ಪಾಡಿ ಹೆಸರು ಕೂಡ ವರದಿಯಲ್ಲಿದೆ. ಅಲ್ಲಿ ಪರಿಸರ ವಿರೋಧಿ ಚಟುವಟಿಕೆಗಳ ವಿರುದ್ಧ ಸಮಿತಿ ಅಂದೇ ಎಚ್ಚರಿಕೆ ನೀಡಿತ್ತು.

ಅಭಿವೃದ್ಧಿರಹಿತ ವಲಯ ಈ ಅತ್ಯಂತ ಸೂಕ್ಷ್ಮ ಪ್ರದೇಶಗಳಲ್ಲಿ ಯಾವುದೇ ಅಭಿವೃದ್ಧಿ ನಡೆಯಬಾರದು, ಈ ಪ್ರದೇಶಗಳನ್ನು ಬ್ರಿಟಿಷರ ಅವಧಿಯಲ್ಲಿ ಚಹಾ ತೋಟಗಳಿಗೆ ಬಳಸಲಾಗುತ್ತಿತ್ತು ನಂತರ ರೆಸಾರ್ಟ್‌ಗಳು, ಕೃತಕ ಸರೋವರಗಳ ನಿರ್ಮಾಣ ಸೇರಿದಂತೆ ಹಲವು ಅಭಿವೃದ್ಧಿಯನ್ನು ಕಂಡಿದೆ. ಕ್ವಾರಿಗಳು ಕಾರ್ಯನಿರ್ವಹಿಸುತ್ತಿವೆ ದುರಂತ ಸಂಭವಿಸಿದ ಸ್ಥಳದಿಂದ ಕೆಲವು ಕಿಲೋಮೀಟರ್ ದೂರದಲ್ಲಿ ಕ್ವಾರಿಗಳು ಕಾರ್ಯನಿರ್ವಹಿಸುತ್ತಿರುವುದು ಪರಿಸ್ಥಿತಿಯನ್ನು ಮತ್ತಷ್ಟು ಉಲ್ಬಣಗೊಳಿಸಿದೆ ಎಂದು ಗಾಡ್ಗೀಳ್ ಹೇಳಿದ್ದಾರೆ. ಈ ಕ್ವಾರಿಗಳು ಈಗ ನಿಷ್ಕ್ರಿಯವಾಗಿದ್ದರೂ ಅವುಗಳ ಕಾರ್ಯಾಚರಣೆಯ ಅವಧಿಯಲ್ಲಿ ಉಂಟಾದ ಆಘಾತದ ಅಲೆಗಳು ವಿಪತ್ತು ಪೀಡಿತ ಪ್ರದೇಶಗಳಿಗೆ ವಿಸ್ತರಿಸಿರಬಹುದು, ಭಾರಿ ಮಳೆಯ ಸಂದರ್ಭದಲ್ಲಿ ಭೂಕುಸಿತಕ್ಕೆ ಪ್ರಚೋದನೆ ನೀಡಬಹುದು ಎಂದು ಗಾಡ್ಗೀಳ್ ಅಭಿಪ್ರಾಯಪಟ್ಟಿದ್ದಾರೆ.

# ಉತ್ತರ ಪ್ರದೇಶ ರಾಜಕೀಯದಲ್ಲಿ ಶುರುವಾಯ್ತು ಹೊಸ ಅಧ್ಯಾಯ

**ಲಕ್ನೋ:** ಉತ್ತರ ಪ್ರದೇಶ ವಿಧಾನಸಭೆಯ ಮಳೆಗಾಲದ ಅಧಿವೇಶನ ಜುಲೈ 29ರಂದು ಆರಂಭವಾಗಿದೆ. ಈ ವೇಳೆ ಅಚ್ಚರಿಯ ಘಟನೆಯೊಂದು ಎದುರಾಗಿದೆ. ಉತ್ತರ ಪ್ರದೇಶದ ಪ್ರಭಾವಿ ರಾಜಕಾರಣಿ, ಜನಸತ್ತಾ ದಳದ ಅಧ್ಯಕ್ಷ ಮತ್ತು ಕುಂದ ಕ್ಷೇತ್ರದ ಶಾಸಕ ರಾಜಾ ಭಯ್ಯಾ ಎಂದೇ ಖ್ಯಾತರಾದ ರಘುರಾಜ್ ಪ್ರತಾಪ್ ಸಿಂಗ್ ಅವರು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಪಾದ ಮುಟ್ಟಿ ನಮಸ್ಕರಿಸಿದ್ದಾರೆ.



ಸದ್ಯ ಈ ವಿಡಿಯೊ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಮಳೆಗಾಲದ ಅಧಿವೇಶನದ ಹಿನ್ನೆಲೆಯಲ್ಲಿ ಸೋಮವಾರ ಸಿಎಂ ಯೋಗಿ ಆದಿತ್ಯನಾಥ್ ಅವರು ನಿಗದಿತ ಸಮಯಕ್ಕಿಂತ ಐದು ನಿಮಿಷ ಮುಂಚಿತವಾಗಿ ವಿಧಾನಸಭೆಗೆ ಆಗಮಿಸಿದರು. ಅವರು ತಮ್ಮ ಆಸನದಲ್ಲಿ ಕುಳಿತುಕೊಳ್ಳುವ ಮೊದಲು ಸದನದಲ್ಲಿ ಹಾಜರಿದ್ದ ಶಾಸಕರನ್ನು ಭೇಟಿ ಮಾಡಿ ಮಾತನಾಡಿಸತೊಡಗಿದರು. ಈ ವೇಳೆ ಬಿಜೆಪಿ ಶಾಸಕರು, ನಾಯಕರು ಸಿಎಂ ಯೋಗಿ ಅವರ ಪಾದಗಳನ್ನು ಮುಟ್ಟಿ ಆಶೀರ್ವಾದ ಪಡೆದುಕೊಂಡರು.

ಈ ಸಂದರ್ಭದಲ್ಲಿ ಕುಂದ ಶಾಸಕ ರಾಜಾ ಭೈಯಾ ಕೂಡ ಸಿಎಂ ಯೋಗಿ ಅವರನ್ನು ಭೇಟಿಯಾಗಿ ಅವರ ಪಾದಗಳನ್ನು ಮುಟ್ಟಿ ಆಶೀರ್ವಾದ ಪಡೆದುಕೊಂಡಿದ್ದಾರೆ. ಯೋಗಿ ಆದಿತ್ಯನಾಥ್ ಕೂಡ ನಗು ನಗುತ್ತಾ ಆರ್ಶಿರ್ವಾದ ಮಾಡಿದ್ದಾರೆ. ರಾಜಾ ಭೈಯಾ ಅವರು ಯೋಗಿ ಅವರ ಪಾದಗಳನ್ನು ಮುಟ್ಟುವ ಕ್ಷಣವು ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಸದ್ಯ ಸೋಷಿಯಲ್ ಮೀಡಿಯಾದಲ್ಲಿ ಸಂಚಲನ ಮೂಡಿಸಿದೆ. ಜತೆಗೆ ರಾಜಕೀಯವಾಗಿಯೂ ಕೆವೊಂದು ಚರ್ಚೆ ಹುಟ್ಟು ಹಾಕಿದೆ.

# ವೆನೆಜ್ಯುವೆಲಾ ಚುನಾವಣಾ ಫಲಿತಾಂಶ ವಿರೋಧಿಸಿ ವ್ಯಾಪಕ ಪ್ರತಿಭಟನೆ



**ಕ್ಯಾರಕಾಸ್:** ವೆನೆಜ್ಯುವೆಲಾದ ಅಧ್ಯಕ್ಷ ನಿಕೋಲಸ್ ಮಡುರೋಗೆ ಮೂರನೇ ಅವಧಿಗೆ ಅಧಿಕಾರ ನೀಡಿದ ವಿವಾದಿತ ಚುನಾವಣಾ ಫಲಿತಾಂಶದಿಂದ ಪ್ರಚೋದಿಸಲ್ಪಟ್ಟ ಪ್ರತಿಭಟನೆಯನ್ನು ನಿಯಂತ್ರಿಸಲು ಭದ್ರತಾ ಪಡೆ ನಡೆಸಿದ ಕಾರ್ಯಾಚರಣೆಯಲ್ಲಿ ಓರ್ವ ವ್ಯಕ್ತಿ ಸಾವನ್ನಪ್ಪಿದ್ದು ಹಲವರು ಗಾಯಗೊಂಡಿದ್ದಾರೆ.

46 ಮಂದಿಯನ್ನು ಬಂಧಿಸಿರುವುದಾಗಿ ವರದಿಯಾಗಿದೆ. ವೆನೆಜ್ಯುವೆಲಾದಲ್ಲಿ ನಡೆದ ಅಧ್ಯಕ್ಷೀಯ ಚುನಾವಣೆಯಲ್ಲಿ ಹಾಲಿ ಅಧ್ಯಕ್ಷ ನಿಕೊಲಸ್ ಮಡುರೊ 51.2%ದಷ್ಟು ಮತಗಳನ್ನು ಪಡೆದು ಮರು ಆಯ್ಕೆಗೊಂಡಿರುವುದಾಗಿ ಚುನಾವಣಾ ಆಯೋಗ ರವಿವಾರ ಘೋಷಿಸಿದೆ. ವಿಪಕ್ಷಗಳ ಮೈತ್ರಿಕೂಟದ ಅಭ್ಯರ್ಥಿ ಎಡ್ಮಂಡೊ ಗೊನ್ಸಾಲ್ವಿಸ್ ಉರುಷಿಯಾ 44.2% ಮತಗಳನ್ನು ಪಡೆದಿದ್ದಾರೆ ಎಂದು ಆಯೋಗ ಹೇಳಿತ್ತು. ಚುನಾವಣಾ ಪೂರ್ವ ಮತ್ತು ಚುನಾವಣೋತ್ತರ ಸಮೀಕ್ಷೆಗಳು ಎಡ್ಮಂಡೊ ಗೊನ್ಸಾಲ್ವಿಸ್ ಗೆಲುವು ಬಹುತೇಕ ನಿಶ್ಚಿತ ಎಂದು ಭವಿಷ್ಯ ನುಡಿದಿದ್ದವು. ಎಡ್ಮಂಡೊ ಗೊನ್ಸಾಲ್ವಿಸ್ 70% ಮತ ಪಡೆದಿದ್ದಾರೆ. ಆದರೆ ಮಡುರೊಗೆ ನಿಷ್ಠರಾಗಿರುವ ಚುನಾವಣಾ ಆಯೋಗ ಫಲಿತಾಂಶವನ್ನು ತಿರುಚಿದೆ. ಗೆಲುವು ನಮ್ಮದೇ ಎಂದು ವಿಪಕ್ಷಗಳ ಮೈತ್ರಿಕೂಟ ಪ್ರತಿಪಾದಿಸಿದ್ದು ಆಯೋಗ ಘೋಷಿಸಿರುವ ಫಲಿತಾಂಶವನ್ನು ತಿರಸ್ಕರಿಸುವುದಾಗಿ ಹೇಳಿತ್ತು ಮತ್ತು ದೇಶದಾದ್ಯಂತ ಪ್ರತಿಭಟನೆಗೆ ಕರೆ ನೀಡಿತ್ತು. ಹಲವು ದೇಶಗಳೂ ಫಲಿತಾಂಶವನ್ನು ಪ್ರಶ್ನಿಸಿವೆ. ಲಭ್ಯವಿರುವ ಮತದಾನದ ದಾಖಲೆಗಳ ಪರಿಶೀಲನೆಯು ಮುಂದಿನ ಅಧ್ಯಕ್ಷ ಎಡ್ಮಂಡೊ ಗೊನ್ಸಾಲ್ವೆಸ್ ಎಂದು ಸ್ಪಷ್ಟವಾಗಿ ತೋರಿಸಿವೆ ಎಂದು ವಿರೋಧ ಪಕ್ಷದ ನಾಯಕಿ ಮರಿಯಾ ಕೊರಿನಾ ಮಚಾಡೊ ಪ್ರತಿಪಾದಿಸಿದ್ದಾರೆ.

# ಬೈರುತ್‌ನಲ್ಲಿ ನಡೆದ ದಾಳಿಯಲ್ಲಿ ಹಿಜ್ಬುಲ್ಲಾ ಕಮಾಂಡರ್ ಹತ್ಯೆ

**ಬೈರುತ್:** ಗೋಲನ್ ಹೈಟ್ಸ್‌ನಲ್ಲಿ 12 ಯುವಕರನ್ನು ಕೊಂದ ಗಡಿಯಾಚೆಗಿನ ದಾಳಿಗೆ ಪ್ರತೀಕಾರವಾಗಿ ಬೈರುತ್‌ನಲ್ಲಿ ನಡೆದ ಅಪರೂಪದ ದಾಳಿಯಲ್ಲಿ ತಾನು ಗುರಿಯಾಗಿಸಿಕೊಂಡಿದ್ದ ಹಿರಿಯ ಹಿಜ್ಬುಲ್ಲಾ ಕಮಾಂಡರ್ನನ್ನು ಕೊಲ್ಲುವುದಾಗಿ ಇಸ್ರೇಲ್ ಮಿಲಿಟರಿ ಮಂಗಳವಾರ ಹೇಳಿಕೊಂಡಿದೆ.



ಗೋಲನ್ ಹೈಟ್ಸ್ ದಾಳಿಯಲ್ಲಿ ಯಾವುದೇ ಪಾತ್ರವಿಲ್ಲ ಎಂದು ನಿರಾಕರಿಸಿರುವ ಹಿಜ್ಬುಲ್ಲಾ ಉಗ್ರಗಾಮಿ ಗುಂಪನ್ನು ಇಸ್ರೇಲ್ ದೂಷಿಸಿದೆ.

ಇಸ್ರೇಲಿ ರಕ್ಷಣಾ ಸಚಿವ ಯೋವ್ ಶೌರ್ಯ್ ಮಾತನಾಡಿ, ಈ ದಾಳಿಯಲ್ಲಿ ಫುವಾದ್ ಶುಕ್ರ್ ಸಾವನ್ನಪ್ಪಿದ್ದಾರೆ, ಅವರ ಕೈಯಲ್ಲಿ ಅನೇಕ ಇಸ್ರೇಲಿಗಳ ರಕ್ತವಿದೆ. ಈ ರಾತ್ರಿ, ನಮ್ಮ ಜನರ ರಕ್ತಕ್ಕೆ ಬೆಲೆ ಇದೆ ಮತ್ತು ಈ ನಿಟ್ಟಿನಲ್ಲಿ ನಮ್ಮ ಪಡೆಗಳಿಗೆ ತಲುಪಲು ಯಾವುದೇ ಸ್ಥಳವಿಲ್ಲ ಎಂದು ನಾವು ತೋರಿಸಿದ್ದೇವೆ. ವಿಶೇಷವೆಂದರೆ, ಫುವಾದ್ ಶುಕ್ರ್ ಅವರನ್ನು 2015 ರಲ್ಲಿ ಯುನೈಟೆಡ್ ಸ್ಟೇಟ್ಸ್ ನಿರ್ಬಂಧಿಸಿತು.

ದಾಳಿಯಲ್ಲಿ ಉಂಟಾದ ಗಾಯಗಳಿಂದ ಶುಕರ್ ಸಾವನ್ನಪ್ಪಿದ್ದಾರೆ ಎಂದು ಈ ಪ್ರದೇಶದ ಮತ್ತೊಂದು ದೇಶದ ಹಿರಿಯ ಭದ್ರತಾ ಮೂಲಗಳು ಸುದ್ದಿ ಸಂಸ್ಥೆ ರಾಯಿಟರ್ಸ್ ಗೆ ತಿಳಿಸಿವೆ. ಬೈರುತ್‌ನ ದಕ್ಷಿಣ ಉಪನಗರಗಳ ಮೇಲೆ ಇಸ್ರೇಲ್ ನಡೆಸಿದ ದಾಳಿಯಲ್ಲಿ ಇಬ್ಬರು ಮಕ್ಕಳು ಸೇರಿದಂತೆ ಮೂವರು ನಾಗರಿಕರು ಸಾವನ್ನಪ್ಪಿದ್ದಾರೆ ಎಂದು ವೈದ್ಯಕೀಯ ಮತ್ತು ಭದ್ರತಾ ಮೂಲಗಳು ತಿಳಿಸಿವೆ. ಲೆಬನಾನ್ ಮಾಧ್ಯಮಗಳ ಪ್ರಕಾರ, 74 ಜನರು ಗಾಯಗೊಂಡಿದ್ದಾರೆ.

# ಗರ್ಭಿಣಿಗೆ ಹೊಡೆದಿದ್ದ ಗುಂಡು ಮಗು ದೇಹದಲ್ಲಿ ಪತ್ತೆ!

**ಮಾಸ್ಕೋ:** ವ್ಯಕ್ತಿಯೊಬ್ಬ ತನ್ನ ಗರ್ಭಿಣಿ ಪತ್ನಿಗೆ ತಪ್ಪಿ ಗುಂಡು ಹಾರಿಸಿದ ಪರಿಣಾಮ ಮಗುವಿನ ಹೊಟ್ಟೆಯಲ್ಲಿ ರಂಧ್ರವಾಗಿದ್ದು, ಅದರೊಳಗೆ ರೈಫಲ್ ಪೆಲೆಟ್ ಹುದುಗಿಕೊಂಡ ಸ್ಥಿತಿಯಲ್ಲೇ ಜನಿಸಿರುವ ವಿಚಿತ್ರ ಘಟನೆ ರಷ್ಯಾದಲ್ಲಿ ನಡೆದಿದೆ.




ವರದಿಗಳ ಪ್ರಕಾರ ವ್ಯಕ್ತಿ ಗುಂಡು ಹಾರಿಸಿದ ಸಂದರ್ಭ ಪೆಲೆಟ್ ತನ್ನ ಪತ್ನಿಯ ಹೊಟ್ಟೆಗೆ ನುಗ್ಗಿದೆ.

ಮಗುವಿನ ನಿರೀಕ್ಷೆಯ ಅಂತಿಮ ತಿಂಗಳಿನಲ್ಲಿದ್ದ ಮಹಿಳೆಯನ್ನು ತಕ್ಷಣವೇ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಅದೃಷ್ಟವಶಾತ್ ಒಂದು ಸೆಂಟಿಮೀಟರ್ ಉದ್ದ ಮತ್ತು ಅರ್ಧ ಸೆಂಟಿಮೀಟರ್ ಅಗಲವಿದ್ದ ಪೆಲೆಟ್ ಮಗುವಿನ ಯಾವುದೇ ಪ್ರಮುಖ ಅಂಗಗಳಿಗೆ ಹಾನಿ ಮಾಡಿಲ್ಲ ಎಂಬುದು ಪರೀಕ್ಷೆಯಲ್ಲಿ ತಿಳಿದುಬಂದಿದೆ.

ಮಗು ಜನಿಸಿದ ಬಳಿಕವೇ ಪೆಲೆಟ್ ಅನ್ನು ತೆಗೆದುಹಾಕುವುದು ಉತ್ತಮ ಎಂದು ವೈದ್ಯರು ನಿರ್ಧರಿಸಿದರು. ಮಗು ಹುಟ್ಟಿದ ಬಳಿಕ ಅದರ ಹೊಟ್ಟೆಯಲ್ಲಿ ಹುದುಗಿ ಹೋಗಿದ್ದ ರೈಫಲ್ ಪೆಲೆಟ್ ಅನ್ನು ವೈದ್ಯರು ತೆಗೆದು ಹಾಕಿದ್ದಾರೆ. ಶಸ್ತ್ರಚಿಕಿತ್ಸೆಯ ಬಳಿಕ ತಾಯಿ ಮತ್ತು ಮಗು ಇಬ್ಬರೂ ಆರೋಗ್ಯವಾಗಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

# ಮೈದಾನಲ್ಲಿ ಆಟವಾಡುತ್ತಿದ್ದ ಮಕ್ಕಳ ಮೇಲೆ ಬಿದ್ದ ರಾಕೆಟ್, 12 ಮಂದಿ ಸಾವು

**ಇಸ್ರೇಲ್:** ಇಸ್ರೇಲ್ ಮೇಲೆ ಹಿಜ್ಬುಲ್ಲಾ ನಡೆಸಿದ ರಾಕೆಟ್ ದಾಳಿಯಲ್ಲಿ ಮಕ್ಕಳು ಸೇರಿ 12 ಮಂದಿ ಮೃತಪಟ್ಟಿರುವ ಕುರಿತು ಮಾಹಿತಿ ಲಭ್ಯವಾಗಿದೆ. ಇಸ್ರೇಲ್ ಪ್ರಕಾರ, ಅಕ್ಟೋಬರ್ 7 ರಂದು ಹೋರಾಟ ಪ್ರಾರಂಭವಾದ ನಂತರ ಹಿಜ್ಬುಲ್ಲಾ ನಡೆಸಿದ ಅತಿದೊಡ್ಡ ದಾಳಿ ಇದಾಗಿದೆ. ಲೆಬನಾನ್‌ನಿಂದ ಹಾರಿಸಲಾದ ರಾಕೆಟ್ ಗೋಲನ್ ಹೈಟ್ಸ್‌ನ ಉತ್ತರದ ಡ್ರೂಜ್ ಪಟ್ಟಣವಾದ ಮಜ್ದಾಲ್ ಶಾಮ್ಸ್‌ನಲ್ಲಿರುವ ಫುಟ್‌ಬಾಲ್ ಮೈದಾನಕ್ಕೆ ಅಪ್ಪಳಿಸಿತು. ಲೆಬನಾನ್‌ನಿಂದ ಇಸ್ರೇಲ್ ಭೂಪ್ರದೇಶಕ್ಕೆ ಬಿದ್ದ 30 ಸ್ಫೋಟಕಗಳನ್ನು ಗುರುತಿಸಿರುವುದಾಗಿ ಇಸ್ರೇಲ್ ಹೇಳಿದೆ. ಕೆಲವು ಇಸ್ರೇಲಿ ನಾಯಕರು ಪ್ರತೀಕಾರಕ್ಕೆ ಕರೆ ನೀಡಿದ್ದಾರೆ. ಆದರೆ, ರಾಕೆಟ್ ಹಾರಿಸಿರುವುದನ್ನು ಹಿಜ್ಬುಲ್ಲಾ ನಿರಾಕರಿಸಿದೆ. ಕಳೆದ 10 ತಿಂಗಳಿಂದ ಇಸ್ರೇಲ್ ಸೇನೆ ಮತ್ತು ಹಿಜ್ಬುಲ್ಲಾ ಪರಸ್ಪರ ಗುಂಡಿನ ದಾಳಿ ನಡೆಸುತ್ತಿದೆ. ಈ ದಾಳಿಗೂ ಮುನ್ನವೇ ಇಬ್ಬರ ನಡುವಿನ ಘರ್ಷಣೆ ಕಾದಾಟದ ಹಂತ ತಲುಪಿದೆ ಎನ್ನಲಾಗುತ್ತಿದೆ. ದಾಳಿಯಲ್ಲಿ 12 ಮಂದಿ ಸಾವನ್ನಪ್ಪಿದ್ದು, 29 ಮಂದಿ ಗಾಯಗೊಂಡಿದ್ದಾರೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅಮೆರಿಕದಿಂದ ವಾಪಸಾದ ಸಂದರ್ಭದಲ್ಲಿ ಈ ದಾಳಿ ನಡೆದಿದೆ. ಅಲ್ಲಲ್ಲಿ ಘರ್ಷಣೆಗೆ ಬದಲಾಗಿ, ಹಿಜ್ಬುಲ್ಲಾ ಜೊತೆ ಪೂರ್ಣ ಪ್ರಮಾಣದ ಯುದ್ಧದ ಭೀತಿ ಈಗ ಹೆಚ್ಚಾಗಿದೆ. 1967 ರಲ್ಲಿ ಆರು ದಿನಗಳ ಯುದ್ಧದ ಸಮಯದಲ್ಲಿ ಇಸ್ರೇಲ್ ಸಿರಿಯಾದಿಂದ ವಶಪಡಿಸಿಕೊಂಡ ಪ್ರದೇಶ ಇದು. ಇದು ಅಂತರಾಷ್ಟ್ರೀಯ ಕಾನೂನುಗಳು ಮತ್ತು ಗಿಟಿ ಭದ್ರತಾ ಮಂಡಳಿಯ ನಿರ್ಣಯಗಳ ಅಡಿಯಲ್ಲಿ ಆಕ್ರಮಿತ ಪ್ರದೇಶವೆಂದು ಪರಿಗಣಿಸಲಾಗಿದೆ.

ಈ ಪ್ರದೇಶವು ಸರಿಸುಮಾರು 50,000 ಇಸ್ರೇಲಿ ಯಹೂದಿಗಳು ಮತ್ತು ಡ್ರೂಜ್ ಗಳಿಗೆ ನೆಲೆಯಾಗಿದೆ. ಅಕ್ಟೋಬರ್ 7ರ ನಂತರ ನಡೆದ ಅತಿ ದೊಡ್ಡ ದಾಳಿ ಇದಾಗಿದ್ದು, ಕ್ರಮ ಕೈಗೊಳ್ಳುತ್ತೇವೆ. 50 ಕೆಜಿ ಸಿಡಿತಲೆ ಹೊಂದಿದ್ದ ಇರಾನಿನ ಫಲಾಕ್ 1 ರಾಕೆಟ್ ಮೂಲಕ ದಾಳಿ ನಡೆಸಲಾಗಿದೆ ಎಂದು ಅವರು ಹೇಳಿದ್ದಾರೆ. ಈ ಮಾದರಿಯನ್ನು ಹಿಜ್ಬುಲ್ಲಾ ಮಾತ್ರ ಬಳಸುತ್ತಾರೆ ಎಂದು ಅವರು ಹೇಳಿದರು.

# ನೆಲಮಹಡಿಗೆ ನೀರು ನುಗ್ಗಿ ಒಂದೇ ಕುಟುಂಬದ 11 ಮಂದಿ ದುರ್ಮರಣ!

**ಇಸ್ಲಾಮಾಬಾದ್:** ವಾಯುವ್ಯ ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ಮಂಗಳವಾರ ಸುರಿದ ಭಾರೀ ಮಳೆಗೆ ಪ್ರವಾಹ ಸ್ಥಿತಿ ಉಂಟಾಗಿ ಮನೆಯೊಂದರ ನೆಲಮಹಡಿಗೆ ನೀರು ಪ್ರವೇಶಿಸಿದ್ದು, ಒಂದೇ ಕುಟುಂಬದ 11 ಮಂದಿ ಅಲ್ಲೇ ಸಾವನ್ನಪ್ಪಿದ್ದಾರೆ.

ದುರ್ಘಟನೆ ಪೇಶಾವರದಿಂದ ದಕ್ಷಿಣಕ್ಕೆ 35 ಕಿ.ಮೀ ದೂರದಲ್ಲಿರುವ ಕೊಹತ್ ಜಿಲ್ಲೆಯ ದರ್ರಾ ಆದಮ್ ಖೇಲ್ ತೆಹಸಿಲ್‌ನಲ್ಲಿ ನಡೆದಿದೆ.

6 ಮಕ್ಕಳು, ಮೂವರು ಮಹಿಳೆಯರು ಸೇರಿದಂತೆ ಒಂದೇ ಕುಟುಂಬದ 11 ಮಂದಿ ಸಾವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮಳೆಯಿಂದ ಪ್ರವಾಹ ಉಂಟಾದ ವೇಳೆ ಕುಟುಂಬ ಮನೆಯ ನೆಲಮಹಡಿಯಲ್ಲಿ ಸಿಲುಕಿಕೊಂಡಿದ್ದಾರೆ. ಬಳಿಕ ರಕ್ಷಣಾ ತಂಡಗಳು ಸ್ಥಳಕ್ಕೆ ಧಾವಿಸಿ ಮೃತದೇಹಗಳನ್ನು ಹೊರತೆಗೆದಿವೆ. ಮೃತದೇಹಗಳನ್ನು ಕೊಹತ್‌ನಲ್ಲಿರುವ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ರಕ್ಷಣಾ ಅಧಿಕಾರಿಗಳು ತಿಳಿಸಿದ್ದಾರೆ.

ಖೈಬರ್ ಪಖ್ತುಂಖ್ವಾ ಮುಖ್ಯಮಂತ್ರಿ ಅಲಿ ಅಮೀನ್ ಗಂದಪುರ್ ಸಾವಿನ ಬಗ್ಗೆ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಪಾಕಿಸ್ತಾನದ ಕೆಲ ಪ್ರದೇಶಗಳಲ್ಲಿ ಮಾನ್ಸೂನ್ ಅವಧಿಯಲ್ಲಿ ಭಾರೀ ಮಳೆಯಿಂದ ಹಠಾತ್ ಪ್ರವಾಹ ಸಂಭವಿಸುವುದು ಸಾಮಾನ್ಯವಾಗಿದೆ.



# ಚೀನಾದಲ್ಲಿ ಭೀಕರ ಮಳೆ

**ಚೀನಾ:** ಕಳೆದ ಕೆಲವು ದಿನಗಳಿಂದ ಆಗ್ನೇಯ ಚೀನಾದಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಗೆ ಏಳು ಜನರು ಮೃತಪಟ್ಟಿದ್ದು, ಕನಿಷ್ಠ ಮೂವರು ನಾಪತ್ತೆಯಾಗಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

ಉಷ್ಣವಲಯದ ಚಂಡಮಾರುತದಿಂದ ಇದುವರೆಗೂ ಮೃತಪಟ್ಟವರ ಸಂಖ್ಯೆ 22ಕ್ಕೇರಿದ್ದು, ಮೃತಪಟ್ಟವರೆಲ್ಲರೂ ಹುನಾನ್ ಪ್ರಾಂತ್ಯದವರಾಗಿದ್ದಾರೆ.

ಜಿಕ್ಸಿಂಗ್ ನಗರದ ನಾಲ್ಕು ಹಳ್ಳಿಗಳಲ್ಲಿ ನಾಲ್ವರು ಮೃತಪಟ್ಟಿದ್ದಾರೆ. ಕಾಣೆಯಾಗಿದ್ದ ಮೂವರ ಮೃತದೇಹಗಳು ನಗರ ಸಮೀಪದ ಹಳ್ಳಿಯೊಂದರಲ್ಲಿ ಪತ್ತೆಯಾಗಿದ್ದು, ಮಣ್ಣು ಕುಸಿತದಿಂದ ಇವರು ಸಾವಿಗೀಡಾಗಿದ್ದಾರೆ ಎನ್ನಲಾಗುತ್ತಿದೆ.

ಮಳೆಯಿಂದ ನೂರಾರು ಮನೆಗಳಿಗೆ ಹಾನಿಯಾಗಿದ್ದು, 11 ಸಾವಿರಕ್ಕೂ ಅಧಿಕ ಜನರನ್ನು ಸ್ಥಳಾಂತರಿಸಲಾಗಿದೆ ಎಂದು ಸುದ್ದಿಸಂಸ್ಥೆಯೊಂದು ವರದಿಯಲ್ಲಿ ಉಲ್ಲೇಖಿಸಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಕಾರ್ತಿ ನಟನೆಯ 'ಸರ್ದಾರ್ 2' ಸಿನಿಮಾ ರಿಜೆಕ್ಟ್ ಮಾಡಿದ ಶ್ರೀಲೀಲಾ



ಕನ್ನಡದ ನಟಿ ಶ್ರೀಲೀಲಾ ಸದ್ಯ ಟಾಲಿವುಡ್ ಅಂಗಳದ ಸೆನ್ಸೇಷನ್ ಹೀರೋಯಿನ್ ಆಗಿದ್ದಾರೆ. ಹೀಗಿರುವಾಗ ತಮಿಳಿನ ಸಿನಿಮಾವೊಂದರ ವಿಚಾರವಾಗಿ ನಟಿ ಸದ್ದು ಮಾಡುತ್ತಿದ್ದಾರೆ. ಕಾರ್ತಿ ನಟನೆಯ ಚಿತ್ರವೊಂದನ್ನು ನಟಿ ತಿರಸ್ಕರಿಸಿದ್ದಾರೆ.

'ಕಿಸ್' ನಟಿ ಶ್ರೀಲೀಲಾ ಈಗ ತೆಲುಗಿನಲ್ಲಿ ಸೆಟಲ್ ಆಗಿದ್ದಾರೆ. ಸಾಲು ಸಾಲು ಸಿನಿಮಾಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಇದೀಗ ತಮಿಳು ನಟ ಕಾರ್ತಿ ನಟನೆಯ 'ಸರ್ದಾರ್ 2' ಚಿತ್ರವನ್ನು ಶ್ರೀಲೀಲಾ ರಿಜೆಕ್ಟ್ ಮಾಡಿದ್ದಾರೆ.

'ಸರ್ದಾರ್ 2' ಸಿನಿಮಾದಲ್ಲಿ ಇಬ್ಬರೂ ನಾಯಕಿಯರಿದ್ದರು. ಸಿಂಗಲ್ ಹೀರೋಯಿನ್ ಆಗಿ ತೆಲುಗಿನಲ್ಲಿ ಸೈ ಎನಿಸಿಕೊಂಡಿದ್ದಾರೆ. ಆದರೆ ತಮಿಳಿನಲ್ಲಿ ಮತ್ತೊರ್ವ ನಟಿಯ ಜೊತೆ ತೆರೆಹಂಚಿಕೊಳ್ಳಲು ಶ್ರೀಲೀಲಾ ಒಪ್ಪದೇ ಚಿತ್ರವನ್ನು ಕೈಬಿಟ್ಟಿದ್ದಾರೆ.

ಸಕ್ಸಸ್‌ಫುಲ್ ನಟಿ ಎನಿಸಿಕೊಂಡಿರುವ ಶ್ರೀಲೀಲಾಗೆ ಪೂರ್ಣಪ್ರಮಾಣದ ನಾಯಕಿಯಾಗಿ ಕಾಣಿಸಿಕೊಳ್ಳಬೇಕೆಂದಿದ್ದಾರೆ. ಕಥೆ ಮತ್ತು ಪಾತ್ರಕ್ಕೂ ಕೂಡ ಅಷ್ಟೇ ಪ್ರಾಮುಖ್ಯತೆ ಕೊಡುತ್ತಾರೆ. ಅಂದಹಾಗೆ, ರಾಬಿನ್ ಹುಡ್, ಪವನ್ ಕಲ್ಯಾಣ್ ಜೊತೆಗಿನ ಸಿನಿಮಾ ಮತ್ತು ಬಾಲಿವುಡ್‌ನಲ್ಲಿ 2 ಚಿತ್ರಗಳನ್ನು ನಟಿ ಒಪ್ಪಿದ್ದಾರೆ.



# ಲಿಖಿತ್ ಶೆಟ್ಟಿ ಹುಟ್ಟುಹಬ್ಬದಂದು 'ಫುಲ್ ಮೀಲ್ಸ್' ಚಿತ್ರದ ಮೋಷನ್ ಪೋಸ್ಟರ್ ರಿಲೀಸ್

ಸಂಕಷ್ಟಕರ ಗಣಪತಿ, ಫ್ಯಾಮಿಲಿ ಪ್ಯಾಕ್, ಅಬ್ಬಬ್ಬ ಚಿತ್ರಗಳ ಖ್ಯಾತಿಯ ನಟ ಲಿಖಿತ್ ಶೆಟ್ಟಿ ಪ್ರಸ್ತುತ 'ಫುಲ್ ಮೀಲ್ಸ್' ಚಿತ್ರವನ್ನು ನಿರ್ಮಿಸುವುದರ ಜೊತೆಗೆ ನಾಯಕ ನಟನಾಗೂ ನಟಿಸುತ್ತಿದ್ದಾರೆ. ಈಗ 'ಫುಲ್ ಮೀಲ್ಸ್' ಚಿತ್ರದ ನಾಯಕ ಲಿಖಿತ್ ಶೆಟ್ಟಿಗೆ ಹುಟ್ಟುಹಬ್ಬದ ಸಂಭ್ರಮ. ಈ ಸಂದರ್ಭದಲ್ಲಿ ಮೋಷನ್ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ 'ಫುಲ್ ಮೀಲ್ಸ್' ಚಿತ್ರತಂಡ ಲಿಖಿತ್ ಶೆಟ್ಟಿ ಬರ್ತ್‌ಡೇಗೆ ಶುಭಾಶಯ ಕೋರಿದೆ.

ಲಿಖಿತ್ ಶೆಟ್ಟಿ ಇಬ್ಬರು ನಾಯಕಿಯರ ಸಾಂಗತ್ಯದಲ್ಲಿರುವ ರೊಮ್ಯಾಂಟಿಕ್ ಥೀಮ್ ಹೊಂದಿರುವ ಈ ಸುಂದರವಾದ ಮೋಷನ್ ಪೋಸ್ಟರ್ ನೋಡುಗರ ಗಮನ ಸೆಳೆದಿದ್ದು, ಸಿನಿಮಾದ ಬಗ್ಗೆ ಕುತೂಹಲ ಮೂಡಿಸಿದೆ. ಈ ಚಿತ್ರದ ಪೋಸ್ಟ್ ಪ್ರೊಡಕ್ಷನ್ ಕೆಲಸ ಬಹುತೇಕ ಸಂಪೂರ್ಣವಾಗಿದ್ದು, ಸದ್ಯ ರೀ ರೆಕಾರ್ಡಿಂಗ್ ನಡೆಯುತ್ತಿದೆ. ವರ್ಷಾಂತ್ಯದೊಳಗೆ ಚಿತ್ರವನ್ನು ತೆರೆಗೆ ತರುವ ಯೋಚನೆಯಲ್ಲಿರುವುದಾಗಿ ಲಿಖಿತ್ ಶೆಟ್ಟಿ ತಿಳಿಸಿದ್ದಾರೆ.

ವೆಡ್ಡಿಂಗ್ ಫೋಟೋಗ್ರಾಫರ್ ಸುತ್ತ ಸುತ್ತುವ ಕಥಾ ಹಂದರವನ್ನು ಹೊಂದಿರುವ ಸಿನಿಮಾ, ಮನೋರಂಜನೆಯ ಜೊತೆಗೆ ಸಾಕಷ್ಟು ಹೊಸ ವಿಷಯಗಳನ್ನು ಒಳಗೊಂಡಿದ್ದು, ಪ್ರೇಕ್ಷಕರು ಸಿನೆಮಾವನ್ನು ಇಷ್ಟಪಡುತ್ತಾರೆಂಬ ವಿಶ್ವಾಸ ಲಿಖಿತ್ ಶೆಟ್ಟಿ ಅವರಿಗಿದೆ.



ಚಿತ್ರದುರ್ಗದ ಪ್ರತಿಭೆ ಎನ್. ವಿನಾಯಕ ಚಿತ್ರದ ಮೂಲಕ ಮೊದಲ ಬಾರಿಗೆ ನಿರ್ದೇಶನದ ಜವಾಬ್ದಾರಿ ಹೊತ್ತಿದ್ದಾರೆ. ಸಿನೆಮಾಗೆ ಹರೀಶ್ ಗೌಡ ಸಂಭಾಷಣೆ ಬರೆದಿದ್ದು, ಮನೋಹರ್ ಜೋಷಿ ಛಾಯಾಗ್ರಹಣ, ಗುರು ಕಿರಣ್ ಸಂಗೀತ, ದೀಪು ಎಸ್ ಕುಮಾರ್ ಸಂಕಲನ, ವಿಶ್ವಾಸ್ ಕಶ್ಯಪ್ ಕಲಾ ನಿರ್ದೇಶನ ಚಿತ್ರಕ್ಕಿದೆ.

ಲಿಖಿತ್ ಶೆಟ್ಟಿಗೆ ನಾಯಕಿಯರಾಗಿ ಖುಷಿ ರವಿ ಮತ್ತು ತೇಜಸ್ವಿನಿ ಶರ್ಮ ಅಭಿನಯಿಸಿದ್ದು, ಉಳಿದಂತೆ ತಾರಾಗಣದಲ್ಲಿ ರಂಗಾಯಣ ರಘು, ಸೂರಜ್ ಲೋಕ್ರೆ, ವಿಜಯ್ ಚಂಡೂರ್, ರವಿ ಶಂಕರ್ ಗೌಡ, ರಾಜೇಶ್ ನಟರಂಗ, ಸುಜಯ್ ಶಾಸ್ತ್ರಿ, ಚಂದ್ರಕಲಾ ಮೋಹನ್, ಹೊನ್ನವಳ್ಳಿ ಕೃಷ್ಣ, ರಮೇಶ್ ಪಂಡಿತ್, ಚೇತನ್ ದುರ್ಗಾ, ನಾಗೇಂದ್ರ ಅರಸ್, ಮೂಗು ಸುರೇಶ್ ಸೇರಿದಂತೆ ಬಹು ದೊಡ್ಡ ತಾರಾ ಬಳಗವೇ ಇದೆ.

# ಸಂಜಯ್ ದತ್ ಜೊತೆಗಿನ ಫೋಟೋ ಹಂಚಿಕೊಂಡ ಉಪ್ಪಿಯ ಟ್ರೋಲ್ ಹುಡುಗಿ ರೀಷ್ಮಾ

ಕೊಡಗಿನ ಬೆಡಗಿ ರೀಷ್ಮಾ ನಾಣಯ್ಯ ಇದೀಗ 'ಕೆಡಿ' ಚಿತ್ರದ ಸೆಟ್‌ನಲ್ಲಿ ಬಾಲಿವುಡ್ ನಟ ಸಂಜಯ್ ದತ್ ಜೊತೆ ತೆಗೆದ ಫೋಟೋವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ನೀವು ನನಗೆ ಸ್ಫೂರ್ತಿ ಎಂದು ನಟಿ ಬಣ್ಣಿಸಿದ್ದಾರೆ.

ಧ್ರುವ ಸರ್ಜಾ ನಟನೆಯ 'ಕೆಡಿ' ಸಿನಿಮಾದಲ್ಲಿ ರೀಷ್ಮಾ ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಇದೇ ಸಿನಿಮಾದಲ್ಲಿ 'ಕೆಜಿಎಫ್ 2' ಖ್ಯಾತಿಯ ಸಂಜಯ್ ದತ್ ಕೂಡ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. 'ಕೆಡಿ' ಸೆಟ್‌ನಲ್ಲಿ ತೆಗೆದ ವಿಶೇಷ ಫೋಟೋವೊಂದನ್ನು ಶೇರ್ ಮಾಡಿ, ಹುಟ್ಟುಹಬ್ಬದ ಶುಭಾಶಯಗಳು 'ಧಾಕ್ ದೇವ' ಎಂದು ನಟಿ ವಿಶ್ ಮಾಡಿದ್ದಾರೆ. ನಿಮ್ಮ ನಮ್ರತೆ ಮತ್ತು ದಯೆ ನಿಜವಾಗಿಯೂ ಸ್ಫೂರ್ತಿದಾಯಕವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಅಂದಹಾಗೆ, ಜು.29ರಂದು ಸಂಜಯ್ ದತ್ ಹುಟ್ಟುಹಬ್ಬ ಆಚರಿಸಿಕೊಂಡಿದ್ದಾರೆ. ಹಾಗೆಯೇ ಅವರ 'ಕೆಡಿ' ಸಿನಿಮಾದ ಖಡಕ್ ಪೋಸ್ಟ್ ಕೂಡ ರಿವೀಲ್ ಆಗಿದೆ. 'ಧಾಕ್ ದೇವ'ನಾಗಿ ಸಂಜಯ್ ದತ್ ಮಾಸ್ ಎಂಟ್ರಿ ಕೊಟ್ಟಿದ್ದಾರೆ. ಈ ಸಿನಿಮಾವನ್ನು ಜೋಗಿ ಪ್ರೇಮ್ ನಿರ್ದೇಶನ ಮಾಡಿದ್ದು, ಈ ವರ್ಷದ ಅಂತ್ಯದಲ್ಲಿ 'ಕೆಡಿ' ಚಿತ್ರ ರಿಲೀಸ್ ಆಗಲಿದೆ.



# ಸೂಪರ್ ಓವರ್ ಥ್ರಿಲ್ಲಿಂಗ್

ಸೂಪರ್ ಓವರ್‌ನ ಮೊದಲ ಎಸೆತದಲ್ಲೇ ನಾಯಕ ಸೂರ್ಯಕುಮಾರ್ ಯಾದವ್ ಬೌಂಡರಿಯೊಂದಿಗೆ ಲಂಕಾ ವಿರುದ್ಧ ಭಾರತ ರೋಚಕ ಗೆಲುವು ಸಾಧಿಸಿತು. ಅಲ್ಲದೇ ಲಂಕಾ ತವರಿನಲ್ಲೇ ಕ್ಲೀನ್ ಸ್ವೀಪ್‌ನೊಂದಿಗೆ ಸರಣಿ ಗೆದ್ದುಕೊಂಡಿತು.

ಗೆಲುವಿಗೆ 138 ರನ್ ಗುರಿ ಪಡೆದಿದ್ದ ಲಂಕಾ 20 ಓವರ್‌ಗಳಲ್ಲಿ 8 ವಿಕೆಟ್‌ಕೆ 137 ರನ್ ಗಳಿಸಿ ಮ್ಯಾಚ್ ಟೈನಲ್ಲಿ ನಿಂತಿತು. ಇದರಿಂದ ಮ್ಯಾಚ್ ಸೂಪರ್ ಓವರ್‌ನತ್ತ ತಿರುಗಿತು. ಸೂಪರ್ ಓವರ್‌ನಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಲಂಕಾ ತಂಡ 2 ರನ್‌ಗಳಿಗೆ 2 ವಿಕೆಟ್ ಕಳೆದುಕೊಂಡು ಪೆವಿಲಿಯನ್‌ಗೆ ಮರಳಿತು. ಆದ್ರೆ ಟೀಂ ಇಂಡಿಯಾ ಪರ ಕಣಕ್ಕಿಳಿದ ನಾಯಕ ಸೂರ್ಯಕುಮಾರ್, ಮಹೀಶ್ ತೀಕ್ಷಣ ಬೌಲಿಂಗ್‌ನಲ್ಲಿ ಮೊದಲ ಎಸೆತದಲ್ಲೇ ಬೌಂಡರಿ ಚಚ್ಚಿ ನೀರು ಕುಡಿದಂತೆ ಮ್ಯಾಚ್ ಗೆಲ್ಲಿಸಿದರು.

**ಕೊನೇ 2 ಓವರ್ ಥ್ರಿಲ್ಲಿಂಗ್:** 138 ರನ್ ಗುರಿ ಬೆನ್ನಟ್ಟಿದ್ದ ಲಂಕಾ ತಂಡಕ್ಕೆ ಕೊನೇ 2 ಓವರ್‌ಗಳಲ್ಲಿ ಗೆಲುವಿಗೆ 9 ರನ್ ಬೇಕಿತ್ತು. ಆದ್ರೆ 19ನೇ ಓವರ್‌ನಲ್ಲಿ ಬೌಲಿಂಗ್ ಮಾಡಿದ ರಿಂಕು ಸಿಂಗ್ 2 ಪ್ರಮುಖ ವಿಕೆಟ್ ಕಿತ್ತು, ಕೇವಲ 3 ರನ್ ಬಿಟ್ಟುಕೊಟ್ಟರು. ಕೊನೇ ಓವರ್‌ನಲ್ಲಿ 6 ರನ್ ಬೇಕಿದ್ದಾಗ ನಾಯಕ ಸೂರ್ಯಕುಮಾರ್ ಯಾದವ್ ಅವರೇ ಖುದ್ದು ಬೌಲಿಂಗ್‌ಗೆ ಇಳಿದರು. ಮೊದಲ ಎಸೆತದಲ್ಲಿ ರನ್ ಬಿಟ್ಟುಕೊಡದ ಸೂರ್ಯ 2-3ನೇ ಎಸೆತಗಳಲ್ಲಿ ಬ್ಯಾಕ್ ಟು ಬ್ಯಾಕ್ ವಿಕೆಟ್ ಕಿತ್ತರು. 4ನೇ ಎಸೆತದಲ್ಲಿ 1 ರನ್ ಬಿಟ್ಟುಕೊಟ್ಟರು. 5ನೇ ಎಸೆತದಲ್ಲಿ ರನೌಟ್‌ಗೆ ಸುಲಭ ಸಾಧ್ಯತೆ ಇದ್ದರೂ ಕೊಂಚ ಗಲಿಬಿಲಿಯಿಂದ ಸೂರ್ಯ 2 ರನ್ ಕೈಚೆಲ್ಲಿದರು. ಕೊನೇ ಎಸೆತದಲ್ಲಿ ಲಂಕಾ ಬ್ಯಾಟರ್‌ಗಳು 2 ರನ್ ಕದಿಯುವಲ್ಲಿ ಯಶಸ್ವಿಯಾದ ಪರಿಣಾಮ ಮ್ಯಾಚ್ ಸೂಪರ್ ಓವರ್‌ನತ್ತ ತಿರುಗಿತು.




ಚೇಸಿಂಗ್ ಮಾಡಿದ ಲಂಕಾ ಪರ ಆರಂಭಿಕರಾದ ಪಥುಮ್ ನಿಸ್ಸಾಂಕ 26ರನ್, ಕುಸಲ್ ಮೆಂಡಿಸ್ 43 ರನ್, ಕುಸಲ್ ಪೆರೆರಾ 46 ರನ್ ಬಾರಿಸಿದರು. ಲಂಕಾ ಬ್ಯಾಟರ್‌ಗಳನ್ನು ಕಟ್ಟಿಹಾಕುವಲ್ಲಿ ಯಶಸ್ವಿಯಾದ ಟೀಂ ಇಂಡಿಯಾ ಪರ ವಾಷಿಂಗ್ಟನ್ ಸುಂದರ್, ರವಿ ಬಿಷ್ಣೋಯಿ, ರಿಂಕು ಸಿಂಗ್, ಸೂರ್ಯಕುಮಾರ್ ಯಾದವ್ ತಲಾ 2 ವಿಕೆಟ್ ಪಡೆದು ಮಿಂಚಿದರು.

ಇದಕ್ಕೂ ಮುನ್ನ ಬ್ಯಾಟಿಂಗ್ ಮಾಡಿದ್ದ ಟೀಂ ಇಂಡಿಯಾ ಪರ ಜೈಸ್ವಾಲ್ 10 ರನ್, ಶುಭಮನ್ ಗಿಲ್ 39 ರನ್, ಶಿವಂ ದುಬೆ 13 ರನ್, ಸೂರ್ಯ 8 ರನ್, ರಿಂಕು ಸಿಂಗ್ 1 ರನ್, ರಿಯಾನ್ ಪರಾಗ್ 26 ರನ್, ವಾಷಿಂಗ್ಟನ್ ಸುಂದರ್ 25 ರನ್ ಹಾಗೂ ರವಿ ಬಿಷ್ಣೋಯಿ 8 ರನ್ ಗಳಿಸಿದ್ರೆ, ಸಿರಾಜ್, ಸಂಜು ಸ್ಯಾಮ್ಸನ್ ಶೂನ್ಯ ಸುತ್ತಿದರು.

### ಸೂಪರ್ ಓವರ್ ನಿಯಮವೇನು

- » **ಪ್ರತಿ ತಂಡವು 3 ಬ್ಯಾಟ್ಸ್ ಮೆನ್ ಹಾಗೂ ಓರ್ವ ಬೌಲರನ್ನು ಆಯ್ಕೆ ಮಾಡಬೇಕು.**
- » **ಇಬ್ಬರು ಆಟಗಾರರು ಔಟ್ ಆದರೆ ತಂಡ ಆಲೌಟ್ ಆದಂತೆ ಲೆಕ್ಕ.**
- » **ಸೂಪರ್ ಓವರ್ ನಲ್ಲಿ ಅತ್ಯಧಿಕ ರನ್ ಗಳಿಸಿದ ತಂಡ ವಿಜೇತ ಎಂದು ಘೋಷಣೆ**
- » **ಪ್ರತಿ ತಂಡಕ್ಕೆ 1 ಓವರ್ ಆಡುವ ಅವಕಾಶ**

# ಐರ್ಲೆಂಡ್ ವಿರುದ್ಧ ಅಮೋಘ ಗೆಲುವು

2024ರ ಮಹತ್ವದ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಭಾರತ ಎರಡು ಕಂಚಿನ ಪದಕಗಳನ್ನು ಗೆದ್ದುಕೊಂಡಿದೆ. ಇದರೊಂದಿಗೆ ಗಮನಾರ್ಹ ಪ್ರದರ್ಶನ ನೀಡುತ್ತಿರುವ ಭಾರತೀಯ ಕ್ರೀಡಾಪಟುಗಳು ಇನ್ನಷ್ಟು ಪದಕಗಳನ್ನು ಬಾಚಿಕೊಳ್ಳುವ ಭರವಸೆ ಮೂಡಿಸಿದ್ದಾರೆ.

**» ಭಾರತಕ್ಕೆ ಹಾಕಿ ಕ್ವಾರ್ಟರ್ ಫೈನಲ್ ಸ್ಥಾನ ಬಹುತೇಕ ಖಚಿತ**

ಮಂಗಳವಾರ ನಡೆದ ಹಾಕಿ ಸ್ಪರ್ಧೆಯಲ್ಲಿ ಭಾರತ ಪುರುಷರ ಹಾಕಿ ತಂಡ ಗೆಲುವಿನ ಓಟ ಮುಂದುವರಿಸಿದೆ. ಐರ್ಲೆಂಡ್ ವಿರುದ್ಧ 2-0 ಅಂತರದಲ್ಲಿ ಗೆಲುವು ಸಾಧಿಸುವ ಮೂಲಕ ಗುಂಪು ಹಂತದಲ್ಲಿ 2ನೇ ಗೆಲುವನ್ನು ದಾಖಲಿಸಿ, ಅಂಕಪಟ್ಟಿಯಲ್ಲಿ 7 ಅಂಕ ಪಡೆದು ಮೊದಲ ಸ್ಥಾನಕ್ಕೆ ಜಿಗಿದಿದೆ. ಈ ಮೂಲಕ ಮತ್ತೊಂದು ಪದಕ ಗೆಲ್ಲುವ ವಿಶ್ವಾಸವನ್ನು ಭಾರತದ ಹಾಕಿ ತಂಡ ಮೂಡಿಸಿದೆ. ತಲಾ 2 ಪಂದ್ಯ ಗೆದ್ದಿರುವ ಬೆಲ್ಜಿಯಂ ಮತ್ತು ಆಸ್ಟ್ರೇಲಿಯಾ ತಂಡಗಳು ತಲಾ 6 ಅಂಕ ಪಡೆದು ಕ್ರಮವಾಗಿ 2 ಮತ್ತು 3ನೇ ಸ್ಥಾನದಲ್ಲಿವೆ.



ಐರ್ಲೆಂಡ್ ವಿರುದ್ಧ ಗೆಲುವು ಸಾಧಿಸುವ ಮೂಲಕ ಭಾರತ ತಂಡ ಕ್ವಾರ್ಟರ್ ಫೈನಲ್ ಸ್ಥಾನವನ್ನು ಬಹುತೇಕ ಖಚಿತಪಡಿಸಿಕೊಂಡಿದೆ. ಮುಂದಿನ ಒಂದು ಪಂದ್ಯದಲ್ಲಿ ಗೆದ್ದರೆ ಅಧಿಕೃತವಾಗಿ ಕ್ವಾರ್ಟರ್ ಫೈನಲ್‌ಗೆ ಅರ್ಹತೆ ಪಡೆದುಕೊಳ್ಳಲಿದೆ. ಈ ಹಿಂದಿನ ಪಂದ್ಯಗಳಲ್ಲಿ ಅರ್ಜೆಂಟೀನಾ ವಿರುದ್ಧ 1-1ರಲ್ಲಿ ಡ್ರಾ ಸಾಧಿಸಿದ್ದ ಭಾರತ ತಂಡ, ನ್ಯೂಜಿಲೆಂಡ್ ವಿರುದ್ಧ 3-2 ಪಾಯಿಂಟ್‌ಗಳಿಂದ ಗೆಲುವು ಸಾಧಿಸಿತ್ತು.

**ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಕಮಾಲ್:** ಮಾಜಿ ವಿಶ್ವದ ನಂ.1 ತಾರಾ ಜೋಡಿ ಎಂದೆ ಹೆಸರು ಪಡೆದುಕೊಂಡಿರುವ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಮಂಗಳವಾರ ಭರ್ಜರಿ ಪ್ರದರ್ಶನ ನೀಡಿದೆ. ಗ್ರೂಪ್-ಸಿ ನಲ್ಲಿರುವ ಭಾರತದ ಈ ಜೋಡಿ ಇಂಡೋನೇಷ್ಯಾದ ಫಜರ್ ಅಲ್ಫಿಯಾನ್ ಮತ್ತು ಮುಹಮ್ಮದ್ ರಿಯಾನ್ ಅರ್ಡಿಯಾಂಟೊ ವಿರುದ್ಧ 21-13, 21-13 ಅಂತರದಲ್ಲಿ ಗೆಲುವು ಸಾಧಿಸಿದೆ. ಈ ಮೂಲಕ ಭಾರತಕ್ಕೆ ಪದಕ ತಂದುಕೊಡುವ ವಿಶ್ವಾಸವನ್ನೂ ಈ ಜೋಡಿ ಮೂಡಿಸಿದೆ.

### ಭಾರೀ ಮಳೆ, ಪ್ರವಾಹ ಪರಿಸ್ಥಿತಿ

# ರಾಜ್ಯದಲ್ಲೂ ಕಟ್ಟೆಚ್ಚರ ವಹಿಸಿ

**ಬೆಂಗಳೂರು:** ರಾಜ್ಯದೆಲ್ಲೆಡೆ ಭಾರೀ ಮಳೆಯಾಗುತ್ತಿದ್ದು ಪ್ರವಾಹ, ಭೂಕುಸಿತದಂತಹ ಪರಿಸ್ಥಿತಿ ಎದುರಿಸಲು ಎಲ್ಲಾ ಜಿಲ್ಲಾಧಿಕಾರಿಗಳು ಕಟ್ಟೆಚ್ಚರ ವಹಿಸುವಂತೆ ಹಾಗೂ ಪೂರ್ವ ತಯಾರಿ ಮಾಡಿಕೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಖಡಕ್ ಸೂಚನೆ ನೀಡಿದ್ದಾರೆ.



ಜಲಾಶಯಗಳ ನೀರಿನ ಮಟ್ಟದ ಕುರಿತು ನಿರಂತರ ಪರಿಶೀಲನೆ ನಡೆಸಿ ಪ್ರವಾಹ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಕರಾವಳಿ ಹಾಗೂ ಮಲೆನಾಡು ಭಾಗದಲ್ಲಿ ಅಲ್ಲಲ್ಲಿ ಭೂಕುಸಿತದ ಪ್ರಕರಣಗಳು ವರದಿಯಾಗುತ್ತಿವೆ. ಈ ಕುರಿತು ಸಹ ಜಿಲ್ಲಾಧಿಕಾರಿಗಳು ಎಚ್ಚರವಹಿಸುವಂತೆ ತಿಳಿಸಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರು ಸಹ ಪ್ರವಾಹ ಪರಿಸ್ಥಿತಿಯ ನಿರ್ವಹಣೆಯ ಮೇಲ್ವಿಚಾರಣೆ ನಡೆಸುವಂತೆ ನಿರ್ದೇಶನ ನೀಡಿದ್ದಾರೆ.

ಅಧಿಕಾರಿಗಳು ಪ್ರವಾಹ ಪರಿಸ್ಥಿತಿಯನ್ನು ಸಮರೋಪಾದಿಯಲ್ಲಿ ನಿರ್ವಹಿಸುವಂತೆ, ರಕ್ಷಣೆ ಹಾಗೂ ಪರಿಹಾರ ಕಾರ್ಯಚರಣೆಗಳನ್ನು ಕೈಗೊಳ್ಳುವಂತೆ ಹಾಗೂ ಪ್ರವಾಹ ಪೀಡಿತರಿಗೆ ಅಗತ್ಯಕ್ಕನುಸಾರವಾಗಿ ಕಾಳಜಿ ಕೇಂದ್ರಗಳನ್ನು ತೆರೆದು ಎಲ್ಲ ಸೌಲಭ್ಯ ಕಲ್ಪಿಸುವಂತೆ ಸೂಚಿಸಿದ್ದಾರೆ. ಎಲ್ಲ ಜಿಲ್ಲೆಗಳಲ್ಲಿ ನಿಯಂತ್ರಣ ಕೊಠಡಿ ತೆರೆದು ದಿನದ 24 ಗಂಟೆಯೂ ಕಾರ್ಯ ನಿರ್ವಹಿಸಲು ವ್ಯವಸ್ಥೆ ಮಾಡುವಂತೆ ಸೂಚಿಸಿದ್ದಾರೆ. ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿಯೇ ಲಭ್ಯರಿದ್ದು ಎಚ್ಚರ ವಹಿಸುವಂತೆ ತಾಕೀತು ಮಾಡಿದ್ದಾರೆ.



# ಬಿಜೆಪಿ-ಜೆಡಿಎಸ್ ಪಾದಯಾತ್ರೆ, ರಾಜಕೀಯ ನಾಟಕ

**ಬೆಂಗಳೂರು:** ಬಿಜೆಪಿ-ಜೆಡಿಎಸ್ ನಾಯಕರು ಪಾದಯಾತ್ರೆ ಮೂಲಕ ರಾಜಕೀಯ ನಾಟಕ ಮಾಡುತ್ತಿದ್ದಾರೆ ಎಂದು ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹಮದ್ ವಾಗ್ದಾಳಿ ನಡೆಸಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬಿಜೆಪಿ-ಜೆಡಿಎಸ್ ಬೆಂಗಳೂರಿನಿಂದ ಮೈಸೂರುವರೆಗೆ ಪಾದಯಾತ್ರೆ ಮಾಡುತ್ತಿದ್ದಾರೆ. ಯಾವ ಪುರುಷಾರ್ಥಕ್ಕೆ ಪಾದಯಾತ್ರೆ ಮಾಡ್ತಿದ್ದಾರೆ ಗೊತ್ತಿಲ್ಲ.ಇದು ರಾಜಕೀಯ ನಾಟಕ ಯಾತ್ರೆ. ಎರಡು ಹಗರಣಗಳ ಬಗ್ಗೆ ಬಿಜೆಪಿ-ಜೆಡಿಎಸ್ ಹೇಳ್ತಿದ್ದಾರೆ. ಸದನದಲ್ಲಿ ಸಿಎಂ ಉತ್ತರ ಕೊಡಲು ಮುಂದಾದಾಗ ಅವರಿಗೆ ಉತ್ತರ ನೀಡಲು ಅವಕಾಶ ಕೊಡಲಿಲ್ಲ. ಅಧಿವೇಶನದಲ್ಲಿ ಚರ್ಚೆ ಮಾಡದೇ ಬಿಜೆಪಿ-ಜೆಡಿಎಸ್ ಪಲಾಯನ ಮಾಡಿದೆ. ಸದನದ ಬಾವಿಗಳಿದು ಸಿಎಂ ಉತ್ತರ ಕೊಡದಂತೆ ಮಾಡಿ ಸದನದ ಸಮಯ ಹಾಳು ಮಾಡಿದ್ದಾರೆ ಅಂತ ಕಿಡಿಕಾರಿದರು.



ಬಿಜೆಪಿ-ಜೆಡಿಎಸ್‌ನವರಿಗೆ ಭ್ರಷ್ಟಾಚಾರದ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ.4 ವರ್ಷ ಅಧಿಕಾರದಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ಮಾಡಿದ್ದಾರೆ. ಅದಕ್ಕೆ ಜನ ಕಾಂಗ್ರೆಸ್‌ಗೆ ಅವಕಾಶ ನೀಡಿದ್ದಾರೆ. ರಾಜ್ಯದಲ್ಲಿ 40% ಬಿಜೆಪಿ ಸರ್ಕಾರ ಇತ್ತು. ನಿರ್ದಿಷ್ಟ ದಾಖಲೆ ಇಲ್ಲದೇ ಗಾಳಿಯಲ್ಲಿ ಗುಂಡು ಹೊಡೆಯುತ್ತಿದ್ದಾರೆ. ಕುಮಾರಸ್ವಾಮಿ ಹಿಟ್ ಅಂಡ್ ರನ್ ಮಾಡುತ್ತಿದ್ದಾರೆ. ಬಿಜೆಪಿ ಶೂಟ್ ಮಾಡಿ ಓಡಿ ಹೋಗೋ ಕೆಲಸ ಮಾಡ್ತಿದ್ದಾರೆ ಅಂತ ವಾಗ್ದಾಳಿ ನಡೆಸಿದರು.

40 ವರ್ಷ ರಾಜಕೀಯದಲ್ಲಿ ಯಾವುದೇ ಆರೋಪ ಇಲ್ಲದೆ ಸಿದ್ದರಾಮಯ್ಯ ಅವರು ಕೆಲಸ ಮಾಡ್ತಿದ್ದಾರೆ.ಸಿದ್ದರಾಮಯ್ಯ ಮೇಲಿನ ಆರೋಪ ನಿರಾಧಾರ. ಕೇಂದ್ರ ಸರ್ಕಾರ ಮೋದಿ ಅವರು ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಷಡ್ಯಂತ್ರ ಮಾಡ್ತಿದ್ದಾರೆ.ನಮ್ಮ ಸರ್ಕಾರ ಉತ್ತಮವಾಗಿ ಕೆಲಸ ಮಾಡ್ತಿದೆ. ಇದನ್ನ ಸಹಿಸಲು ಸಾಧ್ಯವಾಗ್ತಿಲ್ಲ.ಕೇಂದ್ರ ಸರ್ಕಾರ ನಮ್ಮ ಮೇಲೆ ಷಡ್ಯಂತ್ರ ಮಾಡ್ತಿದ್ದಾರೆ. ಇದಕ್ಕೆ ನಾವು ಭಯ ಬೀಳೊಲ್ಲ.ಬಿಜೆಪಿ ಭ್ರಷ್ಟಾಚಾರವನ್ನು ಬಯಲಿಗೆಳೆಯೋ ಕೆಲಸ ಮಾಡ್ತೀವಿ.ಬಿಜೆಪಿಯವರ ಅಕ್ರಮ ಬೆತ್ತಲೆ ಮಾಡೋ ಕೆಲಸ ಮಾಡ್ತೀವಿ ಅಂತ ಸವಾಲ್ ಹಾಕಿದ್ರು.

ವಾಲ್ಮೀಕಿ ಹಗರಣ ಗೊತ್ತಾಗದ ಕೂಡಲೇ ಸಿಎಂ SIT ತನಿಖೆ ಆದೇಶ ಮಾಡಿದ್ರು.ಮುಡಾ ಕೇಸ್ ನಲ್ಲಿ ಸ್ವತಃ ಸಿಎಂ ಅವರು ನಿವೃತ್ತಿ ನ್ಯಾಯಮೂರ್ತಿ ನೇತೃತ್ವದಲ್ಲಿ ತನಿಖೆಗೆ ಆದೇಶ ಮಾಡಿದ್ದಾರೆ. ಸಿಎಂ ಈಗಾಗಲೇ ಹೇಳಿದ್ದಾರೆ. ಯಾರೇ ತಪ್ಪು ಮಾಡಿದ್ರು ಕ್ರಮ ತೆಗೆದುಕೊಳ್ತೀವಿ ಅಂತ ಹೇಳಿದ್ದಾರೆ.ಬಿಜೆಪಿ ಅವರು ರಾಜಕೀಯ ಮಾಡಲು ಹೊರಟಿದ್ದಾರೆ.ಬಿಜೆಪಿ-ಜೆಡಿಎಸ್ ಅಕ್ರಮ ಬಯಲಿಗೆ ಎಳೆಯುತ್ತೇವೆ. ಆಗ ಏನ್ ಮಾಡ್ತಾರೆ ನೋಡೋಣ ಅಂತ ಸವಾಲ್ ಹಾಕಿದ್ರು.

ಬಿಜೆಪಿ ಅವಧಿಯಲ್ಲಿ 21 ಹಗರಣ ಆಗಿದೆ. ಇದರ ಬಗ್ಗೆ ನಾವು ತನಿಖೆ ಮಾಡುತ್ತೇವೆ. ಬಿಜೆಪಿ-ಜೆಡಿಎಸ್ ಕರ್ಮಕಾಂಡ ಮುಚ್ಚಿ ಹಾಕಿಕೊಳ್ಳಲು ನಮ್ಮ ಮೇಲೆ ಆರೋಪ ಮಾಡ್ತಿದ್ದಾರೆ. ಬಿಜೆಪಿ-ಜೆಡಿಎಸ್ ಪಾದಯಾತ್ರೆಯನ್ನು ದೆಹಲಿಗೆ ಮಾಡಲಿ. ರಾಜ್ಯದಿಂದ 19 ಜನ ಸಂಸದರು ಇದ್ದರೂ ಬಜೆಟ್ ನಲ್ಲಿ ಅನ್ಯಾಯವಾಗಿದೆ. ಹೀಗಾಗಿ ರಾಜ್ಯದ ಜನರ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com